VOLUME: 16 | 19 APRIL 2026 | ಭಾನುವಾರ | RS: 2 | PAGE: 06 ISSUE: 76 ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com



ಕಿಯಾರಾ ಅಡ್ವಾಣಿ, ತಮ್ಮ ಸಿನಿಮಾ, ಖಾಸಗಿ ಜೀವನ, ತಾಯ್ತನ ಇನ್ನೂ ಹಲವು ವಿಷಯಗಳ ಬಗ್ಗೆ ಮಾತನಾಡಿದ್ದಾರೆ. ಇದೇ ವೇಳೆ ಅವರು 'ಟಾಕ್ಸಿಕ್' ಸಿನಿಮಾದ ತಮ್ಮ ಪಾತ್ರದ ಬಗ್ಗೆಯೂ ಮಾತನಾಡಿದ್ದಾರೆ. ಅವರು ಮಾತುಗಳಿಂದ 'ಟಾಕ್ಸಿಕ್' ಸಿನಿಮಾದ ಅವರ ನಾಡಿಯಾ ಪಾತ್ರ ಬಹಳ ಭಿನ್ನವಾದ ಮತ್ತು ಸವಾಲಿನ ಪಾತ್ರ ಹಾಗೂ ಅದು ಮಾಸ್ ಮಸಾಲ ಸಿನಿಮಾದ ನಾಯಕಿಯ ಪಾತ್ರವಲ್ಲ ಎಂದಿದ್ದಾರೆ.

BHARATHA SARATHI
KANNADA DAILY NEWS PAPER
CALL 9740160669

# ಭಾರತ ಸಾರಥಿ

RNI KARKAN2011/44806
prabhavaa.com
ಸದಾ ನಿಮ್ಮೊಂದಿಗೆ ಕನ್ನಡ ದಿನಪತ್ರಿಕೆ



ಸಂಪಾದಕ
ಗಂಡಸಿ ಸದಾನಂದಸ್ವಾಮಿ



"ನಿಮ್ಮ ನೋವು ಮತ್ತು ನಿರಾಶೆಯಲ್ಲಿ ನಾನು ಸಹ ಭಾಗಿಯಾಗಿದ್ದೇನೆ. ಇಂದು ಮಸೂದೆಯನ್ನು ಅಂಗೀಕರಿಸಲು ಅಗತ್ಯವಿರುವ 66 ಪ್ರತಿಶತ ಮತಗಳನ್ನು ನಾವು ಪಡೆಯದಿದ್ದರೂ ಮಹಿಳಾ ಶಕ್ತಿಯ ಸಂಪೂರ್ಣ ಬೆಂಬಲ ಮತ್ತು ಆಶೀರ್ವಾದ ನಮ್ಮೊಂದಿಗೆ ಇದೆ ಎಂದು ನನಗೆ ತಿಳಿದಿದೆ. ನಿನ್ನೆ, ನಮಗೆ ಸಂಖ್ಯಾಬಲವಿರಲಿಲ್ಲ. ಆದರೆ ಅದರರ್ಥ ನಾವು ಸೋತಿದ್ದೇವೆ ಎಂದಲ್ಲ" ಎಂದು ಪ್ರಧಾನಿ ಹೇಳಿದ್ದಾರೆ. "ಕಾಂಗ್ರೆಸ್ ಈ ರಾಜಕೀಯವನ್ನು ಬ್ರಿಟಿಷರಿಂದ ಆನುವಂಶಿಕವಾಗಿ ಪಡೆದುಕೊಂಡಿದೆ. ಕಾಂಗ್ರೆಸ್ ಇಂದಿಗೂ ಅದೇ ಊರುಗೋಲಿನ ಮೇಲೆಯೇ ನಡೆಯುತ್ತಿದೆ. ದೇಶದಲ್ಲಿ ವಿಭಜನೆಗಳನ್ನು ಸೃಷ್ಟಿಸುವ ಭಾವನೆಗಳನ್ನು ಕಾಂಗ್ರೆಸ್ ಯಾವಾಗಲೂ ಪ್ರಚೋದಿಸುತ್ತಿದೆ. ಅದಕ್ಕಾಗಿಯೇ ಗಡಿ ನಿರ್ಣಯ ಅಥವಾ ಪುನರ್ವಿಂಗಡಣೆ ಕೆಲವು ರಾಜ್ಯಗಳಿಗೆ ಹಾನಿ ಮಾಡುತ್ತದೆ ಎಂಬ ಸುಳ್ಳನ್ನು ಹರಡಲಾಯಿತು" ಎಂದು ಅವರು ಆರೋಪಿಸಿದ್ದಾರೆ.

# ಕಾಂಗ್ರೆಸ್ ವರ್ತನೆಗೆ ಮೋದಿ ಗರಂ

ನವದೆಹಲಿ: ಪ್ರಧಾನಿ ನರೇಂದ್ರ ಮೋದಿ ರಾಷ್ಟ್ರವನ್ನುದ್ದೇಶಿಸಿ ಭಾಷಣ ಮಾಡುತ್ತಿದ್ದಾರೆ. ಈ ವೇಳೆ ನಿನ್ನೆ ಸಂಸತ್ ಅಧಿವೇಶನದಲ್ಲಿ ಮಹಿಳಾ ಮೀಸಲಾತಿ ಮಸೂದೆ ಅಂಗೀಕಾರವಾಗದ ಹಿನ್ನೆಲೆಯಲ್ಲಿ ವಿರೋಧ ಪಕ್ಷಗಳ ವಿರುದ್ಧ ಮೋದಿ ಹರಿಹಾಯ್ದಿದ್ದಾರೆ. ಶಾಸಕಾಂಗಗಳಲ್ಲಿ ಮಹಿಳಾ ಮೀಸಲಾತಿಯನ್ನು ಜಾರಿಗೆ ತರುವ ಮಸೂದೆಯು ಲೋಕಸಭೆಯಲ್ಲಿ ಸೋತ ನಂತರ ಪ್ರಧಾನಿ ನರೇಂದ್ರ ಮೋದಿ ದೇಶವನ್ನುದ್ದೇಶಿಸಿ ಮಾತನಾಡಿದ್ದಾರೆ.

"ಮಹಿಳಾ ಪ್ರಗತಿಗಾಗಿ ನಮ್ಮ ಅತ್ಯುತ್ತಮ ಪ್ರಯತ್ನಗಳ ಹೊರತಾಗಿಯೂ ನಾವು ಯಶಸ್ವಿಯಾಗಲಿಲ್ಲ. ಇದಕ್ಕಾಗಿ ನಾನು ರಾಷ್ಟ್ರದ ಎಲ್ಲಾ ತಾಯಂದಿರು ಮತ್ತು ಸಹೋದರಿಯರಲ್ಲಿ ಕ್ಷಮೆಯಾಚಿಸುತ್ತೇನೆ. ಮಹಿಳೆಯರ ಹಕ್ಕುಗಳನ್ನು ಕಸಿದುಕೊಂಡ ವಿರೋಧ ಪಕ್ಷಗಳು ಈ ಮಸೂದೆ ಅಂಗೀಕಾರವಾಗದಿದ್ದುದಕ್ಕೆ ಚಪ್ಪಾಳೆ ತಟ್ಟುತ್ತಾ ಸಂಭ್ರಮಿಸಿದ್ದು ವಿಪರ್ಯಾಸ" ಎಂದು ಮೋದಿ ಟೀಕಿಸಿದ್ದಾರೆ.

"ನಮಗೆ ರಾಷ್ಟ್ರದ ಹಿತಾಸಕ್ತಿ ಅತ್ಯಂತ ಮುಖ್ಯ. ಆದರೆ ಕೆಲವರಿಗೆ ಪಕ್ಷದ ಹಿತಾಸಕ್ತಿಯನ್ನು ರಾಷ್ಟ್ರೀಯ ಹಿತಾಸಕ್ತಿಗಿಂತ ಹೆಚ್ಚು. ಅದರ ಪರಿಣಾಮವನ್ನು ಮಹಿಳೆಯರು ಮತ್ತು ದೇಶವು ಅನುಭವಿಸಬೇಕಾಗುತ್ತದೆ. ಈ ಬಾರಿಯೂ ಇದೇ ಆಗಿದೆ. ಕಾಂಗ್ರೆಸ್, ಡಿಎಂಕೆ, ಟಿಎಂಸಿ ಮತ್ತು ಸಮಾಜವಾದಿ ಪಕ್ಷದಂತಹ ಪಕ್ಷಗಳ ಸ್ವಾರ್ಥ ರಾಜಕೀಯದಿಂದಾಗಿ, ದೇಶದ ಮಹಿಳೆಯರು ತೊಂದರೆ ಅನುಭವಿಸಿದ್ದಾರೆ" ಎಂದು ಪ್ರಧಾನಿ ಮೋದಿ ಹೇಳಿದ್ದಾರೆ.

"ಮಹಿಳೆಯ ಹಕ್ಕುಗಳನ್ನು ಸ್ಥಾಪಿಸುವ ಈ ಮಸೂದೆಯನ್ನು ಸೋಲಿಸುವ ಮೂಲಕ ವಿರೋಧ ಪಕ್ಷಗಳು ಭ್ರೂಣ ಹತ್ಯೆಯ



ಪಾಪ ಹೊತ್ತುಕೊಂಡಿವೆ. ಮಹಿಳಾ ಮೀಸಲಾತಿ ಮಸೂದೆಯನ್ನು ನಾವು ಇಲ್ಲಿಗೇ ಬಿಡುವುದಿಲ್ಲ. ನಮ್ಮ ಸರ್ಕಾರ ಇದಕ್ಕಿರುವ ಎಲ್ಲಾ ಅಡೆತಡೆಗಳನ್ನು ತೆಗೆದುಹಾಕುತ್ತದೆ. ಸಂಸತ್ತಿನಲ್ಲಿ ಅಗತ್ಯವಿರುವ ಸಂಖ್ಯಾಬಲದ ಕೊರತೆಯಿದ್ದರೂ ಸಹ ಎಲ್ಲ ಅಡೆತಡೆಗಳನ್ನು ತೆರವುಗೊಳಿಸುತ್ತೇವೆ. ಮಹಿಳಾ ಮೀಸಲಾತಿ ಮಸೂದೆಗೆ ನಮ್ಮ ಸರ್ಕಾರ ಬದ್ಧವಾಗಿದೆ" ಎಂದು ಪ್ರಧಾನಿ ಮಹಿಳೆಯರಿಗೆ ಭರವಸೆ ನೀಡಿದ್ದಾರೆ.

"ನಿಮ್ಮ ನೋವು ಮತ್ತು ನಿರಾಶೆಯಲ್ಲಿ ನಾನು ಸಹ ಭಾಗಿಯಾಗಿದ್ದೇನೆ. ಇಂದು ಮಸೂದೆಯನ್ನು ಅಂಗೀಕರಿಸಲು ಅಗತ್ಯವಿರುವ 66 ಪ್ರತಿಶತ ಮತಗಳನ್ನು ನಾವು ಪಡೆಯದಿದ್ದರೂ ಮಹಿಳಾ ಶಕ್ತಿಯ ಸಂಪೂರ್ಣ ಬೆಂಬಲ ಮತ್ತು ಆಶೀರ್ವಾದ ನಮ್ಮೊಂದಿಗೆ ಇದೆ ಎಂದು ನನಗೆ ತಿಳಿದಿದೆ. ನಿನ್ನೆ, ನಮಗೆ ಸಂಖ್ಯಾಬಲವಿರಲಿಲ್ಲ. ಆದರೆ ಅದರರ್ಥ ನಾವು ಸೋತಿದ್ದೇವೆ ಎಂದಲ್ಲ" ಎಂದು ಪ್ರಧಾನಿ ಹೇಳಿದ್ದಾರೆ.

"ಕಾಂಗ್ರೆಸ್ ಈ ರಾಜಕೀಯವನ್ನು ಬ್ರಿಟಿಷರಿಂದ ಆನುವಂಶಿಕವಾಗಿ ಪಡೆದುಕೊಂಡಿದೆ. ಕಾಂಗ್ರೆಸ್ ಇಂದಿಗೂ ಅದೇ ಊರುಗೋಲಿನ ಮೇಲೆಯೇ ನಡೆಯುತ್ತಿದೆ. ದೇಶದಲ್ಲಿ ವಿಭಜನೆಗಳನ್ನು ಸೃಷ್ಟಿಸುವ ಭಾವನೆಗಳನ್ನು ಕಾಂಗ್ರೆಸ್ ಯಾವಾಗಲೂ ಪ್ರಚೋದಿಸುತ್ತಿದೆ. ಅದಕ್ಕಾಗಿಯೇ ಗಡಿ ನಿರ್ಣಯ ಅಥವಾ ಪುನರ್ವಿಂಗಡಣೆ ಕೆಲವು ರಾಜ್ಯಗಳಿಗೆ ಹಾನಿ ಮಾಡುತ್ತದೆ ಎಂಬ ಸುಳ್ಳನ್ನು ಹರಡಲಾಯಿತು" ಎಂದು ಅವರು ಆರೋಪಿಸಿದ್ದಾರೆ.

2029 ರಲ್ಲಿ ಶಾಸಕಾಂಗಗಳಲ್ಲಿ ಮಹಿಳೆಯರಿಗೆ ಮೀಸಲಾತಿಯನ್ನು ಜಾರಿಗೆ ತರುವ ಮತ್ತು ಲೋಕಸಭೆಯ ಸ್ಥಾನಗಳ ಸಂಖ್ಯೆಯನ್ನು ಹೆಚ್ಚಿಸುವ ಸಂವಿಧಾನ ತಿದ್ದುಪಡಿ ಮಸೂದೆಯನ್ನು ಶುಕ್ರವಾರ ಕೆಳಮನೆಯಲ್ಲಿ ಸೋಲಿಸಲಾಯಿತು. ಹಾಜರಿರುವ ಮತ್ತು ಮತ ಚಲಾಯಿಸುವ ಕನಿಷ್ಠ ಮೂರನೇ ಎರಡರಷ್ಟು ಸದಸ್ಯರ ಬೆಂಬಲವನ್ನು ಪಡೆದರೆ ಸಂವಿಧಾನ ಆ ತಿದ್ದುಪಡಿ ಮಸೂದೆಯನ್ನು ಅಂಗೀಕರಿಸಲಾಗುತ್ತದೆ. ಆದರೆ ಮೂರು ಮಸೂದೆಗಳ ಮೇಲಿನ ಚರ್ಚೆಯ ನಂತರ ನಡೆದ ಸಭೆಯಲ್ಲಿ, 298 ಸದಸ್ಯರು ಮಸೂದೆಯನ್ನು ಬೆಂಬಲಿಸಿದರೆ, 230 ಸದಸ್ಯರು ಅದರ ವಿರುದ್ಧ ಮತ ಚಲಾಯಿಸಿದರು.

ಈ ನಿರ್ಣಾಯಕ ಮಸೂದೆ ಅಂಗೀಕಾರಕ್ಕೆ ಮೂರನೇ ಎರಡರಷ್ಟು ಬಹುಮತದ ಅಗತ್ಯವಿತ್ತು. ಆದರೆ ಆಡಳಿತಾರೂಢ ಬಿಜೆಪಿ ನೇತೃತ್ವದ ಮೈತ್ರಿಕೂಟವು ಸಂಖ್ಯೆಗಳನ್ನು ಒಟ್ಟುಗೂಡಿಸಲು ಸಾಧ್ಯವಾಗಲಿಲ್ಲ. ಈ ಬಾರಿಯೂ ಇದೇ ಆಗಿದೆ. ಕಾಂಗ್ರೆಸ್, ಡಿಎಂಕೆ, ಟಿಎಂಸಿ ಮತ್ತು ಸಮಾಜವಾದಿ ಪಕ್ಷದಂತಹ ಪಕ್ಷಗಳ ಸ್ವಾರ್ಥ ರಾಜಕೀಯದಿಂದಾಗಿ, ದೇಶದ ಮಹಿಳೆಯರು ತೊಂದರೆ ಅನುಭವಿಸಿದ್ದಾರೆ" ಶುಕ್ರವಾರ ರಾತ್ರಿ ಲೋಕಸಭೆಯಲ್ಲಿ ಮಸೂದೆಯ ಮೇಲಿನ ಮತದಾನದ ಸಮಯದಲ್ಲಿ, 298 ಸದಸ್ಯರು ಅದರ ಪರವಾಗಿ ಮತ ಚಲಾಯಿಸಿದರೆ, 230 ಸಂಸದರು ಅದರ ವಿರುದ್ಧ ಮತ ಚಲಾಯಿಸಿದರು.

ಮತ ಚಲಾಯಿಸಿದ 528 ಸದಸ್ಯರಲ್ಲಿ ಮಸೂದೆಗೆ ಮೂರನೇ ಎರಡರಷ್ಟು ಬಹುಮತಕ್ಕೆ 352 ಮತಗಳು ಬೇಕಾಗಿದ್ದವು.

ಮಹಿಳಾ ಮೀಸಲಾತಿಯನ್ನು ಶೀಘ್ರವಾಗಿ ಜಾರಿಗೆ ತರುವ ಮಸೂದೆಯನ್ನು ಬೆಂಬಲಿಸದ ಕಾಂಗ್ರೆಸ್ ಮತ್ತು ಇತರ ಪಕ್ಷಗಳು ಬೆಲೆ ತೆರಬೇಕಾಗುತ್ತದೆ ಎಂದು ಪ್ರಧಾನಿ ನರೇಂದ್ರ ಮೋದಿ ಶನಿವಾರ ಹೇಳಿದ್ದಾರೆ.

ಅಲ್ಲದೆ ಕೇಂದ್ರ ಸಚಿವರು ವಿರೋಧ ಪಕ್ಷಗಳ 'ಮಹಿಳಾ ವಿರೋಧಿ' ಮನಸ್ಥಿತಿಯನ್ನು ಜನರ ಮುಂದೆ ಬಹಿರಂಗಪಡಿಸಬೇಕೆಂದು ಪ್ರಧಾನಿ ಮೋದಿ ಸೂಚಿಸಿದ್ದಾರೆ ಎಂದು ಮೂಲಗಳು ತಿಳಿಸಿವೆ.

2029ರ ಲೋಕಸಭಾ ಚುನಾವಣೆಯಲ್ಲಿ ಮಹಿಳಾ ಮೀಸಲಾತಿಯನ್ನು ಜಾರಿಗೆ ತರಲು ತಮ್ಮ ಸರ್ಕಾರದ ಬೆಂಬಲ ಮತ್ತು ಬದ್ಧತೆಯನ್ನು ಪ್ರಧಾನಿ ಮೋದಿ ಅವರು ಶನಿವಾರ ನಡೆದ ಸಚಿವ ಸಂಪುಟ ಸಭೆಯಲ್ಲಿ ಪುನರುಚ್ಚರಿಸಿದರು.

ವಿರೋಧ ಪಕ್ಷಗಳು ಮಹಿಳಾ ಮೀಸಲಾತಿಗೆ ವಿರುದ್ಧವಾಗಿ ಮತ ಚಲಾಯಿಸುವ ಮೂಲಕ ಅತಿ ದೊಡ್ಡ ತಪ್ಪು ಮಾಡಿವೆ ಮತ್ತು ಅದಕ್ಕೆ ತಕ್ಕ ಬೆಲೆ ತೆರಬೇಕಾಗುತ್ತದೆ ಎಂದು ಪ್ರಧಾನಿ ಮೋದಿ, ಸಂಪುಟ ಸಭೆಯಲ್ಲಿ ಹೇಳಿದ್ದಾರೆ ಎಂದು ಮೂಲಗಳು ತಿಳಿಸಿವೆ.ಈ ವಿಷಯವನ್ನು ತಳಮಟ್ಟಕ್ಕೆ ಅಂದರೆ ದೇಶದ ಪ್ರತಿ ಹಳ್ಳಿಗೂ ಕೊಂಡೊಯ್ಯುವಂತೆ ಮತ್ತು ವಿರೋಧ ಪಕ್ಷಗಳ 'ಮಹಿಳಾ ವಿರೋಧಿ' ಮನಸ್ಥಿತಿಯನ್ನು ಜನರ ಮುಂದೆ ಬಹಿರಂಗಪಡಿಸುವಂತೆ ಪ್ರಧಾನಿ ಮೋದಿ ತಮ್ಮ ಸಂಪುಟ ಸಹೋದ್ಯೋಗಿಗಳಿಗೆ ಸೂಚಿಸಿದ್ದಾರೆ.

ವಿರೋಧ ಪಕ್ಷಗಳ ನಿಲುವನ್ನು ಖಂಡಿಸಿ ನಿಮ್ಮ ನಿಮ್ಮ ಸಾಮಾಜಿಕ ಮಾಧ್ಯಮ ಹ್ಯಾಂಡಲ್‌ಗಳಲ್ಲಿ ಪೋಸ್ಟ್ ಮಾಡುವಂತೆ ಮೋದಿ ಸಚಿವರಿಗೆ ಸೂಚಿಸಿದ್ದಾರೆ ಎಂದು ಮೂಲಗಳು ತಿಳಿಸಿವೆ.

## ತವರಲ್ಲೇ ಮುಗ್ಗರಿಸಿದ ಆರ್‌ಸಿಬಿ

ಬೆಂಗಳೂರು: ಮನೆ ಹುಡುಗ ಕೆಎಲ್ ರಾಹುಲ್, ಟ್ರಿಸ್ಟನ್ ಸ್ಟಬ್ಸ್ ಅವರ ಅರ್ಧಶತಕ, ಕೊನೆಯಲ್ಲಿ ಡೇವಿಡ್ ಮಿಲ್ಲರ್ ಅವರ ಸ್ಫೋಟಕ ಆಟದಿಂದ ಡೆಲ್ಲಿ ಕ್ಯಾಪಿಟಲ್ಸ್ ಆರ್‌ಸಿಬಿ ವಿರುದ್ಧ 6 ವಿಕೆಟ್‌ಗಳ ರೋಚಕ ಸಾಧಿಸಿದೆ.



ಟಾಸ್ ಸೋತು ಮೊದಲು ಬ್ಯಾಟ್ ಬೀಸಿದ ಆರ್‌ಸಿಬಿ 8 ವಿಕೆಟ್ ನಷ್ಟಕ್ಕೆ 175 ರನ್ ಹೊಡೆಯಿತು. ಈ ಮೊತ್ತವನ್ನು ಬೆನ್ನಟ್ಟಿದ ಡೆಲ್ಲಿ 1 ಎಸೆತ ಬಾಕಿ ಇರುವಂತೆಯೇ 4 ವಿಕೆಟ್ ನಷ್ಟಕ್ಕೆ 179 ರನ್ ಹೊಡೆದು ಟೂರ್ನಿಯಲ್ಲಿ ಮೂರನೇ ಜಯ ಗಳಿಸಿತು.

ಕೊನೆಯ 4 ಓವರ್‌ನಲ್ಲಿ ಡೆಲ್ಲಿ ಗೆಲ್ಲಲು 41 ರನ್ ಬೇಕಿತ್ತು. ಹ್ಯಾಜಲ್‌ವುಡ್ ಎಸೆದ 17ನೇ ಓವರ್‌ನಲ್ಲಿ 4 ರನ್ ಬಂದರೆ ಭುವನೇಶ್ವರ್ ಎಸೆದ 18ನೇ ಓವರ್‌ನಲ್ಲಿ 12 ರನ್ ಬಂತು. ರಸಿಕ್ ಧಾರ್ ಎಸೆದ 19ನೇ ಓವರ್‌ನಲ್ಲಿ 10 ರನ್ ಬಂದಿತ್ತು.

ಕೊನೆಯ 6 ಎಸೆತದಲ್ಲಿ 15 ರನ್ ಬೇಕಿತ್ತು. ರೊಮಾರಿಯೋ ಶೆಫರ್ಡ್ ಎಸೆದ ಮೊದಲ ಎರಡು ಎಸೆತದಲ್ಲಿ ಎರಡು ರನ್ ಬಂತು. ಮೂರು ಮತ್ತು ನಾಲ್ಕನೇ ಎಸೆತದಲ್ಲಿ ಮಿಲ್ಲರ್ ಸಿಕ್ಸ್ ಸಿಡಿಸಿದರು. ಐದನೇ ಎಸೆತದಲ್ಲಿ ಬೌಂಡರಿ ಸಿಡಿಸುವ ಮೂಲಕ ಮಿಲ್ಲರ್ ತಂಡಕ್ಕೆ ಜಯವನ್ನು ತಂದುಕೊಟ್ಟರು.

ಸ್ಟಬ್ಸ್ ಮತ್ತು ಮಿಲ್ಲರ್ 24 ಎಸೆತಗಳಲ್ಲಿ 45 ರನ್ ಜೊತೆಯಾಟವಾಡಿ ಪಂದ್ಯವನ್ನು ಡೆಲ್ಲಿಯತ್ತ ತಿರುಗಿಸಿದರು. ಸ್ಟಬ್ಸ್ ಔಟಾಗದೇ 60 ರನ್(47 ಎಸೆತ, 4 ಬೌಂಡರಿ, 1 ಸಿಕ್ಸ್), ಡೇವಿಡ್ ಮಿಲ್ಲರ್ ಔಟಾಗದೇ 22 ರನ್(10 ಎಸೆತ, 1 ಬೌಂಡರಿ, 2 ಸಿಕ್ಸ್) ಸಿಡಿಸಿದರು.

ಡೆಲ್ಲಿ 2.5 ಓವರ್‌ಗಳಲ್ಲಿ 18 ರನ್ ಗಳಿಸುವಷ್ಟರಲ್ಲಿ ಪ್ರಮುಖ ಮೂರು ವಿಕೆಟ್ ಕಳೆದುಕೊಂಡಿತ್ತು. ಭುವನೇಶ್ವರ್ ಕುಮಾರ್ ಆರಂಭದಲ್ಲೇ ನಿಸ್ಸಾಂಕ, ಕರುಣ್ ನಾಯರ್, ಸಮೀರ್ ರಿಜ್ವಿ ವಿಕೆಟ್ ಪಡೆದರು. ಈ ಸಂಕಷ್ಟದ ಸಮಯದಲ್ಲಿ ಕೆಎಲ್ ರಾಹುಲ್ ಮತ್ತು ಸ್ಟಬ್ಸ್ 44 ಎಸೆತಗಳಲ್ಲಿ 69 ರನ್ ಜೊತೆಯಾಟವಾಡಿ ತಂಡಕ್ಕೆ ಚೇತರಿಕೆ ನೀಡಿದರು.

ಅರ್ಧಶತಕ ಸಿಡಿಸಿ ಮುನ್ನುಗ್ಗುತ್ತಿದ್ದ ಕೆಎಲ್ ರಾಹುಲ್ 57 ರನ್ (34 ಎಸೆತ, 6 ಬೌಂಡರಿ, 2 ಸಿಕ್ಸ್) ಗಳಿಸಿದ್ದಾಗ ಸಿಕ್ಸ್ ಸಿಡಿಸಲು ಹೋಗಿ ಕೊಹ್ಲಿ ಹಿಡಿದ ಅತ್ಯುತ್ತಮ ಕ್ಯಾಚ್‌ಗೆ ಔಟಾದರು. ನಾಯಕ ಅಕ್ಷರ್ ಪಟೇಲ್ 26 ರನ್(19 ಎಸೆತ, 3 ಬೌಂಡರಿ) ಗಳಿಸಿದ್ದಾಗ ಗಾಯಗೊಂಡು ಮೈದಾನದಿಂದ ಹೊರನಡೆದರು.

## ಇರಾನ್ ರಾಯಬಾರಿಗೆ ಸಮನ್ಸ್ ನೀಡಿದ ಕೇಂದ್ರ

ಟೆಹ್ರಾನ್: ಹಾರ್ಮುಜ್ ಜಲಸಂಧಿಯಲ್ಲಿ ಹಾದು ಹೋಗುತ್ತಿದ್ದ 2 ಭಾರತೀಯ ಟ್ಯಾಂಕರ್‌ಗಳ ಮೇಲೆ ಗುಂಡಿನ ದಾಳಿ ನಡೆದ ಬೆನ್ನಲ್ಲೇ ಭಾರತವು ದೇಶದಲ್ಲಿರುವ ಇರಾನ್ ರಾಯಭಾರಿಗೆ ಸಮನ್ಸ್ ನೀಡಿದೆ.

ಹಾರ್ಮುಜ್ ಜಲಸಂಧಿ ಮೂಲಕ ಹಾದುಹೋಗುತ್ತಿದ್ದ ವೇಳೆ ಕ್ವೆಶ್ಮ್ ಮತ್ತು ಲಾರಕ್ ದ್ವೀಪಗಳ ನಡುವಿನ ಸಮುದ್ರದಲ್ಲಿ ಗುಂಡಿನ ದಾಳಿ ನಡೆದಿದೆ. ದಾಳಿ ಬಳಿಕ ತೈಲ ಟ್ಯಾಂಕರ್‌ಗಳು ಅಲ್ಲಿಂದ ವಾಪಸ್ ಆಗಿವೆ ಎಂದು ವರದಿಯಾಗಿದೆ.

ವರದಿಗಳ ಪ್ರಕಾರ, ಹಾರ್ಮುಜ್ ಜಲಸಂಧಿಯಲ್ಲಿ ವಿಶ್ವದ ಎಲ್ಲಾ ರಾಷ್ಟ್ರಗಳ ಹಡಗುಗಳ ಸಂಚಾರಕ್ಕೆ ಮುಕ್ತ ಅವಕಾಶ ನೀಡಿದ ಬಳಿಕ ಸುಮಾರು 9 ಭಾರತೀಯ ಹಡಗುಗಳು ಜಲಸಂಧಿ ಮೂಲಕ ಹಾದುಹೋಗಿವೆ.

ಇಂದು ಕೂಡ ಜಲಸಂಧಿ ದಾಟುತ್ತಿದ್ದ ಹಡಗುಗಳ ಮೇಲೆ ಯಾವುದೇ ಸೂಚನೆ ನೀಡದೇ ಗುಂಡಿನ ದಾಳಿ ನಡೆದಿದೆ. ಈ ಘಟನೆಗೆ ಸಂಬಂಧಿಸಿದಂತೆ ಭಾರತವು ಇರಾನ್ ರಾಯಭಾರಿ ಮೊಹಮ್ಮದ್ ಫಥಾಲಿ ಅವರಿಗೆ ಸಮನ್ಸ್ ನೀಡಿದೆ. ಜೊತೆಗೆ ರಾಯಭಾರ ಕಚೇರಿಯಲ್ಲಿ ಔಪಚಾರಿಕ ಪ್ರತಿಭಟನೆ ದಾಖಲಿಸಿದೆ.

ಸರ್ಕಾರಿ ಮೂಲಗಳ ಪ್ರಕಾರ, ಹಾರ್ಮುಜ್‌ನಲ್ಲಿ ಭಾರತೀಯ ಒಡೆತನದ ಹಡಗಿನ ಮೇಲೆ ದಾಳಿ ಮಾಡಲಾಗಿದೆ. ಅದೃಷ್ಟವಶಾತ್, ದಾಳಿಯಲ್ಲಿ ಯಾವುದೇ ಸಿಬ್ಬಂದಿ ಗಾಯಗೊಂಡಿಲ್ಲ, ಸಾವು–ನೋವು ಸಂಭವಿಸಿಲ್ಲ. ಜೊತೆಗೆ ಹಡಗಿಗೆ ಯಾವುದೇ ಹಾನಿಯಾಗಿಲ್ಲ. ಶಿಪ್ಪಿಂಗ್ ಮಹಾನಿರ್ದೇಶಕರು ಪರಿಸ್ಥಿತಿಯನ್ನ ಮೇಲ್ವಿಚಾರಣೆ ಮಾಡುತ್ತಿದ್ದಾರೆ. ಹಡಗಿನ ಸಿಬ್ಬಂದಿಯ ಸುರಕ್ಷತೆಯನ್ನೂ ಖಚಿತಪಡಿಸಿಕೊಳ್ಳುತ್ತಿದ್ದಾರೆ.

ಮುಖ್ಯವಾಗಿ ಭಾರತೀಯ ಧ್ವಜ ಹೊಂದಿರುವ ಇತರ ಹಡಗುಗಳ ಸುರಕ್ಷತೆಗೆ ವಿಶೇಷ ಒತ್ತು ನೀಡಲಾಗುತ್ತಿದೆ ಎಂದು ತಿಳಿಸಿವೆ.

ಈ ದಾಳಿ ನಿರ್ದಿಷ್ಟವಾಗಿ ಗುರಿಯಾಗಿಸಿ ನಡೆಸಿಲ್ಲ, ಆಕಸ್ಮಿಕವಾಗಿ ಆಗಿದೆ ಎಂದು ಅಧಿಕಾರಿಗಳು ಸ್ಪಷ್ಟಪಡಿಸಿದ್ದಾರೆ. ಈ ವರದಿಗಳು ಹಡಗು ಕಂಪನಿಗಳು ಮತ್ತು ವಿಮಾದಾರರಲ್ಲಿ ತೀವ್ರ ಕಳವಳ ಹೆಚ್ಚಿಸಿವೆ.

## ಬಿಸಿಗಾಳಿ ಎಚ್ಚರಿಕೆ

ಬೆಂಗಳೂರು: ಕರ್ನಾಟಕವು ಸದ್ಯ ತೀವ್ರ ಶಾಖದ ಅಲೆಯ ಹೊಡೆತಕ್ಕೆ ಸಿಲುಕಿದೆ. ಹಲವಾರು ಜಿಲ್ಲೆಗಳಲ್ಲಿ ತಾಪಮಾನವು ಏರುತ್ತಿದ್ದು ದೀರ್ಘಕಾಲದ ಬಿಸಿಲಿನ ಪರಿಸ್ಥಿತಿಯ ಬಗ್ಗೆ ಕಳವಳ ವ್ಯಕ್ತಪಡಿಸುತ್ತಿದೆ. ಉತ್ತರ ಕರ್ನಾಟಕದ ಹಲವಾರು ಭಾಗಗಳಲ್ಲಿ 41 ಡಿಗ್ರಿಗೆ ತಲುಪಬಹುದು. ಅಲ್ಲದೆ ಬೆಂಗಳೂರಿನಲ್ಲಿಯೂ ಸಹ ಶಾಖದ ಮಟ್ಟದಲ್ಲಿ ತೀವ್ರ ಏರಿಕೆ ಕಂಡುಬರುತ್ತದೆ ಎಂದು ಭಾರತೀಯ ಹವಾಮಾನ ಇಲಾಖೆಯ ಎಚ್ಚರಿಸಿದೆ.

ಶಾಖದ ಅಲೆಯು ತಾಪಮಾನವನ್ನು ತೀವ್ರ ಮಟ್ಟಕ್ಕೆ ತಳ್ಳಿದೆ. ವಿಶೇಷವಾಗಿ ಉತ್ತರ ಕರ್ನಾಟಕ ಜಿಲ್ಲೆಗಳಲ್ಲಿ. ಕಲಬುರಗಿಯಂತಹ ನಗರಗಳು 44–45 ಡಿಗ್ರಿಯಷ್ಟು ತಾಪಮಾನವನ್ನು ವರದಿ ಮಾಡಿವೆ. ಇದು ರಾಜ್ಯದ ಅತ್ಯಂತ ಬಿಸಿ ಪ್ರದೇಶಗಳಲ್ಲಿ ಒಂದಾಗಿದೆ. ರಾಯಚೂರು, ಬಳ್ಳಾರಿ ಮತ್ತು ವಿಜಯಪುರದಂತಹ ಇತರ ಜಿಲ್ಲೆಗಳು ಸಹ ತೀವ್ರ ಶಾಖವನ್ನು ಅನುಭವಿಸುತ್ತಿವೆ. ಕಲಬುರಗಿಯಂತಹ ನಗರಗಳು 44–45 ಡಿಗ್ರಿಯಷ್ಟು ತಾಪಮಾನವನ್ನು ವರದಿ ಮಾಡಿವೆ. ಇದು ರಾಜ್ಯದ ಅತ್ಯಂತ ಬಿಸಿ ಪ್ರದೇಶಗಳಲ್ಲಿ ಒಂದಾಗಿದೆ. ರಾಯಚೂರು, ಬಳ್ಳಾರಿ ಮತ್ತು ವಿಜಯಪುರದಂತಹ ಇತರ ಜಿಲ್ಲೆಗಳು ಸಹ ತೀವ್ರ ಶಾಖವನ್ನು ಅನುಭವಿಸುತ್ತಿವೆ.

ತಾಪಮಾನವು 40 ಡಿಗ್ರಿ ಗೆರೆಯನ್ನು ದಾಟಿದೆ. ತಂಪಾದ ಪ್ರದೇಶಗಳು ಸಹ ಇದರಿಂದ ಹೊರತಾಗಿಲ್ಲ. ಬಾಗಲಕೋಟೆ, ಕೊಪ್ಪಳ ಮತ್ತು ಬೀದರ್ ನಂತಹ ಜಿಲ್ಲೆಗಳು ನಿರಂತರವಾಗಿ 40 ಡಿಗ್ರಿಗಿಂತ ಹೆಚ್ಚಿನ ಗರಿಷ್ಠ ತಾಪಮಾ ನವನ್ನು ದಾಖಲಿಸುತ್ತಿವೆ ಎಂದು ಡೇಟಾ ತೋರಿಸುತ್ತದೆ, ಇದು ಕರ್ನಾಟಕದಾದ್ಯಂತ ವ್ಯಾಪಕವಾದ ಶಾಖದ ಅಲೆಯನ್ನು ಸೂಚಿಸುತ್ತದೆ.

## ಧ್ರುವ ಸರ್ಜಾ ಅವರಿಗೆ "ಸ್ನೇಹಜೀವಿ ಚಾಲಕರ ಸೇವಾರತ್ನ" ಪ್ರಶಸ್ತಿ



ಬೆಂಗಳೂರು: ಕನ್ನಡದ ಖ್ಯಾತ ಚಲನಚಿತ್ರ ನಟ ಧ್ರುವ ಸರ್ಜಾ ಅವರಿಗೆ "ಸ್ನೇಹಜೀವಿ ಚಾಲಕರ ಸೇವಾರತ್ನ" ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಬೆಂಗಳೂರಿನ ಮಧ್ಯ ಪ್ರಾಂತ್ಯದಲ್ಲಿ ನಡೆದ ಕಾರ್ಯಕ್ರಮದಲ್ಲಿ, ಇತ್ತೀಚಿನ ಸಮರ ಪರಿಸ್ಥಿತಿಯಿಂದ ರಾಜ್ಯದಲ್ಲಿ ಆಟೋಗಳಿಗೆ ಐಕಲು ಗ್ಯಾಸಿನ ಕೊರತೆ ಉಂಟಾಗಿ, ಸಿಕ್ಕರೂ ದುಪ್ಪಟ್ಟು ದರಕ್ಕೆ ಪಡೆಯಬೇಕಾದ ಸಂಕಷ್ಟವನ್ನು ಎದುರಿಸುತ್ತಿದ್ದ ಚಾಲಕರಿಗೆ ಧ್ರುವ ಸರ್ಜಾ ಅವರು ಮಾನವೀಯತೆ ತೋರಿದರು. ಸುಮಾರು 25 ಲಕ್ಷ ರೂ.ಗಳ ನೆರವು ನೀಡಿ ರಾಜ್ಯದ ಎಲ್ಲಾ ಜಿಲ್ಲೆಗಳ ಚಾಲಕರಿಗೆ ಉಚಿತ ಐಕಲು ಗ್ಯಾಸ್ ವಿತರಣೆ ಮಾಡುವ ಮೂಲಕ ಸಹಾಯಹಸ್ತ ಚಾಚಿದರು.

ಈ ಸೇವೆಯನ್ನು ಗುರುತಿಸಿ, ಸ್ನೇಹಜೀವಿ ಚಾಲಕರ ಟ್ರೇಡ್ ಯೂನಿಯನ್ ವತಿಯಿಂದ ಅವರಿಗೆ ಕಂಚಿನ ಆಟೋ ಪ್ರತಿಮೆ ಹಾಗೂ "ಚಾಲಕರ ಸೇವಾರತ್ನ" ಪ್ರಶಸ್ತಿ ನೀಡಿ ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಟ್ರೇಡ್ ಯೂನಿಯನ್ ಗೌರವಾಧ್ಯಕ್ಷ ಗಂಡಸಿ ಸದಾನಂದಸ್ವಾಮಿ, ರಾಜ್ಯಾಧ್ಯಕ್ಷ ಸ್ನೇಹಜೀವಿ



ಸಂತೋಷ್ ಕುಮಾರ್, ರಾಜು ಕನ್ನಡಿಗ, ಶಿವಕುಮಾರ್, ಶಿವು, ಮಂಜುನಾಥ್, ಕಡೇಶ್, ದಂಡಪ್ಪ ಸೇರಿದಂತೆ ಉಸ್ಮಾನ್ ಪಾಶ, ಶ್ರೀನಿವಾಸ್ ಬಾಬು, ಸ್ನೇಹಜೀವಿ ಸುಮಾ, ನೂರಾರು ಚಾಲಕರು ಭಾಗವಹಿಸಿದ್ದರು.

## ಮಹಿಳಾ ಮೀಸಲು ಮಸೂದೆ ಸೋಲು; ಕಾಂಗ್ರೆಸ್ ವಿರುದ್ಧ ಜೆಡಿಎಸ್ ಪ್ರತಿಭಟನೆ

ಬೆಂಗಳೂರು: ಲೋಕಸಭೆ ಮತ್ತು ರಾಜ್ಯಗಳ ವಿಧಾನಸಭೆಗಳಲ್ಲಿ ಮಹಿಳೆಯರಿಗೆ ಮೀಸಲಾತಿ ಶೇ.33ರಷ್ಟು ಮೀಸಲಾತಿ ನೀಡುವ ವಿಧೇಯಕಕ್ಕೆ ಕಾಂಗ್ರೆಸ್ ಮತ್ತು ಅದರ ಮಿತ್ರಪಕ್ಷಗಳ ಷಡ್ಯಂತ್ರದಿಂದ ಲೋಕಸಭೆಯಲ್ಲಿ ಲೋಕಸಭೆಯಲ್ಲಿ ಸೋಲಾಗಿದ್ದನ್ನು ಖಂಡಿಸಿ ಜೆಡಿಎಸ್ ಮಹಿಳಾ ಘಟಕ ನಗರದ ಫ್ರೀಡಂ ಪಾರ್ಕ್‌ನಲ್ಲಿ ಬೃಹತ್ ಪ್ರತಿಭಟನೆ ನಡೆಸಿತು.

ಪಕ್ಷದ ಶಾಸಕರು, ವಿಧಾನಪರಿಷತ್ ಸದಸ್ಯರು ಸೇರಿದಂತೆ ಅನೇಕ ಮುಖಂಡರು ಭಾಗಿಯಾಗಿದ್ದ ಈ ಪ್ರತಿಭಟನೆಯಲ್ಲಿ ಜೆಡಿಎಸ್ ಕಾರ್ಯಕರ್ತೆಯರು ಲೋಕಸಭೆ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹಾಗೂ ಕಾಂಗ್ರೆಸ್ ಮಿತ್ರಪಕ್ಷಗಳ ವಿರುದ್ಧ ಘೋಷಣೆಗಳನ್ನು ಕೂಗಿದರು.

ಪ್ರತಿಭಟನೆ ನೇತೃತ್ವ ವಹಿಸಿ ಮಾತನಾಡಿದ ಮಾಜಿ ಸಚಿವೆ ಲೀಲಾದೇವಿ ಆರ್ ಪ್ರಸಾದ್ ಅವರು; 1996ರಲ್ಲಿ ಶಾಸನಸಭೆಗಳಲ್ಲಿ



ಮಹಿಳೆಯರಿಗೆ ನ್ಯಾಯೋಚಿತ ಮೀಸಲಾತಿ ನೀಡುವ ಉದ್ದೇಶದಿಂದ ಸಂಸತ್ತಿನಲ್ಲಿ ಮಹಿಳಾ ಮೀಸಲು ವಿಧೇಯಕವನ್ನು ಮಂಡಿಸಿದ್ದರು. ಅಂದು ಕೂಡ ಕಾಂಗ್ರೆಸ್ ಮತ್ತು ಸಂಯುಕ್ತ ರಂಗದ ಕೆಲ ಮಿತ್ರಪಕ್ಷಗಳ ಕುಯುಕ್ತಿಯಿಂದ ಆ ಮಸೂದೆಗೆ ಸೋಲಾಯಿತು. ಮತ್ತೆ ಅದೇ ಇತಿಹಾಸ ಮರುಕಳಿದ್ದು, ರಾಷ್ಟ್ರದ ಮಹಿಳೆಯರಿಗೆ ಕಾಂಗ್ರೆಸ್ ಮೋಸ ಮಾಡಿದೆ ಎಂದು ಟೀಕಿಸಿದರು.

ಕಾಂಗ್ರೆಸ್ ಹಿಂದಿನಿಂದಲೂ ಮಹಿಳಾ ವಿರೋಧಿ ನೀತಿಯನ್ನೇ ಅನುಸರಿಸಿಕೊಂಡು ಬರುತ್ತಿದೆ ಎಂದು ದೂರಿದ ಅವರು, ಮಹಿಳಾ ಮೀಸಲು ಮಸೂದೆ ಸೋಲಿಗೆ ಕಾರಣರಾದ ಕಾಂಗ್ರೆಸ್ಸಿಗರನ್ನು ರಾಷ್ಟ್ರದ ಮಹಿಳೆಯರು ಶಾಶ್ವತವಾಗಿ ಮನೆಯಲ್ಲಿ ಕೂರಿಸುತ್ತಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಗ್ರೇಟರ್ ಬೆಂಗಳೂರು ಜೆಡಿಎಸ್ ಅಧ್ಯಕ್ಷ ಹೆಚ್.ಎಂ. ರಮೇಶ್ ಗೌಡ, ಮಾಜಿ ಶಾಸಕ ಕೆ.ಎ. ತಿಪ್ಪೇಸ್ವಾಮಿ, ವಿಧಾನ ಪರಿಷತ್ ಸದಸ್ಯ ಟಿ.ಎ. ಶರವಣ, ನಗರ ಜೆಡಿಎಸ್ ಮಹಿಳಾ ಘಟಕದ ಅಧ್ಯಕ್ಷೆ ಶೈಲಜಾ ರಾವ್ ಸೇರಿದಂತೆ ಅನೇಕ ನಾಯಕರು ಪ್ರತಿಭಟನೆಯಲ್ಲಿ ಭಾಗಿಯಾಗಿದ್ದರು.

ಈ ಸಂದರ್ಭದಲ್ಲಿ ಮಾಧ್ಯಮಗಳ ಜತೆ ಮಾತನಾಡಿದ ರಮೇಶ್ ಗೌಡ, ಶರವಣ ಮೊದಲಾದವರು; ಮಹಿಳೆಯರ ಭವಿಷ್ಯಕ್ಕೆ ಕಾಂಗ್ರೆಸ್ ಪಕ್ಷ ಹಾಗೂ ಅದರ ಮಿತ್ರಪಕ್ಷಗಳು ಧಕ್ಕೆ ಉಂಟು ಮಾಡಿವೆ. ಮಸೂದೆಯನ್ನು ಲೋಕಸಭೆಯಲ್ಲಿ ಅಂಗೀಕರಿಸಿ ಅನುಷ್ಠಾನ ಮಾಡಿದ್ದಿದ್ದರೆ ರಾಷ್ಟ್ರದಲ್ಲಿ ಇತಿಹಾಸ ಸೃಷ್ಟಿ ಆಗುತ್ತಿತ್ತು. ಕಾಂಗ್ರೆಸ್ ಪಕ್ಷ ಒಂದು ಸುವರ್ಣಾವಕಾಶವನ್ನು ಕೈಚೆಲ್ಲಿದೆ ಎಂದು ಕಿಡಿಕಾರಿದರು.

ವಿಧಾನಸಭೆಗಳು ಮತ್ತು ಲೋಕಸಭೆಯಲ್ಲಿ ಮಹಿಳೆಯರ ಸಂಖ್ಯೆ ಹೆಚ್ಚಾದರೆ ತಮ್ಮ ಅಸ್ತಿತ್ವಕ್ಕೆ ಧಕ್ಕೆ ಬರುತ್ತದೋ ಎನ್ನುವ ಭಯದಲ್ಲಿ ಕಾಂಗ್ರೆಸ್ ಈ ಮಸೂದೆಗೆ ಬೆಂಬಲ ನೀಡದೇ ಕೈಕೊಟ್ಟಿದೆ. ಅದರ ಮಿತ್ರಪಕ್ಷಗಳು ಕೂಡ ಅದೇ ವರ್ತನೆ ತೋರಿರುವುದು ಖಂಡನೀಯ ಎಂದು ಅವರು ಟೀಕಾಪ್ರಹಾರ ನಡೆಸಿದರು.

ಬೆಂಗಳೂರು ಉತ್ತರ ಜಿಲ್ಲಾ ಮಹಿಳಾ ಅಧ್ಯಕ್ಷೆ ಕವಿತಾ ರೆಡ್ಡಿ, ಪಶ್ಚಿಮ ಜಿಲ್ಲಾ ಅಧ್ಯಕ್ಷೆ ಮಂಗಳಮ್ಮ, ಮುಖಂಡರುಗಳಾದ ಮಲ್ಲೇಶ್ವರಿ, ಕವಿತಾ, ಅನುರಾಧ, ಜಯಲಕ್ಷ್ಮಿ ಕಾರ್ತಿಕ್, ವಿಜಯಲಕ್ಷ್ಮಿ ಹಾಗೂ ಇನ್ನಿತರ ಮಹಿಳಾ ಮುಖಂಡರು ಸೇರಿದಂತೆ ನೂರಾರು ಸಂಖ್ಯೆಯಲ್ಲಿ ಕಾರ್ಯಕರ್ತೆಯರು ಭಾಗವಹಿಸಿದ್ದರು. ಈ ಮಹಿಳಾ ಪ್ರತಿಭಟನೆಗೆ ಶಾಸಕರು, ಮಾಜಿ ಶಾಸಕರು, ಜಿಬಿಎ ಜಿಲ್ಲಾಧ್ಯಕ್ಷರುಗಳು ಹಾಗೂ ಗ್ರೇಟರ್ ಬೆಂಗಳೂರು ಪದಾಧಿಕಾರಿಗಳು, ವಿಧಾನಸಭಾ ಕ್ಷೇತ್ರ ಅಧ್ಯಕ್ಷರುಗಳು ಸಹಕಾರ ನೀಡಿದರು.

19/04/2026
ಭಾರತ ಸಾರಥಿ
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಹೊಸ ಸ್ಟೇಷನರಿ ಶ್ರೇಣಿ ಬಿಡುಗಡೆ



ಬೆಂಗಳೂರು

ಯುವಜನರಲ್ಲಿ ಸೃಜನಶೀಲತೆ ಮತ್ತು ಶಿಸ್ತು ಬೆಳೆಸುವ ಉದ್ದೇಶದೊಂದಿಗೆ, ನವನೀತ್ ಸಂಸ್ಥೆಯ 'ಯುವಾ' ಬ್ರಾಂಡ್ ಇದೀಗ ತನ್ನ ಹೊಸ ಸ್ಟೇಷನರಿ ಶ್ರೇಣಿಯನ್ನು ಪರಿಚಯಿಸಿದೆ.

ಈ ವಿಶೇಷ 'ನರುಟೊ ಕಲೆಕ್ಷನ್' ವಿದ್ಯಾರ್ಥಿಗಳ ದಿನನಿತ್ಯದ ಅಧ್ಯಯನವನ್ನು ಮತ್ತಷ್ಟು ರೋಚಕ ಮತ್ತು ಪ್ರೇರಣಾದಾಯಕವಾಗಿಸಲು ರೂಪುಗೊಂಡಿದೆ.

ಈ ಹೊಸ ಶ್ರೇಣಿಯಲ್ಲಿ ಪ್ರೀಮಿಯಂ ಲಾಂಗ್ ಬುಕ್ಸ್, ನೋಟ್‌ಬುಕ್ಸ್, ಸ್ಪೈರಲ್ ಲಾಂಗ್ ಬುಕ್ಸ್ ಹಾಗೂ ಡ್ರಾಯಿಂಗ್ ಬುಕ್‌ಗಳು ಸೇರಿದ್ದು, ಪ್ರತಿಯೊಂದು ಉತ್ಪನ್ನವೂ ನರುಟೊ ಜಗತ್ತಿನ ಶಕ್ತಿಯನ್ನು ಪ್ರತಿಬಿಂಬಿಸುವ ರೀತಿಯಲ್ಲಿ ವಿನ್ಯಾಸಗೊಳಿಸಲಾಗಿದೆ. ಉತ್ತಮ ಗುಣಮಟ್ಟದ ಕಾಗದದೊಂದಿಗೆ 'ವಿಲ್ ಆಫ್ ಫೈರ್' ಎಂಬ ದೃಢಸಂಕಲ್ಪದ ತತ್ವವನ್ನು ಸಂಯೋಜಿಸುವ ಮೂಲಕ, ವಿದ್ಯಾರ್ಥಿಗಳು ತಮ್ಮ ಗುರಿಗಳನ್ನು ಶಿನೋಬಿಗಳಂತೆ ಬೆನ್ನಟ್ಟಲು ಈ ಕಲೆಕ್ಷನ್ ಪ್ರೇರೇಪಿಸುತ್ತದೆ.

ಜಾಗತಿಕ ಮಟ್ಟದಲ್ಲಿ ಅಪಾರ ಜನಪ್ರಿಯತೆ ಪಡೆದ ನರುಟೊ ಸರಣಿಯು, 2002ರಿಂದ ಆರಂಭವಾಗಿ ಒಂದು ಸಾಮಾನ್ಯ ನಿಂಜಾ ಯುವಕನಿಂದ ಹಳ್ಳಿಯ ನಾಯಕನಾಗುವ ಪ್ರವಾಸವನ್ನು ಚಿತ್ರಿಸುತ್ತದೆ. ಈ ಕಥೆಯ ಪ್ರೇರಣೆಯು ಇಂದು ವಿಶ್ವದ ಯುವಜನತೆಗೆ ಸಾಧನೆಯ ಹೊಸ ಮಾನದಂಡವಾಗಿ ಪರಿಣಮಿಸಿದೆ. 2025ರಲ್ಲಿ ಅನಿಮೆ ವೀಕ್ಷಣಾ ಪಟ್ಟಿಗಳಲ್ಲೂ ಅಗ್ರಸ್ಥಾನ ಪಡೆದಿರುವ ಈ ಸರಣಿ, ಕೋಟ್ಯಂತರ ವೀಕ್ಷಕರ ಮನಗೆದ್ದಿದೆ.

ಈ ಕಲೆಕ್ಷನ್‌ನಲ್ಲಿ ಟೀಮ್ 7ನ ಪ್ರಮುಖ ಪಾತ್ರಗಳಾದ ನರುಟೋ, ಸಾಸುಕೆ, ಸಕುರಾ ಮತ್ತು ಅವರ ಮಾರ್ಗದರ್ಶಕ ಕಾಕಾಶಿ ಹಟಾಕೆ ಅವರ ಚಿತ್ರಣಗಳನ್ನು ಒಳಗೊಂಡಿದ್ದು, ವಿದ್ಯಾರ್ಥಿಗಳಲ್ಲಿ ಉತ್ಸಾಹವನ್ನು ಹೆಚ್ಚಿಸುವುದರ ಜೊತೆಗೆ ಸಾಂಸ್ಕೃತಿಕ ಮೌಲ್ಯವನ್ನು ಕೂಡ ಒದಗಿಸುತ್ತದೆ. ಪ್ರತಿ ಪುಸ್ತಕವೂ ಕೇವಲ ಬರವಣಿಗೆಯ ಸಾಧನವಾಗಿಯೇ ಅಲ್ಲದೆ, ಕಲಾತ್ಮಕ ಅಭಿವ್ಯಕ್ತಿಗೆ ವೇದಿಕೆಯಾಗಿ ಪರಿಣಮಿಸುತ್ತದೆ.

ಉಪಯುಕ್ತತೆ ಮತ್ತು ಆಕರ್ಷಣೆಯನ್ನು ಗಮನದಲ್ಲಿಟ್ಟುಕೊಂಡು ವಿನ್ಯಾಸಗೊಳಿಸಲಾದ ಈ ಉತ್ಪನ್ನಗಳು, ನೋಟ್ಸ್ ಬರೆಯಲು, ಚಿತ್ರಕಲೆ ಮಾಡಲು ಹಾಗೂ ಸೃಜನಾತ್ಮಕ ಚಿಂತನೆಗಳನ್ನು ಅಭಿವ್ಯಕ್ತಿಸಲು ಅನುಕೂಲಕರವಾಗಿವೆ. ವಿದ್ಯಾರ್ಥಿಗಳ ದಿನನಿತ್ಯದ ಅಧ್ಯಯನದಲ್ಲಿ ಹೊಸ ಉತ್ಸಾಹ ತುಂಬುವ ಉದ್ದೇಶವನ್ನು ಇದು ಹೊಂದಿದೆ.

# ನವ ಭಾರತದ 'ಎಂಎಸ್‌ಎಂಇ' ಕ್ರಾಂತಿಯ ಹೃದಯಭಾಗದಲ್ಲಿ 'ನಾರಿಶಕ್ತಿ'

ನರೇಂದ್ರ ಮೋದಿ ಅವರು ಲೋಕಸಭೆ ಮತ್ತು ರಾಜ್ಯ ಶಾಸಕಾಂಗಗಳಲ್ಲಿ ಮೂರನೇ ಒಂದು ಭಾಗದಷ್ಟು ಸ್ಥಾನಗಳನ್ನು ಮಹಿಳೆಯರಿಗೆ ಮೀಸಲಿಡುವ 'ನಾರಿ ಶಕ್ತಿ ವಂದನ್ ಅಧಿನಿಯಮ'ವನ್ನು ಸೆಪ್ಟೆಂಬರ್ 2023ರಲ್ಲಿ ಸಂಸತ್ ಕಲಾಪದಲ್ಲಿ ಸವಿವರವಾಗಿ ಪ್ರತಿಪಾದಿಸಿದರು. ಆ ಮೂಲಕ ಮಹಿಳೆಯರು ಏಳಿಗೆಯಾಗದ ಹೊರತು ದೇಶದ ಏಳಿಗೆ ಅಸಾಧ್ಯ ಎಂಬ ದೃಢ ಸಂಕಲ್ಪವನ್ನು ವ್ಯಕ್ತಪಡಿಸಿದ್ದರು. ಅತಿ ಸಣ್ಣ, ಸಣ್ಣ ಮತ್ತು ಮಧ್ಯಮ ಗಾತ್ರದ ಉದ್ಯಮ (ಎಂಎಸ್‌ಎಂಇ) ವಲಯದಲ್ಲಿ ಸರ್ಕಾರ ಮಾಡುತ್ತಿರುವ ಕೆಲಸಗಳಲ್ಲೂ ಅದೇ ಉದ್ದೇಶ ಪ್ರತಿಫಲಿಸುವುದನ್ನು ಪ್ರತಿದಿನವೂ ನಾವು ಕಾಣಬಹುದಾಗಿದೆ.

'ಎಂಎಸ್‌ಎಂಇ' ವಲಯವನ್ನು ಸಾಮಾನ್ಯವಾಗಿ ಭಾರತದ ಆರ್ಥಿಕತೆಯ ಬೆನ್ನೆಲುಬು ಎಂದು ಕರೆಯಲಾಗುತ್ತದೆ. ಆದರೆ ನಾವು ಹತ್ತಿರದಿಂದ ನೋಡಿದರೆ, ಅದರ ಹೃದಯದಲ್ಲಿ ಮಹಿಳಾ ಉದ್ಯಮಿಗಳ ಶಾಂತ ಶಕ್ತಿಯನ್ನು ಕಾಣಬಹುದು. ಇಂದು, ಆ ಶಾಂತ ಶಕ್ತಿಯು ಅಂತಿಮವಾಗಿ ರಾಷ್ಟ್ರೀಯ ಮನ್ನಣೆ, ಸಾಂಸ್ಥಿಕ ಬೆಂಬಲ ಮತ್ತು ನೀತಿ ಬೆಂಬಲವನ್ನು ಪಡೆಯುತ್ತಿದೆ. ಇದೆಲ್ಲದಕ್ಕೂ ಆ ಶಾಂತ ಶಕ್ತಿ ಸದಾ ಅರ್ಹವಾದುದಷ್ಟೇ.

ಭಾರತದ 'ಎಂಎಸ್‌ಎಂಇ' ಪರಿಸರ ವ್ಯವಸ್ಥೆಯಲ್ಲಿ ಮಹಿಳೆಯರ ಭಾಗವಹಿಸುವಿಕೆಯ ಪ್ರಮಾಣವು ನಿರಂತರವಾಗಿ ಹೆಚ್ಚುತ್ತಿದೆ. 2026ರ ಆರಂಭದ ವೇಳೆಗೆ, 'ಉದ್ಯಮ್ ನೋಂದಣಿ ಪೋರ್ಟಲ್' ಮತ್ತು 'ಉದ್ಯಮ್ ಅಸಿಸ್ಟ್ ವೇದಿಕೆ'ಯಲ್ಲಿ 3.11 ಕೋಟಿಗೂ ಹೆಚ್ಚು ಮಹಿಳಾ ನೇತೃತ್ವದ ಉದ್ಯಮಗಳು ನೋಂದಾಯಿಸಲ್ಪಟ್ಟಿವೆ. ವಾಸ್ತವವಾಗಿ, 'ಉದ್ಯಮ್' ಮತ್ತು 'ಉದ್ಯಮ್ ಅಸಿಸ್ಟ್' ನೋಂದಣಿಗಳ ಪ್ರಕಾರ, ದೇಶದ ಎಲ್ಲಾ ನೋಂದಾಯಿತ 'ಎಂಎಸ್‌ಎಂಇ'ಗಳಲ್ಲಿ ಮಹಿಳಾ ಮಾಲೀಕತ್ವದ ಉದ್ಯಮಗಳು ಸುಮಾರು ಶೇ.40ರಷ್ಟು ಪಾಲನ್ನು ಹೊಂದಿವೆ ಮತ್ತು ಉದ್ಯೋಗ ಸೃಷ್ಟಿಯಲ್ಲಿ ಮಹತ್ವದ ಪಾತ್ರ ವಹಿಸುತ್ತಿವೆ. ಮಹಿಳಾ ಉದ್ಯಮಿಗಳಿಗೆ ಅತ್ಯಂತ ಪರಿಣಾಮಕಾರಿಯಾದ ಸುಧಾರಣೆಗಳಲ್ಲಿ ಒಂದೆಂದರೆ ಅದು 'ಉದ್ಯಮ್' ನೋಂದಣಿ ಪೋರ್ಟಲ್ ಮೂಲಕ ನೋಂದಣಿಯನ್ನು ಸರಳಗೊಳಿಸಿದ್ದು. ಸಂಪೂರ್ಣವಾಗಿ ಆನ್ಲೈನ್, ಕಾಗದರಹಿತ ಮತ್ತು ಸ್ವಯಂ ಘೋಷಣೆಯ ಆಧಾರದ ಮೇಲೆ, ಅದು ಮಹಿಳೆಯರಿಗೆ ಅನಾನುಕೂಲಕರವಾಗಿದ್ದ ಅಧಿಕಾರಶಾಹಿಯ ಅಡತಡೆಯನ್ನು ನಿವಾರಿಸಿತು. ಜನವರಿ 2023ರಲ್ಲಿ ಪ್ರಾರಂಭಿಸಲಾದ 'ಉದ್ಯಮ್ ಅಸಿಸ್ಟ್' ವೇದಿಕೆಯು ಮತ್ತೊಂದು ಹೆಜ್ಜೆ ಮುಂದೆ ಸಾಗಿ, 'ಪ್ಯಾನ್' (ಕಂಒ) ಅಥವಾ 'ಜಿಎಸ್ಟಿಎನ್' ಹೊಂದಿರದ ಅನೌಪಚಾರಿಕ ಆರ್ಥಿಕತೆಯ ಮಹಿಳೆಯರನ್ನು ತಲುಪುವಲ್ಲಿ ಯಶಸ್ವಿಯಾಯಿತು. ಆ ಮೂಲಕ ಅವರನ್ನು ಆದ್ಯತೆಯ ವಲಯದ ಸಾಲ ಮತ್ತು ಸರ್ಕಾರಿ ಯೋಜನೆಯ ಪ್ರಯೋಜನಗಳ ವ್ಯಾಪ್ತಿಗೆ ತಂದಿತು.

ಬೆಳವಣಿಗೆಯ ಚಾಲಕರಾಗಿ ಮಹಿಳೆಯರನ್ನು ತನ್ನ ಆರ್ಥಿಕ ಕಾರ್ಯಸೂಚಿಯ ಕೇಂದ್ರಬಿಂದುವಾಗಿ ಇರಿಸಲು ಆಯ್ಕೆ ಮಾಡಿದ ಸರ್ಕಾರದ ನೇರ ಫಲ ಇದಾಗಿದೆ.

ಮಹಿಳೆಯರ ಸಬಲೀಕರಣವು ಸಾಮಾಜಿಕ ಬಾಧ್ಯತೆಯಲ್ಲ, ಬದಲಿಗೆ ಅದು ರಾಷ್ಟ್ರೀಯ ಕಾರ್ಯತಂತ್ರ ಎಂದು ಪ್ರಧಾನಮಂತ್ರಿ ಮೋದಿ ನಿರಂತರವಾಗಿ ಒತ್ತಿ ಹೇಳುತ್ತಾ ಬಂದಿದ್ದಾರೆ. ಅವರ ಮಾತುಗಳಲ್ಲಿ ಹೇಳುವುದಾದರೆ, ಮಹಿಳೆಯರು ಸಬಲೀಕರಣಗೊಂಡಾಗ, ಕುಟುಂಬಗಳು ಸಶಕ್ತವಾಗುತ್ತವೆ ಮತ್ತು ಕುಟುಂಬಗಳು ಸಶಕ್ತವಾದಾಗ, ರಾಷ್ಟ್ರದ ಬಲಿಷ್ಠ ಬೆಳವಣಿಗೆ ಸಾಧ್ಯವಾಗುತ್ತದೆ.

'ನಾರಿ ಶಕ್ತಿ ವಂದನ್ ಅಧಿನಿಯಮ'ವು ರಾಜಕೀಯ ಕ್ಷೇತ್ರದಲ್ಲಿ ಈ ತತ್ವದ ಅತ್ಯಂತ ಸ್ಪಷ್ಟ ಅಭಿವ್ಯಕ್ತಿಯಾಗಿದೆ. ಆದರೆ ಆರ್ಥಿಕ ಕ್ಷೇತ್ರದಲ್ಲಿ ವಿಶೇಷವಾಗಿ 'ಎಂಎಸ್‌ಎಂಇ' ವಲಯದಲ್ಲಿ ಮಹಿಳೆಯರ ಬಗ್ಗೆ ಸರ್ಕಾರದ ಬದ್ಧತೆಯನ್ನು ಸಮಗ್ರ ಮತ್ತು ಬಹುಮುಖಿ ನೀತಿಗಳಲ್ಲಿ ಕಾಣಬಹುದಾಗಿದೆ. ಈ ನೀತಿಗಳು ಸಾಲ, ಕೌಶಲ್ಯ, ಮಾರುಕಟ್ಟೆ ಪ್ರವೇಶ, ಮಾನ್ಯತೆಯ ಜತೆಗೆ ಮತ್ತು ಘನತೆಯನ್ನು ಹೆಚ್ಚಿಸುತ್ತವೆ.

'ಎಂಎಸ್‌ಎಂಇ' ಸಚಿವಾಲಯವು, ತನ್ನ ಪ್ರತಿಯೊಂದು ಪ್ರಮುಖ ಕಾರ್ಯಕ್ರಮ ಮತ್ತು ಯೋಜನೆಗಳಲ್ಲಿ ಮಹಿಳಾ ಸಬಲೀಕರಣವನ್ನು ವ್ಯವಸ್ಥಿತವಾಗಿ ಹೆಣೆದಿದೆ.

ಸಚಿವಾಲಯದ ಕಾರ್ಯಕ್ರಮಗಳು ಒಟ್ಟಾರೆಯಾಗಿ ಪೂರೈಕೆ ಬದಿಯಲ್ಲಿ ಎಂಟು ಪ್ರಮುಖ ಮಧ್ಯಸ್ಥಿಕೆ ವಿಭಾಗಗಳ ಮೂಲಕ ಉದ್ಯಮಿಗಳನ್ನು ಬೆಂಬಲಿಸುತ್ತವೆ, ಅವುಗಳೆಂದರೆ: ತಂತ್ರಜ್ಞಾನದ ಪ್ರವೇಶ, ಸಾಲ ಮತ್ತು ಹಣಕಾಸಿನ ಲಭ್ಯತೆ, ಡಿಜಿಟಲೀಕರಣವನ್ನು ಉತ್ತೇಜಿಸುವುದು, ಮೂಲಸೌಕರ್ಯ ಬೆಂಬಲ, ಔಪಚಾರಿಕೀಕರಣ ಮತ್ತು ಸೇರ್ಪಡೆ, ಮಾರುಕಟ್ಟೆಗೆ ಪ್ರವೇಶ ಮತ್ತು ಉದ್ಯಮ-ದರ್ಜೆಯ ಕೌಶಲ್ಯ.

ಕಳೆದ ಐದು ವರ್ಷಗಳಲ್ಲಿ 'ಪ್ರಧಾನ ಮಂತ್ರಿ ಉದ್ಯೋಗ ಸೃಷ್ಟಿ ಕಾರ್ಯಕ್ರಮ'ದ(ಪಿಎಂಇಜಿಪಿ) ಅಡಿಯಲ್ಲಿ 3.2 ಲಕ್ಷಕ್ಕೂ ಹೆಚ್ಚು ಮಹಿಳಾ ಮಾಲೀಕತ್ವದ ಉದ್ಯಮಗಳಿಗೆ ಬೆಂಬಲ ನೀಡಲಾಗಿದೆ. ಇತ್ತೀಚಿನ ದತ್ತಾಂಶದ ಪ್ರಕಾರ, ಒಟ್ಟಾರೆ 'ಪಿಎಂಇಜಿಪಿ' ಫಲಾನುಭವಿಗಳಲ್ಲಿ ಶೇ. 39ರಷ್ಟು ಮಹಿಳೆಯರೇ ಆಗಿದ್ದು, ಇದು ಯೋಜನೆಯ ವಿನ್ಯಾಸ ಮತ್ತು ಉದ್ಯಮಿ ಮಹಿಳೆಯರ ಬೆಳವಣಿಗೆಯ ಹಸಿವು ಎರಡನ್ನೂ ಪ್ರತಿಬಿಂಬಿಸುತ್ತದೆ.

'ಅತಿ ಸಣ್ಣ ಮತ್ತು ಸಣ್ಣ ಉದ್ಯಮಗಳಿಗಾಗಿ ಸಾಲ ಖಾತರಿ ನಿಧಿ ಟ್ರಸ್ಟ್' (ಸಿಜಿಟಿಎಂಎ) ಮಹಿಳಾ ಸಾಲಗಾರರಿಗೆ ಖಾತರಿಯ ವ್ಯಾಪ್ತಿಯನ್ನು ಶೇಕಡಾ 90ರವರೆಗೆ ಹೆಚ್ಚಿಸಿದೆ. ಆ ಮೂಲಕ ಮಹಿಳಾ ಉದ್ಯಮಿಗಳಿಗೆ ಅಡಮಾನ ರಹಿತ ಸಾಲವನ್ನು ಒದಗಿಸಲು ಬ್ಯಾಂಕುಗಳ ಒಲವನ್ನು ಹೆಚ್ಚಿಸಿದೆ.

ಇದಲ್ಲದೆ, ಕೇಂದ್ರ ಸಚಿವಾಲಯಗಳು, ಇಲಾಖೆಗಳು ಮತ್ತು ಸಾರ್ವಜನಿಕ ವಲಯದ ಉದ್ಯಮಗಳು ತಮ್ಮ ವಾರ್ಷಿಕ ಸಂಗ್ರಹಣೆಯ ಕನಿಷ್ಠ ಶೇ.3 ರಷ್ಟನ್ನು ಮಹಿಳಾ ಮಾಲೀಕತ್ವದ 'ಅತಿ ಸಣ್ಣ ಮತ್ತು ಸಣ್ಣ ಉದ್ಯಮಗಳಿಂದ ಖರೀದಿಸುವುದನ್ನು ಕಡ್ಡಾಯಗೊಳಿಸಲು 'ಸಾರ್ವಜನಿಕ ಖರೀದಿ ನೀತಿ'ಗೆ ತಿದ್ದುಪಡಿ ಮಾಡಲಾಗಿದೆ. ಇದು ಮಹಿಳಾ ಉದ್ಯಮಿಗಳಿಗೆ ಖಾತರಿ, ಊಹಿಸಬಹುದಾದ ಮಾರುಕಟ್ಟೆಯನ್ನು ಸೃಷ್ಟಿಸುತ್ತದೆ.










ಬೆಂಗಳೂರು: ಶ್ರೀ ಸಾಯಿ ವಿಷ್ಣು ಮ್ಯೂಸಿಕ್ ಅಕಾಡೆಮಿ (ರಿ) ವತಿಯಿಂದ 13ನೇ ವಾರ್ಷಿಕೋತ್ಸವ 'ಸಂಗೀತ ಸಂಭ್ರಮ' ಕಾರ್ಯಕ್ರಮವು ನಗರದ ಉದಯಭಾನು ಕಲಾಭವನದಲ್ಲಿ ಅದ್ದೂರಿಯಾಗಿ ನಡೆಯಿತು. ಕಾರ್ಯಕ್ರಮದಲ್ಲಿ ಕನ್ನಡ ಚಿತ್ರರಂಗದ ಹಿರಿಯ ನಟ ರಮೇಶ್ ಭಟ್, ಖ್ಯಾತ ನಾಯಕ ನಟ ಅಭಿಜಿತ್, ನಟ-ನಿರ್ಮಾಪಕ ಗಂಡಸಿ ಸದಾನಂದ ಸ್ವಾಮಿ, ಹಾಗೂ ಮೈಕೋ ಶಿವು ಸೇರಿದಂತೆ ಅನೇಕ ಗಣ್ಯರು ಉಪಸ್ಥಿತರಿದ್ದರು. ಸಂಸ್ಥಾಪಕರಾದ ವಿಷ್ಣು ರಾಮನ್ ಅವರ ನೇತೃತ್ವದಲ್ಲಿ ನಡೆದ ಈ ಕಾರ್ಯಕ್ರಮದಲ್ಲಿ ಗಾಯಕ ಮೂರ್ತಿ ಗಿರಿನಗರ, ಗಾಯಕಿ ರೂಪ ಭಟ್ ಸೇರಿದಂತೆ ಹಲವು ಕಲಾವಿದರು ಭಾಗವಹಿಸಿದರು. ವೇದಿಕೆಯಲ್ಲಿ ಗಣ್ಯ ಅತಿಥಿಗಳನ್ನು ಸನ್ಮಾನಿಸಿ ಗೌರವಿಸಲಾಯಿತು. ಸಂಗೀತ, ನೃತ್ಯ ಸೇರಿದಂತೆ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದ ಈ ಸಂಭ್ರಮದಲ್ಲಿ ಕಲಾಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

# ವರ್ಲ್ಡ್10ಕೆನಲ್ಲಿ 35,000ಕ್ಕೂ ಅಧಿಕ ಸ್ಪರ್ಧಿಗಳು

ಬೆಂಗಳೂರು



ಪ್ರೊಕ್ಯಾಮ್ ಇಂಟರ್ ನ್ಯಾಷನಲ್ ನಿಂದ ಪ್ರಚಾರ ಪಡೆದ ಟಿಸಿಎಸ್ ವರ್ಲ್ಡ್ 10 ಕೆ ಬೆಂಗಳೂರಿನ 18ನೇ ಆವೃತ್ತಿಯು 2026 ರ ಏಪ್ರಿಲ್ 26, ಭಾನುವಾರದಂದು ಆನ್-ಗ್ರೌಂಡ್ ಮತ್ತು ವರ್ಚುವಲ್ ರೇಸ್ ಗಳಲ್ಲಿ ದಾಖಲೆಯ 35,000ಕ್ಕೂ ಹೆಚ್ಚು ಸ್ಪರ್ಧಿಗಳನ್ನು ಸ್ವಾಗತಿಸಲು ಸಜ್ಜಾಗಿದೆ. ಇದು ನಗರದ ಚೈತನ್ಯವನ್ನು ಸಾಕಾರಗೊಳಿಸಲು ಬಂದಿರುವ ಓಟಕ್ಕೆ ಮತ್ತೊಂದು ಮೈಲಿಗಲ್ಲನ್ನು ಸೂಚಿಸುತ್ತದೆ.

ವಿಶ್ವದ ಪ್ರೀಮಿಯರ್ 10 ಕೆ ಆಗಿ, ಓಟವು ಹೊಸ ಮಾನದಂಡಗಳನ್ನು ಸ್ಥಾಪಿಸುತ್ತಲೇ ಇದೆ. ಓಪನ್ 10 ಕೆ ನೋಂದಣಿಗಳು ದಾಖಲೆಯ ಏಳು ದಿನಗಳಲ್ಲಿ ಪೂರ್ಣಗೊಂಡಿವೆ ಮತ್ತು ಇತರ ವಿಭಾಗಗಳಲ್ಲಿ ನಿರೀಕ್ಷೆಗಿಂತಲೂ ಹೆಚ್ಚು ಚಂದಾದಾರರಾಗಿದ್ದಾರೆ. ಇದು ಭಾರತದಲ್ಲಿ ವೇಗವಾಗಿ ಬೆಳೆಯುತ್ತಿರುವ ದೂರದ ಓಟದ ತ್ವರಿತ ಬೆಳವಣಿಗೆಯನ್ನು ಬಿಂಬಿಸುತ್ತದೆ.

ಒಟ್ಟು 210,000 ಡಾಲರ್ ಬಹುಮಾನದೊಂದಿಗೆ, ವಿಶ್ವ ಅಥ್ಲೆಟಿಕ್ಸ್ ಗೋಲ್ಡ್ ಲೇಬಲ್ ರೇಸ್ ನಲ್ಲಿ ಉಗಾಂಡಾದ ಹಾರ್ಬರ್ಟ್ ಕಿಬೆಟ್ ಮತ್ತು ಹಾಲಿ ಚಾಂಪಿಯನ್ ಸಾರಾ ಚೆಲಂಗಟ್, ಹಾಲಿ ಚಾಂಪಿಯನ್ ಮತ್ತು ಕೂಟದ ದಾಖಲೆ ಹೋಲ್ಡರ್ ಭಾರತದ ಅಭಿಷೇಕ್ ಪಾಲ್ ಮತ್ತು ಸಂಜೀವಿನಿ ಜಾಧವ್ ಸೇರಿದಂತೆ ಪ್ರಮುಖ ಅಥ್ಲೀಟ್ ಗಳು ಓಟಕ್ಕೆ ಸಜ್ಜಾಗುತ್ತಿದ್ದಾರೆ.

# ಸಿಬಿಎಸ್‌ಇ ಬೋರ್ಡ್ ಪರೀಕ್ಷೆ ಈಗ ಜೆಇಇ ಮೇನ್‌ನಷ್ಟೇ ಕಠಿಣ

ಬೆಂಗಳೂರು



ಇತ್ತೀಚೆಗೆ ಪ್ರಕಟವಾದ 2026ನೇ ಸಾಲಿನ ಸಿಬಿಎಸ್‌ಇ 10ನೇ ತರಗತಿ ಪರೀಕ್ಷೆಯಲ್ಲಿ ಅಭೂತಪೂರ್ವ ಸಾಧನೆಗೈದ ವಿದ್ಯಾರ್ಥಿಗಳನ್ನು ಗೌರವಿಸುವ ನಿಟ್ಟಿನಲ್ಲಿ ನಾರಾಯಣ ಶಾಲೆಗಳ ವತಿಯಿಂದ ಶನಿವಾರ (ಏಪ್ರಿಲ್ 18ರಂದು) ಬೆಳ್ಳಂದೂರಿನ ನಾರಾಯಣ ಇ-ಟೆಕ್ನೊ ಶಾಲೆಯಲ್ಲಿ ವಿಶೇಷ 'ಯಶಸ್ಸಿನ ಸಮಾರಂಭ'ವನ್ನು ಅದ್ದೂರಿಯಾಗಿ ಆಯೋಜಿಸಲಾಗಿತ್ತು.

ಈ ಕಾರ್ಯಕ್ರಮದಲ್ಲಿ ನಾರಾಯಣ ಶಿಕ್ಷಣ ಸಂಸ್ಥೆಗಳ ನಿರ್ದೇಶಕಿ ಡಾ. ಸಿಂಧುರಾ ನಾರಾಯಣ ಅವರು ಭಾಗವಹಿಸಿ, ಅತ್ಯುತ್ತಮ ಅಂಕ ಗಳಿಸಿದ ಕರ್ನಾಟಕದ ಟಾಪರ್‌ಗಳು, ಮೇರು ಸಾಧನೆ ಮಾಡಿದ ವಿದ್ಯಾರ್ಥಿಗಳು ಹಾಗೂ ಅವರ ಪೋಷಕರನ್ನು ಸನ್ಮಾನಿಸಿ ಅಭಿನಂದಿಸಿದರು.

ಸಮಾರಂಭದಲ್ಲಿ ವಿದ್ಯಾರ್ಥಿಗಳು ಹಾಗೂ ಪೋಷಕರನ್ನು ಉದ್ದೇಶಿಸಿ ಮಾತನಾಡಿದ ಡಾ. ಸಿಂಧುರಾ ನಾರಾಯಣ ಅವರು, "ಇಂದಿನ ಸಿಬಿಎಸ್‌ಇ 10ನೇ ತರಗತಿಯ ಪರೀಕ್ಷೆಗಳು ಮೊದಲಿನಂತಿಲ್ಲ. ಪ್ರಶ್ನೆ ಪತ್ರಿಕೆಗಳಲ್ಲಿ ಕೇವಲ ಪಠ್ಯಪುಸ್ತಕದ ಸೈದ್ಧಾಂತಿಕ ಪ್ರಶ್ನೆಗಳಿರುವುದಿಲ್ಲ. ಬದಲಾಗಿ ಶೇ. 50ರಷ್ಟು 'ಸಾಮರ್ಥ್ಯ ಆಧಾರಿತ ಪ್ರಶ್ನೆಗಳೇ' ಇರುತ್ತವೆ. ಅಂದರೆ, ಪಠ್ಯಪುಸ್ತಕದಿಂದ ನೇರವಾಗಿ ಪ್ರಶ್ನೆಗಳನ್ನು ಕೇಳುವ ಬದಲು, ವಿದ್ಯಾರ್ಥಿಗಳ ವಿಶ್ಲೇಷಣಾ ಸಾಮರ್ಥ್ಯ, ಸಮಸ್ಯೆ ಪರಿಹರಿಸುವ ಕೌಶಲ್ಯ ಹಾಗೂ ವಿಷಯಗಳನ್ನು ಪರಸ್ಪರ ಲಿಂಕ್ ಮಾಡುವ ಸಾಮರ್ಥ್ಯವನ್ನು ಪರೀಕ್ಷಿಸಲಾಗುತ್ತದೆ. ಹೀಗಾಗಿ ಇದು ಬಹುತೇಕ ಜೆಇಇ ಮೇನ್ ಪರೀಕ್ಷೆ ಬರೆದಷ್ಟೇ ಸಮಾನವಾಗಿದೆ.

ಇಂತಹ ಕಠಿಣ ಸವಾಲಿನ ನಡುವೆಯೂ ನಮ್ಮ ವಿದ್ಯಾರ್ಥಿಗಳು ಅತ್ಯುತ್ತಮ ಸಾಧನೆ ಮಾಡಿದ್ದಾರೆ," ಎಂದು ಹರ್ಷ ವ್ಯಕ್ತಪಡಿಸಿದರು. ನಾರಾಯಣ ಶಾಲಾ ವಿದ್ಯಾರ್ಥಿಗಳ ಅಂಕಗಳ ವಿವರಗಳನ್ನು ಹಂಚಿಕೊಂಡ ಅವರು, "ದೇಶಾದ್ಯಂತ 500 ಅಂಕಗಳ ಪರೀಕ್ಷೆಯಲ್ಲಿ ಪಂಜಾಬ್‌ನ ನಮ್ಮ ವಿದ್ಯಾರ್ಥಿ 499 ಅಂಕಗಳೊಂದಿಗೆ ಟಾಪ್ ಸ್ಕೋರ್ ಮಾಡಿದ್ದಾರೆ.

# ಮಹಿಳೆಯರಲ್ಲಿ ಉದ್ಯೋಗಶೀಲತೆ ಹೆಚ್ಚಿಸಲು 'ದಿಶಾ' ಕಾರ್ಯಕ್ರಮ



ಮುಂಬೈ

ವೈವಿಧ್ಯಮಯ ಸಂಶೋಧನೆ ಮತ್ತು ಅಭಿವೃದ್ಧಿ-ಕೇಂದ್ರಿತ ಆಹಾರ ಹಾಗೂ ಕೃಷಿ-ವಹಿವಾಟಿನ ಉದ್ಯಮ ಸಮೂಹವಾಗಿರುವ ಗೋದ್ರೇಜ್ ಅಗ್ರೋವೆಟ್ ಲಿಮಿಟೆಡ್ (ಗೋದ್ರೇಜ್ ಅಗ್ರೋವೆಟ್), ತನ್ನ ಕೃಷಿಯಲ್ಲಿ ಮಹಿಳೆಯರು ಶೃಂಗಸಭೆಯ ಮೂರನೇ ಆವೃತ್ತಿಯಲ್ಲಿ ಮಹಿಳಾ ವೃತ್ತಿ ವೇಗವರ್ಧಕ ಕಾರ್ಯಕ್ರಮವಾಗಿರುವ ದಿಶಾ ಆರಂಭಿಸಿರುವುದಾಗಿ ಪ್ರಕಟಿಸಿದೆ.

ಈ ಉಪಕ್ರಮವು ಎಲ್ಲರನ್ನೂ ಒಳಗೊಳ್ಳುವ, ಭವಿಷ್ಯಕ್ಕೆ ಸಿದ್ಧವಾಗಿರುವ ಕೃಷಿ ಪ್ರತಿಭಾನ್ವಿತರನ್ನು ರೂಪಿಸುವ ಕಂಪನಿಯ ಬದ್ಧತೆಯನ್ನು ಬಲಪಡಿಸುತ್ತದೆ.

ಗೋದ್ರೇಜ್ ಅಗ್ರೋವೆಟ್ ಕಾರ್ಪೋರೇಟ್ ಸಾಮಾಜಿಕ ಹೊಣೆಗಾರಿಕೆ ಉಪಕ್ರಮವಾಗಿರುವ ದಿಶಾ ಕಾರ್ಯಕ್ರಮವನ್ನು ಬಿ.ಎಸ್ಸಿ. ಕೃಷಿ ಮತ್ತು ಸಂಬಂಧಿತ ವಿಷಯಗಳಲ್ಲಿ ಕಲಿಯುವ ವಿದ್ಯಾರ್ಥಿನಿಯರಲ್ಲಿ ಉದ್ಯೋಗಶೀಲತೆ ಬಲಪಡಿಸಲು ನೆರವಾಗುವ ರೀತಿಯಲ್ಲಿ ವಿನ್ಯಾಸಗೊಳಿಸಲಾಗಿದೆ.

# ದೈವೀಕ ಅಭಿನಯದಿಂದ ಮನದುಂಬಿದ ಸ್ಮಿತಳ ಚೈತನ್ಯಪೂರ್ಣ ನರ್ತನ

ಅದೊಂದು ಭಾವಪೂರ್ಣ ನೃತ್ಯ ಪ್ರದರ್ಶನದ ಸಂದರ್ಭ. ಖ್ಯಾತ ನೃತ್ಯಗುರು ವಿದುಷಿ. ಭಾನುಪ್ರಿಯ ರಾಕೇಶ್ ಅವರ ಬದ್ಧತೆಯ ಗರಡಿಯಲ್ಲಿ ರೂಹು ತಳೆದು ಬಂದ ಕಲಾಶಿಲ್ಪ ಸ್ಮಿತಾ ರಾಮಣ್ಣ ಬಹು ಸಂವೇದನಾಶೀಲತೆಯಿಂದ ಮೈಮರೆತು ಸೊಗಸಾಗಿ ಅಭಿನಯಿಸಿದ ಕೃತಿಗಳ ದೈವೀಕ ಪ್ರಸ್ತುತಿ.

ಪಾತ್ರವೇ ತಾನಾಗಿ ಭಾವತೀವ್ರತೆಯ ಪರಾಕಾಷ್ಠೆಯಿಂದ ಮೈದುಂಬಿ ಅಭಿನಯಿಸಿದ ಕಲಾವಿದೆ ಸ್ಮಿತಾ ತನ್ನ ರಂಗಪ್ರವೇಶದಲ್ಲಿ ನೆರೆದಿದ್ದ ಕಲಾರಸಿಕರ ಮನವನ್ನು ಸೂರೆಗೊಂಡಳು. ಉದಯೋನ್ಮುಖ ನೃತ್ಯ ಕಲಾವಿದೆ ಕು. ಸ್ಮಿತಾ ರಾಮಣ್ಣ ಅಂದು ಮೀನಾಕ್ಷಿ ರಂಗಮಂಚ್ ಆಡಿಟೋರಿಯಂನಲ್ಲಿ ತನ್ನ ನೃತ್ಯಗುರು ಅರ್ಕ ಕಲಾಕುಟೀರದ ಆಚಾರ್ಯ ಭಾನುಪ್ರಿಯಾ ರಾಕೇಶ್ ಅವರಿಂದ ಪಡೆದುಕೊಂಡ ಉತ್ತಮ ಶಿಕ್ಷಣದ ಪ್ರತಿಬಿಂಬವಾಗಿ 'ಮಾರ್ಗ' ಸಂಪ್ರದಾಯದಲ್ಲಿ



ಕೃತಿಗಳನ್ನು ಹೃದಯಸ್ಪರ್ಶಿಯಾಗಿ ಅರ್ಪಿಸಿದಳು. ಆಕೆಯ ಪ್ರತಿ ಹೃದಯಸ್ಪರ್ಶೀ ಅಭಿನಯದ ಅಂತ್ಯದಲ್ಲೂ ನೆರೆದ ಕಲಾಸ್ತೋಮ ಮೆಚ್ಚುಗೆಯಿಂದ ಜೋರು ಕರತಾಡನ ಮಾಡುತ್ತಿದರು. ನೃತ್ತ-ನೃತ್ಯ- ಅಭಿನಯಗಳ ಸಮಾಗಮ ಬಹು ಹದವಾಗಿತ್ತು.

ಕಲಾವಿದೆ ಸ್ಮಿತಾ, ರಮಣೀಯ ನೃತ್ತಗಳ 'ಪುಷ್ಪಾಂಜಲಿ' ಯಿಂದ ಆರಂಭಿಸಿ, ಸಾಂಪ್ರದಾಯಕ ಅಲರಿಪುವಿನ ಅಂಗಶುದ್ಧ ಆಂಗಿಕಾಭಿನಯ, ನೃತ್ತ ಸೌಂದರ್ಯದಲ್ಲಿ ಗಮನ ಸೆಳೆದು, ಬಹು ಭಕ್ತಿ ತಾದತ್ಮ್ಯತೆಯಿಂದ ದೈವೀಕತೆಯೇ ಮೆರೆದ ಭಕ್ತಿಪ್ರಧಾನವಾಗಿದ್ದ 'ದೇವೀ ಕೃತಿ' ಮೈ ನವಿರೇಳಿಸಿತು. ನಂತರ ಪ್ರಸ್ತುತಿಯ ಹೃದಯ ಭಾಗ ಅಷ್ಟೇ ಹೃದಯವಾಗಿಯೂ ಮನತಟ್ಟಿದ 'ವರ್ಣ' . -ವಿರಹೋತ್ಕಂಠಿತ ನಾಯಕಿ – ಶ್ರೀಕೃಷ್ಣನಲ್ಲಿ ತನಗಿದ್ದ ಅತೀವ ಪ್ರೇಮದ ಪಾರಮ್ಯವನ್ನು ನಿವೇದಿಸುವ ಅವಳ ವಿರಹೋಲ್ಲಾಪ, ದುಃಖ, ತುಮುಲ-ತಲ್ಲಣಗಳ ಪರಾಕಾಷ್ಠೆ ವಿಷಾದದ ಭಾವದಲ್ಲಿ ಅನುರಣಿಸಿತು. ಗಾಯಕ ರೋಹಿತ್ ಭಟ್ಟರ ಭಾವಪೂರ್ಣ ಕಂಠದ ಗಾಯನ ಈ ಕೃತಿಯ ಸಾರಸರ್ವಸ್ವವನ್ನು ಎತ್ತಿ ಹಿಡಿಯಲು ಸಫಲವಾಯಿತು. ಕಲಾವಿದೆಯ ಭಾವ ತಲ್ಲಣವನ್ನು ಉದ್ದೀಪನಗೊಳಿಸಿದ ವಾದ್ಯವೃಂದದವರ ಸಹಕಾರ ಅಮೋಘವಾಗಿತ್ತು. ದ್ವಿತೀಯಾರ್ಧದಲ್ಲಿ – ಲೋಕಧರ್ಮೀಯ ಕೃತಿಯಲ್ಲಿ ವ್ಯಕ್ತವಾದ ಕಲಾವಿದೆಯ ನವಿರು ಭಾವನೆಗಳ ಮುದಾಭಿವ್ಯಕ್ತಿ, ಹುಸಿ ಮುನಿಸು-ನಾಟಕೀಯ ಸನ್ನಿವೇಶದಲ್ಲಿ ಪರಿಣಾಮ ಬೀರಿತು.

ನಂತರ ಕೊನೆಯಲ್ಲಿ – ಸಂಭ್ರಮದ ಸುಮ್ಮಾನವನ್ನು ನರ್ತಕಿ ತನ್ನ ವಿವಿಧ ವಿನ್ಯಾಸಗಳಲ್ಲಿ ಹೊರಚೆಲ್ಲುವ 'ತಿಲ್ಲಾನ' ಮತ್ತು ಭಕ್ತಿ ನೈವೇದ್ಯದ ಮಂಗಳದೊಂದಿಗೆ ತನ್ನ ಸೊಗಸಾದ ಪ್ರಸ್ತುತಿಯನ್ನು ಸಂಪನ್ನಗೊಳಿಸಿದಳು. ಗುರು ಭಾನು ತಮ್ಮ ಲಯಾತ್ಮಕ ನಟುವಾಂಗದ ಬನಿಯಲ್ಲಿ ಕಲಾವಿದೆಗೆ ಚೈತನ್ಯ ತುಂಬಿ ನರ್ತನಕ್ಕೆ ಚೆಂದದ ಆಯಾಮ ನೀಡಿದರು.



# ಕಾಂಗ್ರೆಸ್ ನಿರ್ಧಾರಕ್ಕೆ ಮುಬಾರಕ್ ಆಕ್ರೋಶ

ಕೋಲಾರ

ರಾಜ್ಯ ಕಾಂಗ್ರೆಸ್ ಪಕ್ಷವು ಮುಸ್ಲಿಂ ಸಮುದಾಯದ ಪ್ರಭಾವಿ ನಾಯಕರಾದ ನಸೀರ್ ಅಹ್ಮದ್ ಹಾಗೂ ಜಮೀರ್ ಅಹ್ಮದ್ ಖಾನ್ ಅವರ ಸ್ಥಾನಮಾನವನ್ನು ವಜಾಗೊಳಿಸಿರುವುದು ಆಘಾತಕಾರಿ ಬೆಳವಣಿಗೆ ಎಂದು ನಗರಸಭೆಯ ಮಾಜಿ ಅಧ್ಯಕ್ಷ ಬಿ.ಎಂ. ಮುಬಾರಕ್ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.



ನಗರದ ಪತ್ರಕರ್ತರ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮುಸ್ಲಿಂ ಸಮುದಾಯವು ಕಾಂಗ್ರೆಸ್ ಪಕ್ಷದ ಮೇಲೆ ಹಾಗೂ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಮೇಲೆ ಇಟ್ಟಿದ್ದ ನಂಬಿಕೆಗೆ ಇದು ದೊಡ್ಡ ಹೊಡೆತವಾಗಿದೆ ಎಂದು ಹೇಳಿದರು.

ಬೀದರ್‌ನಿಂದ ಕೋಲಾರವರೆಗೆ ನಸೀರ್ ಅಹ್ಮದ್ ಮತ್ತು ಜಮೀರ್ ಅಹ್ಮದ್ ಅವರು ತಮ್ಮ ವೈಯಕ್ತಿಕ ಕಾರ್ಯಗಳನ್ನು ಬದಿಗೊತ್ತಿ ಅಲ್ಪಸಂಖ್ಯಾತ ಸಮುದಾಯವನ್ನು ಸಂಘಟಿಸಿ, 2023ರ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಭಾರೀ ಬೆಂಬಲ ತಂದುಕೊಟ್ಟಿದ್ದಾರೆ ಎಂದು ಅವರು ವಿವರಿಸಿದರು. ಮುಸ್ಲಿಂ ಸಮುದಾಯದ ಸುಮಾರು 90 ಶೇಕಡಾ ಮತಗಳನ್ನು ಕಾಂಗ್ರೆಸ್ ಪರ ಒಗ್ಗೂಡಿಸಿ, 134 ಸ್ಥಾನಗಳ ಗೆಲುವಿಗೆ ಕಾರಣರಾಗಿದೆ.

# ‘ಔಷಧ, ಐಸಿಯು ಕೊರತೆ, ಸ್ವಚ್ಛತೆ ಕಾಪಾಡದಿದ್ದರೆ ಕಠಿಣ ಕ್ರಮ’



ಬೆಂಗಳೂರು

ಸರ್ಕಾರಿ ಆಸ್ಪತ್ರೆಗಳಲ್ಲಿ ಔಷಧ ಕೊರತೆ, ಅಸಮರ್ಪಕ ಐಸಿಯು ನಿರ್ವಹಣೆ ಮತ್ತು ಸ್ವಚ್ಛತೆ ಕಾಪಾಡದಿರುವ ಬಗ್ಗೆ ನಿರಂತರ ದೂರುಗಳು ಬರುತ್ತಿವೆ. ಇದೇ ರೀತಿ ಮುಂದುವರಿದರೆ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಜೀವನೋಪಾಯ ಮತ್ತು ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಶರಣಪ್ರಕಾಶ್ ಆರ್.ಪಾಟೀಲ್ ಎಚ್ಚರಿಸಿದ್ದಾರೆ.

ವಿಕಾಸಸೌಧದಲ್ಲಿ ಶುಕ್ರವಾರ ನಡೆದ ಇಲಾಖಾ ಪರಿಶೀಲನಾ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದ ಡಾ. ಪಾಟೀಲ್, ಲೋಕಾಯುಕ್ತರು ಮಾಡಿದ ಅವಲೋಕನಗಳು ಮತ್ತು ವೈದ್ಯಕೀಯ ಶಿಕ್ಷಣ ಇಲಾಖೆಯ ಅಡಿಯಲ್ಲಿ ಕಾರ್ಯನಿರ್ವಹಿಸುವ ಆಸ್ಪತ್ರೆಗಳಲ್ಲಿ ಔಷಧ ಲಭ್ಯತೆಯ ಬಗ್ಗೆ ವ್ಯಾಪಕ ದೂರುಗಳು ಬಂದಿರುವ ಬಗ್ಗೆ ಉಲ್ಲೇಖಿಸಿದರು.

ಔಷಧ ಖರೀದಿ ಪ್ರಕ್ರಿಯೆಯನ್ನು ಸಮರ್ಪಕವಾಗಿ ನಡೆಸಲು ಆಸ್ಪತ್ರೆ ಮುಖ್ಯಸ್ಥರಿಗೆ ಜವಾಬ್ದಾರಿ ವಹಿಸಲಾಗಿದೆ. ಮೊದಲು ಔಷಧ ದಾಸ್ತಾನು ಖಾಲಿಯಾಗುವವರೆಗೆ ಏಕೆ ಕಾಯುತ್ತೀರಿ?" ಎಲ್ಲಾ ಸರ್ಕಾರಿ ಆಸ್ಪತ್ರೆ ಮತ್ತು ಕಾಲೇಜು ಮುಖ್ಯಸ್ಥರು ಕನಿಷ್ಠ ಮೂರು ತಿಂಗಳ ಮುಂಚಿತವಾಗಿ ಖರೀದಿ ಟೆಂಡರ್ ಪ್ರಕ್ರಿಯೆ ಆರಂಭಿಸಬೇಕು ಎಂದು ಸಚಿವರು ಆದೇಶಿಸಿದರು.

ಐಸಿಯು ಹಾಸಿಗೆಗಳ ಕೊರತೆಯ ಬಗ್ಗೆಯೂ ಸಾಕಷ್ಟು ದೂರುಗಳು ಬಂದಿವೆ. ವಿಕ್ಟೋರಿಯಾ ಆಸ್ಪತ್ರೆಯ ಆಘಾತ ಮತ್ತು ತುರ್ತು ಆರೈಕೆ ಕೇಂದ್ರದ ಮುಖ್ಯಸ್ಥರಿಂದ ವಿವರಣೆ ಪಡೆದುಕೊಂಡಿದ್ದೇನೆ.

ಹೆಚ್ಚುವರಿ ಐಸಿಯು ಹಾಸಿಗೆಗಳಿಗಾಗಿ 10 ಅಂತಸ್ತಿನ ವಿಕ್ಟೋರಿಯಾ ಆಸ್ಪತ್ರೆ ಕಟ್ಟಡದಲ್ಲಿ ಮಹಡಿಯನ್ನು ಗೊತ್ತುಪಡಿಸುವಂತೆ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಮೊಹಮ್ಮದ್ ಮೋಶಿನ್ ಮತ್ತು ವೈದ್ಯಕೀಯ ಶಿಕ್ಷಣ ನಿರ್ದೇಶಕಿ ಡಾ.ಬಿ.ಎಲ್. ಸುಜಾತಾ ರಾಥೋಡ್ ಅವರಿಗೆ ಸಚಿವರು ಸೂಚಿಸಿದರು.

ಹೊಸ ಕಟ್ಟಡವನ್ನು ಮೇ 2 ರಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಉದ್ಘಾಟಿಸಲಿದ್ದಾರೆ ಎಂದು ಡಾ. ಪಾಟೀಲ್ ಇದೇ ಸಂದರ್ಭದಲ್ಲಿ ಮಾಹಿತಿ ನೀಡಿದರು. ನೈರ್ಮಲ್ಯ ಮತ್ತು ಲಿಫ್ಟ್ ವಿಷಯದ ಬಗ್ಗೆಯೂ ಅಧಿಕಾರಿಗಳನ್ನು ಸಚಿವರು ತರಾಟೆಗೆ ತೆಗೆದುಕೊಂಡರು.

ಇಲಾಖೆಯ ಎಂಜಿನಿಯರಿಂಗ್ ವಿಭಾಗವು ಬಾಕಿ ಇರುವ ನಾಗರಿಕ ಕಾಮಗಾರಿಗಳನ್ನು ತ್ವರಿತವಾಗಿ ಪೂರ್ಣಗೊಳಿಸಬೇಕು. ಮೇ ಅಂತ್ಯದವರೆಗೆ ಗಡುವು ನೀಡಲಾಗಿದೆ ಎಂದು ತಿಳಿಸಿದರು.

ಆಯುಷ್ಮಾನ್ ಭಾರತ್ – ಆರೋಗ್ಯ ಕರ್ನಾಟಕ ಯೋಜನೆಯಡಿ ಶೇ. 100 ರಷ್ಟು ಬಿಲ್ ಪಡೆಯದಿರುವುದು ಸರಿಯಲ್ಲ. ಕೆಲವು ಸಂಸ್ಥೆಗಳು ಶೇ. 60% ರಷ್ಟು ಮಾತ್ರ ಪಡೆದುಕೊಂಡಿವೆ. 100% ಪಡೆದರೆ ಸ್ವಾವಲಂಬಿ ಆಗಬಹುದು.

ಈ ವಿಷಯದಲ್ಲಿ ಯಾವುದೇ ಲೋಪ ಕಂಡುಬರಬಾರದ " ಎಂದು ಡಾ. ಶರಣಪ್ರಕಾಶ್ ಪಾಟೀಲ್ ಎಚ್ಚರಿಸಿದರು.

# ಆಯಾ ವರ್ಷವೇ ಪ್ರಶಸ್ತಿ ನೀಡಲು ಕ್ರಮ: ಕೆ.ವಿ.ಪ್ರಭಾಕರ್

ಬೆಂಗಳೂರು

‘ಸಿನಿಮಾ, ಸಾಹಿತ್ಯ, ಕಲೆ, ಪತ್ರಿಕೋದ್ಯಮ ಸೇರಿ ಎಲ್ಲ ಕ್ಷೇತ್ರಗಳ ಪ್ರಶಸ್ತಿ, ಪುರಸ್ಕಾರಗಳನ್ನು ಆಯಾ ವರ್ಷವೇ ಕೊಡಬೇಕು ಎನ್ನುವುದು ಮುಖ್ಯಮಂತ್ರಿಯವರ ಖಚಿತ ನಿಲುವು’ ಎಂದು ಮುಖ್ಯಮಂತ್ರಿಯವರ ಮಾಧ್ಯಮ ಸಲಹೆಗಾರ ಕೆ.ವಿ.ಪ್ರಭಾಕರ್ ತಿಳಿಸಿದರು.

ವಾರ್ಷಿಕ ಚಲನಚಿತ್ರ ಪ್ರಶಸ್ತಿ ಮತ್ತು ಸಹಾಯಧನ ಆಯ್ಕೆ ಸಮಿತಿಗಳು ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಸನ್ಮಾನ ಸ್ವೀಕರಿಸಿ ಮಾತನಾಡಿದರು.

‘ಹಿಂದಿನ ಸರ್ಕಾರದ ಅವಧಿಯಿಂದ ಬಾಕಿ ಉಳಿದಿದ್ದ ಪ್ರಶಸ್ತಿಗಳನ್ನು ನೀಡಲಾಗಿದೆ. ಪ್ರಶಸ್ತಿಗಳಿಗೆ ಅರ್ಹರನ್ನು ಆಯ್ಕೆ ಮಾಡುವುದು ಅತ್ಯಂತ ಸೂಕ್ಷ್ಮ ಮತ್ತು



ಸಹನೆಯಿಂದ ಆಗಬೇಕಾದ ಕಾರ್ಯ. ಎಲ್ಲ ಹೆಸರುಗಳೂ ಆಯ್ಕೆ ಸಮಿತಿ ಮೂಲಕವೇ ಬರಬೇಕು. ಆಯ್ಕೆ ಸಮಿತಿಗೆ ಅಗತ್ಯವಾದ ಸಮಯಾವಕಾಶ ಕೊಡಬೇಕು ಎನ್ನುವ ಕಾರಣಕ್ಕೇ ಹಂತ ಹಂತವಾಗಿ ಕೆಲಸಗಳು ನಡೆಯುತ್ತಿವೆ’ ಎಂದು ವಿವರಿಸಿದರು.

ಪ್ರಶಸ್ತಿಗೆ ಅರ್ಹರನ್ನು ಆರಿಸುವುದು ಎಷ್ಟು ಸೂಕ್ಷ್ಮವಾದ ವಿಷಯವೋ, ಆಯ್ಕೆ ಸಮಿತಿ ಸದಸ್ಯರನ್ನು ಆರಿಸುವುದೂ ಅಷ್ಟೇ ಸೂಕ್ಷ್ಮ ಸಂಗತಿ. ಹತ್ತು ಹಲವು ಸೂಕ್ಷ್ಮಗಳನ್ನು ಗಮನದಲ್ಲಿ ಇಟ್ಟುಕೊಂಡು ಯಾವುದೇ ತಕರಾರುಗಳು ಇಲ್ಲದಂತೆ ಪ್ರಶಸ್ತಿಗಳಿಗೆ ಆಯ್ಕೆ ನಡೆದಿರುವುದು ಸಮಾಧಾನಕರ ಸಂಗತಿ ಎಂದರು.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಆಯುಕ್ತ ಹೇಮಂತ್ ನಿಂಬಾಳ್ಕರ್, ಸಮಿತಿಗಳ ಅಧ್ಯಕ್ಷರಾದ ಬಾ.ನಾ. ಸುಬ್ರಮಣ್ಯ, ಬಿ.ಎಸ್. ಲಿಂಗದೇವರು, ಬಿ. ರಾಮಮೂರ್ತಿ, ಸದಾಶಿವ ಶೆಣೈ, ವೀರಪ್ಪ ಮರಳವಾಡಿ, ನಟಿ ಪ್ರೇಮಾ, ಗಾಯಕಿ ಚಂದ್ರಿಕಾ ಗುರುರಾಜ್, ನಟಿ ಪಂಚಮಿ ಅನ್ಸಾರಿ ಉಪಸ್ಥಿತರಿದ್ದರು.

# ಯುರೇನಿಯಂ ಹಸ್ತಾಂತರಿಸಲು ಇರಾನ್ ಒಪ್ಪಿಗೆ

ವಾಷಿಂಗ್ಟನ್

ಇರಾನ್ ತನ್ನಲ್ಲಿ ಸಮೃದ್ಧವಾಗಿರುವ ಯುರೇನಿಯಂ ಹಸ್ತಾಂತರಿಸಲು ಒಪ್ಪಿಕೊಂಡಿದೆ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ತಿಳಿಸಿದ್ದಾರೆ. ಯುದ್ಧ ಕೊನೆಗೊಳ್ಳುವ ಸಮಯ ಹತ್ತಿರದಲ್ಲಿದೆ ಎಂದು ಹೇಳಿದ್ದಾರೆ.

ಶ್ವೇತಭವನದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಟ್ರಂಪ್, ಅವರು ನಮಗೆ ಪರಮಾಣು ಧೂಳನ್ನು ಹಿಂತಿರುಗಿಸಲು ಒಪ್ಪಿಕೊಂಡಿದ್ದಾರೆ. ನಾವು ಒಪ್ಪಂದ ಮಾಡಿಕೊಳ್ಳಲು ಉತ್ತಮ ಅವಕಾಶವಿದೆ ಎಂದು ಟ್ರಂಪ್ ತಿಳಿಸಿದ್ದಾರೆ.

ಅಮೆರಿಕ ಮತ್ತು ಇರಾನ್ ಅತ್ಯಂತ ಯಶಸ್ವಿ ಮಾತುಕತೆ ನಡೆಸುತ್ತಿವೆ. ಒಪ್ಪಂದವಾದರೆ ತೈಲ ಸಮಸ್ಯೆ ಬಗೆಹರಿಯುತ್ತದೆ. ಹಾರ್ಮುಜ್ ಜಲಸಂಧಿ ಮುಕ್ತವಾಗಿ ಎಲ್ಲವೂ ಚೆನ್ನಾಗಿರುತ್ತದೆ ಎಂದು ಟ್ರಂಪ್ ಆಶಯ ವ್ಯಕ್ತಪಡಿಸಿದ್ದಾರೆ.

ಕಳೆದ ವಾರಾಂತ್ಯದಲ್ಲಿ ಇಸ್ಲಾಮಾಬಾದ್‌ನಲ್ಲಿ ನಡೆದ 21 ಗಂಟೆಗಳ ಶಾಂತಿ ಮಾತುಕತೆಯಲ್ಲಿ ಅಮೆರಿಕ ಮತ್ತು ಇರಾನ್ ಒಪ್ಪಂದಕ್ಕೆ ಬರಲು ವಿಫಲವಾಗಿದ್ದವು. ಪರಮಾಣು ಶಸ್ತ್ರಾಸ್ತ್ರ ಹೊಂದಬಾರದು ಎಂಬ ಅಮೆರಿಕದ ಷರತ್ತನ್ನು ಆಗ ಒಪ್ಪಿಕೊಳ್ಳಲು ಇರಾನ್ ನಿರಾಕರಿಸಿತ್ತು.

# ಕಾಂಗ್ರೆಸ್, ಡಿಎಂಕೆ ಮೇಲೆ ಹೆಚ್.ಡಿ.ಕುಮಾರಸ್ವಾಮಿ ತೀವ್ರ ವಾಗ್ದಾಳಿ

ನವದೆಹಲಿ

ಲೋಕಸಭೆ ಮತ್ತು ವಿಧಾನಸಭೆಗಳಲ್ಲಿ ಮಹಿಳೆಯರಿಗೆ 33% ಮೀಸಲಾತಿ ನೀಡುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರ ಇರಿಸಿರುವ ಹೆಜ್ಜೆ ಐತಿಹಾಸಿಕ ಎಂದು ಬಣ್ಣಿಸಿದ ಕೇಂದ್ರ ಸಚಿವರಾದ ಹೆಚ್.ಡಿ. ಕುಮಾರಸ್ವಾಮಿ ಅವರು; ಇದೇ ಸಂದರ್ಭದಲ್ಲಿ ಕಾಂಗ್ರೆಸ್ ಹಾಗೂ ಡಿಎಂಕೆ ಪಕ್ಷಗಳ ವಾದಗಳು ಭಯ ಹುಟ್ಟಿಸುವ ರೀತಿಯಲ್ಲಿವೆ ಎಂದು ಕಳವಳ ವ್ಯಕ್ತಪಡಿಸಿದರು.

ಲೋಕಸಭೆಯಲ್ಲಿ ಶುಕ್ರವಾರ ಮಹಿಳಾ ಮೀಸಲು ಮಸೂದೆಯನ್ನು ಬೆಂಬಲಿಸಿ ಮಾತನಾಡಿದ ಕೇಂದ್ರ ಸಚಿವರು; ಮಹಿಳೆಯರಿಗೆ ಮೀಸಲಾತಿ ನೀಡುವ ನಿಟ್ಟಿನಲ್ಲಿ ಈ ಮಸೂದೆಯು ಭಾರತದ ಪ್ರಜಾಪ್ರಭುತ್ವದ ಪಯಣದಲ್ಲಿ ಕ್ರಾಂತ ಕ್ರಾಂತಿಕಾರಕ ಹೆಜ್ಜೆಯಾಗಿದೆ ಎಂದರು.

ಕಾಂಗ್ರೆಸ್ ಪಕ್ಷವು ನಿರಂತರವಾಗಿ ಸುಧಾರಣೆಗಳಿಗೆ ವ್ಯವಸ್ಥಿತವಾಗಿ ತಡೆಯೊಡ್ಡುತ್ತಿದೆ. ಈ ಮಸೂದೆಯನ್ನು ಬೆಂಬಲಿಸುವುದನ್ನು ಬಿಟ್ಟು ಜನರನ್ನು ದಾರಿತಪ್ಪಿಸುವ ಸಂಕಥನಗಳನ್ನು ಸೃಷ್ಟಿಸುತ್ತಿದೆ. ಕಾಂಗ್ರೆಸ್ ಸೃಷ್ಟಿಸುತ್ತಿರುವ ಗೊಂದಲಗಳಿಗೆ ಅರ್ಥವಿಲ್ಲ, ಅವುಗಳನ್ನು ಜನರು ನಂಬುವುದಿಲ್ಲ ಹಾಗೂ ಸಂಕುಚಿತ ಸಂಕಥನಗಳ ಕಾಂಗ್ರೆಸ್ ವಾದವು ರಾಷ್ಟ್ರದ ವಿಶಾಲ ತಳಹದಿಯ ಭಾವನೆಯನ್ನು ಪ್ರತಿಬಿಂಬಿಸುವುದಿಲ್ಲ ಎಂದು ಅವರು ಸ್ಪಷ್ಟ ಮಾತುಗಳಲ್ಲಿ ಹೇಳಿದರು.

ಮಸೂದೆಯ ಬಗ್ಗೆ ತಮಿಳುನಾಡು ಮುಖ್ಯಮಂತ್ರಿ ಎಂ.ಕೆ. ಸ್ಟಾಲಿನ್ ಅವರು ತೆಗೆದುಕೊಂಡ ನಿಲುವು ಎಲ್ಲಾ ದಕ್ಷಿಣದ ರಾಜ್ಯಗಳ ಅಭಿಪ್ರಾಯವಲ್ಲ ನೇರ ಮಾತುಗಳಲ್ಲಿ ಹೇಳಿದ ಕೇಂದ್ರ ಸಚಿವರು; ಇಂದು ನಾವು ಯಾವ ಮಸೂದೆಯ ಬಗ್ಗೆ ಚರ್ಚೆ ನಡೆಸುತ್ತಿದ್ದೇವೆಯೋ ಅದನ್ನು ಮುಕ್ತವಾಗಿ ಬೆಂಬಲಿಸಿರುವ ಆಂಧ್ರ ಪ್ರದೇಶದ ಮುಖ್ಯಮಂತ್ರಿ ಚಂದ್ರಬಾಬು ನಾಯ್ಡು ಅವರನ್ನು ಶ್ಲಾಘಿಸಿ, ನಾಯ್ಡು ಅವರಿಗೇನು ರಾಷ್ಟ್ರಪ್ರೇಮ ಇಲ್ಲವೇ? ಇಂದು ಪ್ರಶ್ನಿಸಿದರು.



ತಮಿಳುನಾಡಿನಲ್ಲಿ ಅಧಿಕಾರದಲ್ಲಿರುವ ಡಿಎಂಕೆ ಈ ಮಹತ್ವದ ಮಸೂದೆಗಳನ್ನು ತೀವ್ರವಾಗಿ ವಿರೋಧಿಸುತ್ತಿರುವುದು ಮತ್ತು ಅವುಗಳು ದಕ್ಷಿಣದ ರಾಜ್ಯಗಳ ಮೇಲೆ ಭಾರಿ ಪ್ರತಿಕೂಲ ಪರಿಣಾಮ ಬೀರುತ್ತವೆ ಎಂಬ ಕಳವಳವನ್ನು ವ್ಯಕ್ತಪಡಿಸಿದೆ. ಇದು ಸರಿಯಲ್ಲ, ಅನಗತ್ಯವಾಗಿದೆ ಎಂದು ಕೇಂದ್ರ ಸಚಿವರು ಪ್ರತಿಪಾದಿಸಿದರು.

ಕಾಂಗ್ರೆಸ್ ಮತ್ತು ಡಿಎಂಕೆ ಮೈತ್ರಿಯನ್ನು ಗುರಿಯಾಗಿಸಿಕೊಂಡು ವಾಗ್ದಾಳಿ ನಡೆಸಿದ ಕುಮಾರಸ್ವಾಮಿ ಅವರು; ರಾಹುಲ್ ಗಾಂಧಿ ಅವರು ಕೆಲ ದಿನಗಳ ಹಿಂದೆ, ತಾವು ಸ್ಟಾಲಿನ್ ಅವರ ಕಿರಿಯ ಸಹೋದರ ಎಂದು ಹೇಳಿಕೊಂಡಿದ್ದರು. ಆದರೆ ವಿಧಾನಸಭೆ ಕ್ಷೇತ್ರಗಳ ಹಂಚಿಕೆ ನಂತರ ಹಿರಿಯ ಸಹೋದರ ಕಿರಿಯ ಸಹೋದರನ ಮೇಲೆ ಮುನಿಸಿಕೊಂಡಂತೆ ಕಾಣುತ್ತಿದೆ. ಆದರೂ ಕಿರಿಯ ಸಹೋದರ ಈಗಲೂ ಹಿರಿಯ ಸಹೋದರನಿಂದ ಪ್ರೀತಿಯನ್ನು ನಿರೀಕ್ಷೆ ಮಾಡುತ್ತಿರುವಂತೆ ತೋರುತ್ತಿದೆ ಎಂದು ತರಾಟೆಗೆ ತೆಗೆದುಕೊಂಡರು.

ಮಹಿಳಾ ಮೀಸಲಾತಿ, ಅದರಲ್ಲೂ ಮುಖ್ಯವಾಗಿ ಅನುಪಾತದ ಪ್ರಾತಿನಿಧ್ಯದ ಬಗ್ಗೆ ರಾಹುಲ್ ಗಾಂಧಿ ಅವರ ನಿಲುವಿನಲ್ಲಿ ಸ್ಪಷ್ಟತೆ ಇಲ್ಲ ಎಂದು ಟೀಕಿಸಿದ ಸಚಿವ ಕುಮಾರಸ್ವಾಮಿ ಅವರು; ರಾಹುಲ್.ಗಾಂಧಿ ಅವರು ತಮಿಳುನಾಡು ಬಗ್ಗೆ ನೀಡುತ್ತಿರುವ ಹೇಳಿಕೆಯನ್ನು ಉತ್ತರ ಪ್ರದೇಶ, ಬಿಹಾರ ಅಥವಾ ಮಧ್ಯಪ್ರದೇಶಕ್ಕೆ ಹೋಗಿ ಹೇಳುತ್ತಾರೆಯೇ? ಎಂದು ಖಾರವಾಗಿ ಪ್ರಶ್ನಿಸಿದರು.

ಕ್ಷೇತ್ರ ಮರು ವಿಂಗಡಣೆಯ ಬಗ್ಗೆ ಪ್ರತಿಪಕ್ಷಗಳ ಕಳವಳಕ್ಕೆ ಅರ್ಥವಿಲ್ಲ. ಸರ್ಕಾರವು ಎಲ್ಲಾ ರಾಜ್ಯಗಳಲ್ಲಿ ಸ್ಥಾನಗಳಲ್ಲಿ ಸರಾಸರಿ ಶೇ.50ರಷ್ಟು ಕ್ಷೇತ್ರಗಳನ್ನು ಹೆಚ್ಚಿಸುವ ಏಕರೂಪ ಬದ್ಧತೆಯನ್ನು ಖಚಿತಪಡಿಸಿದೆ.

ಯಾವುದೇ ರಾಜ್ಯವು ತನ್ನ ಪ್ರಸ್ತುತ ಪ್ರಾತಿನಿಧ್ಯವನ್ನು ಕಳೆದುಕೊಳ್ಳುವುದಿಲ್ಲ ಹಾಗೂ ಭಾರತವು ತನ್ನ ಅಪಾರ ಜನಸಂಖ್ಯೆಯ ಹೊರತಾಗಿಯೂ ಬ್ರಿಟನ್ ನಂತಹ ದೇಶಕ್ಕಿಂತ ಕಡಿಮೆ ಚುನಾಯಿತ ಪ್ರತಿನಿಧಿಗಳನ್ನು ಹೊಂದಿದೆ. ಹೀಗಾಗಿ ಸಂಸದರ ಸಂಖ್ಯೆಯನ್ನು ಹೆಚ್ಚಿಸುವ ಅಗತ್ಯವಿದೆ ಎಂದು ಅವರು ಅಭಿಪ್ರಾಯಪಟ್ಟರು.

ಸ್ವಾತಂತ್ರ್ಯ ಬಂದು 75 ವರ್ಷಗಳ ನಂತರ ಬಹುದೊಡ್ಡ ಪರಿವರ್ತನಾತ್ಮಕ ಸುಧಾರಣೆಗೆ ಪ್ರಧಾನಿಗಳು ನಾಂದಿ ಹಾಡಿದ್ದಾರೆ ಎಂದ ಸಚಿವರು; ಪ್ರಧಾನಿಗಳ ನೇತೃತ್ವದಲ್ಲಿ ಭಾರತವು ದೃಢವಾದ ಮತ್ತು ಅರ್ಥಪೂರ್ಣ ಪರಿವರ್ತನೆಯತ್ತ ಸಾಗುತ್ತಿದೆ. ಇಡೀ ಜಗತ್ತು ಯುದ್ಧಗಳಿಂದ ತಲ್ಲಣಿಸುತ್ತಿದ್ದರೆ ಭಾರತ ಮಾತ್ರ ಸುಧಾರಣೆಗಳತ್ತ ದೃಢ ಸಂಕಲ್ಪದಿಂದ ಹೊರಳಿದೆ ಎಂದು ಒತ್ತಿ ಹೇಳಿದರು.

ನಾನು ಕೂಡ ಈ ಐತಿಹಾಸಿಕ ಸಂದರ್ಭಕ್ಕೆ ಭಾಗವಾಗಿರುವುದು ನನಗೆ ಅತೀವ ಸಂತೋಷ ತಂದಿದೆ ಎಂದು ಹೇಳಿದ ಸಚಿವರು; ಈ ಮೀಸಲಾತಿಯನ್ನು ನಾವು ಔದಾರ್ಯವೆಂದು ನೋಡಬಾರದು. ವಾಸ್ತವವಾಗಿ, ಇದು ನಮ್ಮ ಸಮಾಜದಲ್ಲಿ ಮಹಿಳೆಯರ ಶಕ್ತಿ ಮತ್ತು ಕೊಡುಗೆಗೆ ಮನ್ನಣೆ, ಗೌರವ ನೀಡುವುದಾಗಿದೆ. ತಾಯಿಯೇ ಮೊದಲ ಗುರು ಮತ್ತು ಮಹಿಳೆಯೊಬ್ಬರು ಕಲಿತರೆ ಶಾಲೆಯೊಂದನ್ನು ತೆರೆದಂತೆ ಎಂಬ ಮಾತನ್ನು ನಾವೆಲ್ಲರೂ ಕೇಳಿದ್ದೇವೆ. ಶಾಸನಸಭೆಗಳಲ್ಲಿ ಮಹಿಳೆಯರಿಗೆ ಹೆಚ್ಚು ಅವಕಾಶ ನೀಡುವ ಮೂಲಕ ಪ್ರಜಾಪ್ರಭುತ್ವದ ಅಡಿಪಾಯವನ್ನು ಮತ್ತಷ್ಟು ಬಲಪಡಿಸಲಾಗುತ್ತಿದೆ. ಈ ಐತಿಹಾಸಿಕ ದಿನದಂದು ಭಾರತಮಾತೆ ನಮ್ಮೆಲ್ಲರ ಬಗ್ಗೆ ಹೆಮ್ಮೆಪಡುತ್ತಿದ್ದಾಳೆ ಎಂದು ನಾನು ನಂಬಿದ್ದೇನೆ ಎಂದು ಪ್ರತಿಪಾದಿಸಿದರು.

# ವಿಪತ್ತು ನಿರ್ವಹಣಾ ಯೋಜನೆ–2026 ಬಿಡುಗಡೆ



ಹುಬ್ಬಳ್ಳಿ

ಹುಬ್ಬಳ್ಳಿ ರೈಲ್ವೆ ವಿಭಾಗದಲ್ಲಿ ಪರಿಷ್ಕೃತ “ವಿಪತ್ತು ನಿರ್ವಹಣಾ ಯೋಜನೆ–2026” ಅನ್ನು ಅಧಿಕೃತವಾಗಿ ಬಿಡುಗಡೆ ಮಾಡಲಾಗಿದೆ.

ವಿಭಾಗೀಯ ರೈಲ್ವೆ ವ್ಯವಸ್ಥಾಪಕರಾದ ಬೇಲಾ ಮೀನಾ ಅವರು ವಿಭಾಗೀಯ ಕಚೇರಿಯಲ್ಲಿ ಈ ಯೋಜನೆಯನ್ನು ಬಿಡುಗಡೆ ಮಾಡಿದರು.

ಈ ಯೋಜನೆ ವಿಪತ್ತುಗಳ ಸಂದರ್ಭದಲ್ಲಿ ಕೈಗೊಳ್ಳಬೇಕಾದ ಕ್ರಮಗಳು ಮತ್ತು ಚಟುವಟಿಕೆಗಳಿಗೆ ಸಮಗ್ರ ಮಾರ್ಗದರ್ಶನ ನೀಡುತ್ತದೆ. 2005ರ ವಿಪತ್ತು ನಿರ್ವಹಣಾ ಕಾಯ್ದೆ ಹಾಗೂ ರಾಷ್ಟ್ರೀಯ ವಿಪತ್ತು ನಿರ್ವಹಣಾ ಪ್ರಾಧಿಕಾರ ಮಾರ್ಗಸೂಚಿಗಳ ಪ್ರಕಾರ ಇದನ್ನು ಸಿದ್ಧಪಡಿಸಲಾಗಿದೆ.

ಭೂಕಂಪ, ಪ್ರವಾಹ ಸೇರಿದಂತೆ ನೈಸರ್ಗಿಕ ವಿಪತ್ತುಗಳು ಹಾಗೂ ರಾಸಾಯನಿಕ ಅಪಾಯಗಳಂತಹ ತುರ್ತು ಪರಿಸ್ಥಿತಿಗಳನ್ನು ಸಮರ್ಥವಾಗಿ ನಿರ್ವಹಿಸುವ ವಿಧಾನಗಳನ್ನು ಈ ಯೋಜನೆ ವಿವರಿಸುತ್ತದೆ.

ಇದಲ್ಲದೆ, ರೈಲ್ವೆಯ ವಿವಿಧ ಇಲಾಖೆಗಳು, ರಕ್ಷಣಾ ಪಡೆಗಳು ಹಾಗೂ ವಿಪತ್ತು ನಿರ್ವಹಣಾ ಸಂಸ್ಥೆಗಳ ನಡುವೆ ಸಮನ್ವಯ ಸಾಧಿಸುವುದಕ್ಕೆ ವಿಶೇಷ ಒತ್ತು ನೀಡಲಾಗಿದೆ.

ಭಾರತೀಯ ರೈಲ್ವೆ, ರಾಜ್ಯ ಸರ್ಕಾರದ ರಕ್ಷಣಾ ಸಂಸ್ಥೆಗಳು, ಸ್ವಯಂಸೇವಾ ಸಂಸ್ಥೆಗಳು ಮತ್ತು ಸಾರ್ವಜನಿಕ ವಲಯದ ಸಂಸ್ಥೆಗಳ ಪಾತ್ರಗಳನ್ನು ಸ್ಪಷ್ಟವಾಗಿ ನಿರ್ದಿಷ್ಟಗೊಳಿಸಲಾಗಿದೆ.

# ದೆಹಲಿಯಲ್ಲಿ ರಾಜತಾಂತ್ರಿಕರೊಂದಿಗಿನ ಸಂವಾದ ಯಶಸ್ವಿ

ನವದೆಹಲಿ

ತಂತ್ರಜ್ಞಾನದ ಜೊತೆಗೆ ವ್ಯಾಪಾರ, ನಾವೀನ್ಯತೆ, ಜನರ ಸಹಯೋಗ ಹಾಗೂ ವಿಶ್ವದೊಂದಿಗಿನ ಪಾಲುದಾರಿಕೆಯತ್ತ ಕರ್ನಾಟಕ ಆಸಕ್ತಿ ಹೊಂದಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ವಿವಿಧ ದೇಶಗಳ ರಾಯಭಾರಿಗಳು ಹಾಗೂ ರಾಜತಾಂತ್ರಿಕರೊಂದಿಗೆ ನಡೆದ ಸಂವಾದ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು.

ಕರ್ನಾಟಕವು ಜಾಗತಿಕ ನಾವೀನ್ಯತಾ ಕೇಂದ್ರ ಮತ್ತು ಹೂಡಿಕೆಯ ಆದ್ಯತಾ ತಾಣವಾಗಿರುವುದನ್ನು ಪ್ರಮುಖವಾಗಿ ಪ್ರಸ್ತಾಪಿಸಿದ ಉಪ ಮುಖ್ಯಮಂತ್ರಿ ಡಿ. ಕೆ. ಶಿವಕುಮಾರ್ ಅವರು, ಬೆಂಗಳೂರು ಕೇವಲ ಭೇಟಿ ನೀಡುವ ನಗರವಲ್ಲ. ಕನಸುಗಳನ್ನು ಕಟ್ಟಿಕೊಳ್ಳುವ, ಭವಿಷ್ಯ ರೂಪಿಸುವ ನಗರವಾಗಿದೆ. ಎಲ್ಲರನ್ನೂ, ಎಲ್ಲದನ್ನೂ ಸ್ವಾಗತಿಸುವ ಅದರ ಮುಕ್ತ ಧೋರಣೆ, ಸದೃಢ ಪರಿಸರ ವ್ಯವಸ್ಥೆ ಮತ್ತು ಉತ್ತಮ ಜೀವನಮಟ್ಟದಿಂದ ಜಾಗತಿಕ ಪ್ರತಿಭೆ, ನಾವೀನ್ಯತೆ ಹಾಗೂ ಹೂಡಿಕೆಗಳನ್ನು ನಿರಂತರವಾಗಿ ಸೆಳೆಯುತ್ತಾ, ಅವಕಾಶಗಳ ನಗರವಾಗಿ ಮುಂದುವರಿಯುತ್ತಿದೆ ಎಂದರು.

ನಾವೀನ್ಯತೆ ನೇತೃತ್ವದಲ್ಲಿನ ಬೆಳವಣಿಗೆ ಮತ್ತು ಅಂತರರಾಷ್ಟ್ರೀಯ ಪಾಲುದಾರಿಕೆ ಕುರಿತು ಮಾತನಾಡಿದ ಐಟಿ, ಬಿಟಿ ಸಚಿವ ಪ್ರಿಯಾಂಕ್ ಖರ್ಗೆ ಅವರು, "ಕರ್ನಾಟಕವು ಬಂಡವಾಳ ಹೂಡಿಕೆಗಷ್ಟೇ ಸೀಮಿತವಾದ ಸುಪ್ತ ಪಾಲುದಾರಿಕೆಯಲ್ಲಿ ಆಸಕ್ತಿ ಹೊಂದಿರದೆ, ದೀರ್ಘಾವಧಿಯ, ನಿರ್ದಿಷ್ಟ ಫಲಿತಾಂಶ ಆಧಾರಿತ ನಾವೀನ್ಯತೆಯ ಸಹಯೋಗಗಳನ್ನು ಕಾರ್ಯಗತಗೊಳಿಸಲು ನೆರವಾಗುವ ಪಾಲುದಾರರ ಹುಡುಕಾಟದಲ್ಲಿ ಇದೆ" ಎಂದರು.

ಕರ್ನಾಟಕವು ತಂತ್ರಜ್ಞಾನ ಕೇಂದ್ರದಿಂದ ಜಾಗತಿಕ ನಾವೀನ್ಯತೆಯ




ಪ್ರಮುಖ ಪಾಲುದಾರ ತಾಣವಾಗಿ ಅಭಿವೃದ್ಧಿಗೊಂಡಿದ್ದು, ನೀತಿ–ನಿರೂಪಣೆಯ ನೆರವು, ನವೋದ್ಯಮಗಳನ್ನು ಜಾಗತಿಕ ಮಟ್ಟಕ್ಕೆ ಬೆಳೆಸಲು ಅಗತ್ಯ ಬೆಂಬಲ, ಸಂಶೋಧನಾ ಸಹಯೋಗ ಮತ್ತು ಮಾರುಕಟ್ಟೆ ಲಭ್ಯತೆ ಅವಕಾಶಗಳನ್ನು ಒದಗಿಸುವ ಮೂಲಕ, ಹೂಡಿಕೆದಾರರು ಮತ್ತು ಉದ್ಯಮಿಗಳಿಗೆ ಆಕರ್ಷಕ ಕೇಂದ್ರವಾಗಿ ಹೊರಹೊಮ್ಮುತ್ತಿದೆ ಎಂದು ವಿವಿಧ ದೇಶಗಳ ರಾಜತಾಂತ್ರಿಕರು ಬಣ್ಣಿಸಿದ್ದಾರೆ.

ಇದು ತಂತ್ರಜ್ಞಾನ, ನಾವೀನ್ಯತೆ ಮತ್ತು ಜಾಗತಿಕ ಸಹಭಾಗಿತ್ವಗಳ ಮೇಲೆ ಕೇಂದ್ರೀಕೃತವಾಗಿದ್ದ, ರಾಜ್ಯ ಸರ್ಕಾರದ ನೇತೃತ್ವದಲ್ಲಿ ನಡೆದ ಭಾರತದ ಅತ್ಯಂತ ಪ್ರಮುಖ ರಾಜತಾಂತ್ರಿಕ ಕಾರ್ಯಕ್ರಮಗಳಲ್ಲಿ ಒಂದಾಗಿದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಸಂವಾದ ಕಾರ್ಯಕ್ರಮದಲ್ಲಿ ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳ ಸಚಿವ ಎಂ.ಬಿ ಪಾಟೀಲ ಮತ್ತು ಎಲೆಕ್ಟ್ರಾನಿಕ್ಸ್, ವಿವಿಧ ಇಲಾಖೆಯ ಉನ್ನತ ಅಧಿಕಾರಿಗಳು ಮತ್ತು ಜಾಗತಿಕ ಉದ್ಯಮ ದಿಗ್ಗಜರು ಭಾಗವಹಿಸಿದ್ದರು.

45ಕ್ಕೂ ಹೆಚ್ಚು ರಾಯಭಾರಿಗಳು ಮತ್ತು ಹೈಕಮಿಷನರ್‌ಗಳು ಸೇರಿದಂತೆ 80ಕ್ಕೂ ಹೆಚ್ಚು ದೇಶಗಳ ಹಿರಿಯ ರಾಜತಾಂತ್ರಿಕ ಪ್ರತಿನಿಧಿಗಳೂ ಕಾರ್ಯಕ್ರಮದಲ್ಲಿ ತಮ್ಮ ಅನಿಸಿಕೆಗಳನ್ನು ಹಂಚಿಕೊಂಡರು.

ಜಾಗತಿಕ ಸಂಸ್ಥೆಗಳು ಮತ್ತು ಕೈಗಾರಿಕೆ ಮತ್ತು ಸರ್ಕಾರದ ಹಿರಿಯ ಪಾಲುದಾರರನ್ನು ಒಳಗೊಂಡ 140ಕ್ಕೂ ಹೆಚ್ಚು ಜನರು ಪಾಲ್ಗೊಂಡಿದ್ದರು.

ಅಂತರರಾಷ್ಟ್ರೀಯ ಪ್ರಮುಖ ವ್ಯಾಪಾರ ಮತ್ತು ಹೂಡಿಕೆ ಸಂಸ್ಥೆಗಳ ಭಾಗವಹಿಸುವಿಕೆಯೂ ಗಮನ ಸೆಳೆಯಿತು. ಇದು ಸರ್ಕಾರದಿಂದ ಸರ್ಕಾರಕ್ಕೆ ಮತ್ತು ವಾಣಿಜ್ಯ ವಹಿವಾಟಿನಿಂದ ಸರ್ಕಾರದ ಜೊತೆಗಿನ ಸಹಯೋಗವನ್ನು ಕಾರ್ಯಗತಗೊಳಿಸುವ ಪ್ರಕ್ರಿಯೆಯನ್ನು ಮತ್ತಷ್ಟು ಬಲಪಡಿಸುವತ್ತ ಮಹತ್ವದ ಹೆಜ್ಜೆಯಾಗಿದೆ.

ಸ್ವಿಟ್ಜರ್ಲೆಂಡ್, ಸೌದಿ ಅರೇಬಿಯಾ, ಡೆನ್ಮಾರ್ಕ್, ಫ್ರಾನ್ಸ್, ಈಜಿಪ್ಟ್, ಮಲೇಷ್ಯಾ, ಜಪಾನ್, ಜರ್ಮನಿ ಹಾಗೂ ಭೂತಾನ್ ಸೇರಿದಂತೆ ಪ್ರಮುಖ ಪಾಲುದಾರ ರಾಷ್ಟ್ರಗಳ ರಾಜತಾಂತ್ರಿಕ ಪ್ರತಿನಿಧಿಗಳು ಸಂವಾದದಲ್ಲಿ ಭಾಗವಹಿಸಿದ್ದರು. ಹಲವಾರು ರಾಯಭಾರಿಗಳು ಮತ್ತು ಪ್ರತಿನಿಧಿಗಳು ಮಾತನಾಡಿ ಕರ್ನಾಟಕದ ಜೊತೆಗಿನ ವಿವಿಧ ದೇಶಗಳ ಗಾಢವಾದ ಮತ್ತು ಬೆಳೆಯುತ್ತಿರುವ ಪಾಲುದಾರಿಕೆಯ ಮೇಲೆ ಬೆಳಕು ಚೆಲ್ಲಿದರು.

ಜಾಗತಿಕ ನಾವೀನ್ಯತಾ ಮೈತ್ರಿಕೂಟ (ಜಿಐಎ) –ದಂತಹ ರಚನಾತ್ಮಕ ವೇದಿಕೆಗಳ ಮೂಲಕ ಭಾರತದ ನಾವೀನ್ಯತೆ ವ್ಯವಸ್ಥೆಯ ಜೊತೆ ಗಾಢ ಸಂಬಂಧವನ್ನು ಕಾರ್ಯಗತಗೊಳಿಸಲು ರಾಜ್ಯ ಸರ್ಕಾರ ಕೈಗೊಂಡ ಕ್ರಮಗಳನ್ನು ಶ್ಲಾಘಿಸಿದರು.

# ‘ಕಾಂಗ್ರೆಸ್ ಪಕ್ಷ ಇರುವುದೇ ಎಲ್ಲ ಸಮುದಾಯಗಳ ಒಳಿತಿಗೆ’

ಬೆಂಗಳೂರು

“ಸಿದ್ದರಾಮಯ್ಯ ಮತ್ತು ನಾನು ಒಟ್ಟಿಗೇ ಇದ್ದೇವೆ. ಪ್ರತಿದಿನ ಜತೆಯಲ್ಲೇ ಕೂರುತ್ತೇವೆ, ಚರ್ಚಿಸುತ್ತೇವೆ. ಎಲ್ಲಿದೆ ನಮ್ಮಲ್ಲಿ ಗುಂಪು ಎಂಬುದು? ಎಲ್ಲರೂ ನಮ್ಮ ಶಾಸಕರೇ. ಮಾಧ್ಯಮಗಳೇ ನಮ್ಮನ್ನು ಇಬ್ಭಾಗ ಮಾಡುತ್ತಿವೆ” ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ಹೇಳಿದರು.

ಸಿದ್ದರಾಮಯ್ಯ ಅವರೊಟ್ಟಿಗೆ ಒಂದೇ ವಿಮಾನದಲ್ಲಿ ಬಹಳ ದಿನಗಳ ನಂತರ ಪ್ರಯಾಣ ಮಾಡುತ್ತಿದ್ದೀರಲ್ಲಾ ಎಂಬ ಮಾಧ್ಯಮದವರ ಪ್ರಶ್ನೆಗೆ ಸಿಟ್ಟಾದ ಡಿ ಕೆ ಶಿವಕುಮಾರ್ ಅವರು, “ನಿಮಗೆ ತಲೆ ಕೆಟ್ಟಿದೆ ಎನಿಸುತ್ತಿದೆ. ಎಲ್ಲಿದೆ ನನ್ನ ಮತ್ತು ಸಿದ್ದರಾಮಯ್ಯ ಗುಂಪು. ನೀವೇ ಗುಂಪು ಸೃಷ್ಟಿ ಮಾಡುತ್ತಿದ್ದೀರಿ. ದೆಹಲಿಯಲ್ಲಿ ಸಿದ್ದರಾಮಯ್ಯ ಅವರ ಗುಂಪು ಎಂದು ಹೇಳಿದ್ದೀರಿ. ಅವರೇನೂ ಸಿದ್ದರಾಮಯ್ಯ ಗುಂಪು ಎಂದು ಬೋರ್ಡ್ ಹಾಕಿಕೊಂಡಿದ್ದಾರೆಯೇ? ಅಥವಾ ನನ್ನ ಗುಂಪು ಎಂದು ನಾನು ಬೋರ್ಡ್ ಹಾಕಿಕೊಂಡಿದ್ದೇನೆಯೇ? ಎಲ್ಲ 139 ಶಾಸಕರು ನನ್ನ ಹಾಗೂ ಸಿದ್ದರಾಮಯ್ಯ ಅವರ ಶಾಸಕರೇ ಆಗಿದ್ದಾರೆ. ಯಾವ ಗುಂಪೂ ಇಲ್ಲ, ಬೋರ್ಡೂ ಇಲ್ಲ. ನಿಮಗೆ ಗೊತ್ತಿದೆಯೇ ಯಾರ್ಯಾರ ಗುಂಪು ಏನಿದೆ ಅಂತ? ನಿಮಗೆ ಹೆಂಗೆ ಬೇಕೋ ಹಂಗೆ ಚಟಕ್ಕೆ ಬರೆಯುತ್ತಾ ಇದ್ದೀರಿ” ಎಂದರು.

ನಿಮ್ಮ ಪಕ್ಷದಲ್ಲಿ ಒಬ್ಬೊಬ್ಬರು ಒಂದೊಂದು ಹೇಳಿಕೆ ನೀಡುತ್ತಾ ಇದ್ದಾರಲ್ಲಾ ಎಂದು ಕೇಳಿದಾಗ, “ಯಾವ ಹೇಳಿಕೆಯೂ ಇಲ್ಲ. ಯಾವ ಗುಂಪೂ ಇಲ್ಲ. 139 ಶಾಸಕರು ನನ್ನದೇ ಗುಂಪು. ಕಾಂಗ್ರೆಸ್ ಗುಂಪು. ನಮಗೆ ಪಕ್ಷ ಹಾಗೂ ಪಕ್ಷದ ಹಿತ ಮುಖ್ಯ. ಪಕ್ಷದ ಅಭಿವೃದ್ಧಿಗೆ ಹಾಗೂ ಅದರ ಒಳಿತಿಗೆ ಏನು ಬೇಕು ಎಂಬುದರ ಬಗ್ಗೆ ಚರ್ಚೆ ನಡೆಸಿದ್ದೇವೆ. ನಾವೆಲ್ಲ ಒಟ್ಟಿಗೆ ಸೇರಿ ಕೆಲಸ ಮಾಡುತ್ತಿದ್ದೇವೆ, ಮಾಡುತ್ತೇವೆ” ಎಂದರು.



ಜಬ್ಬಾರ್ ಹಾಗೂ ನಸೀರ್ ಅಹ್ಮದ್ ಅವರ ವಿರುದ್ಧ ಕ್ರಮ ಕೈಗೊಂಡಿರುವುದರ ಬಗ್ಗೆಯೂ ಮಾತನಾಡುತ್ತೇನೆ ಎಂದು ಸತೀಶ್ ಜಾರಕಿಹೊಳಿ ಅವರು ಹೇಳಿದ್ದರ ಬಗ್ಗೆ ಕೇಳಿದಾಗ, “ಇಲ್ಲಿ ಯಾವುದೇ ವೈಯಕ್ತಿಕ ವಿಚಾರಗಳು ಇಲ್ಲ. ಪಕ್ಷಕ್ಕೆ ತನ್ನದೇ ಆದ ರೀತಿ–ರಿವಾಜುಗಳಿವೆ. ಎಂಎಲ್ ಎ, ಎಂಎಲ್ ಸಿ ವಿಚಾರವಾಗಿ ದೆಹಲಿ ನಾಯಕರು ಏನೂ ಹೇಳದೇ, ಅವರು ಏನೂ ಸೂಚನೆ ಕೊಡದೆ, ನಾವು ಏನೂ ಮಾಡಲೂ ಆಗುವುದಿಲ್ಲ. ಕೆಲವನ್ನು ಮಾರ್ಗದರ್ಶನದ ಅನುಸಾರವಾಗಿ ಮಾಡಬೇಕಾಗುತ್ತದೆ. ಕೆಲವರು ನನ್ನ ಮೇಲೆ ದೂರಬಹುದು. ಹಾಗೇ ನನ್ನ ಮೇಲೆ ಹೇಳಿದರೂ ಚಿಂತೆಯಿಲ್ಲ. ಪಕ್ಷದ ಶಿಸ್ತಿನ ಚೌಕಟ್ಟಿನಲ್ಲಿ ನಾವೆಲ್ಲರೂ ಕೆಲಸ ಮಾಡಬೇಕಾಗುತ್ತದೆ” ಎಂದರು.

“ನಾನು ಹಾಗೂ ಸತೀಶ್ ಜಾರಕಿಹೊಳಿ ಅವರು ಬೆಂಗಳೂರಿನ ಟ್ರಾಫಿಕ್ ಅನ್ನು ಹೇಗೆ ನಿಯಂತ್ರಣ ಮತ್ತು ಕಡಿಮೆ ಮಾಡಬೇಕು ಎನ್ನುವ ವಿಚಾರವಾಗಿ ಚರ್ಚೆ ನಡೆಸಿದ್ದೇವೆ. ನೆಲಮಂಗಲದಿಂದ ಗೊರಗುಂಟೆಪಾಳ್ಯದವರೆಗೆ ಹೆಚ್ಚು ವಾಹನ ಸಂಚಾರ ದಟ್ಟಣೆ ಇದೆ. ರಾಷ್ಟ್ರೀಯ ಹಾಗೂ ರಾಜ್ಯ ಹೆದ್ದಾರಿಗಳ ಮೂಲಕ ನಗರದ ಒಳಗೆ ವಾಹನಗಳು ಬರದಂತೆ ಹೇಗೆ ಬದಲಿ ವ್ಯವಸ್ಥೆ ಮಾಡಬಹುದು. ನೈಸ್ ರಸ್ತೆಗೆ ಮುನ್ನ ಯಾವ ವ್ಯವಸ್ಥೆ ಮಾಡಬಹುದು ಎಂದು ಚರ್ಚೆ ನಡೆಸಿದ್ದೇವೆ. ಈಗಾಗಲೇ ಬಿಜಿನೆಸ್ ಕಾರಿಡಾರ್ ಯೋಜನೆ ಕೈಗೆತ್ತಿಕೊಂಡಿದ್ದೇವೆ” ಎಂದರು.

ಮಹಿಳಾ ಮೀಸಲಾತಿ ಹಾಗೂ ಕ್ಷೇತ್ರ ಪುನರ್ ವಿಂಗಡಣೆ ಬಗ್ಗೆ ಕೇಂದ್ರದ ತರಾತುರಿ ನಿರ್ಧಾರದ ಬಗ್ಗೆ ಕೇಳಿದಾಗ, “ಅವರು ಏಕೆ ಆತುರದಲ್ಲಿ ಇದ್ದಾರೆ ಎಂದು ತಿಳಿಯುತ್ತಿಲ್ಲ. ಕಾಂಗ್ರೆಸ್ ಪಕ್ಷವು ಚೌಕಟ್ಟಿನ ಒಳಗೆ ಇದರ ಬಗ್ಗೆ ಸೂಕ್ತ ಚರ್ಚೆ ನಡೆಸಬೇಕು ಎಂದು ಬಯಸುತ್ತದೆ. ರಾಜಕೀಯ ಲಾಭಕ್ಕಾಗಿ ಯಾವುದೇ ಸ್ಪಷ್ಟನೆ ಇಲ್ಲದೇ ಈ ನಿರ್ಧಾರವನ್ನು ಬಿಜೆಪಿ ತೆಗೆದುಕೊಳ್ಳುತ್ತಿದೆ. ಇದು ಒಳ್ಳೆಯದಲ್ಲ” ಎಂದರು.

“ಬಿಜೆಪಿಯವರು ಅಭದ್ರತೆ ಎದುರಿಸುತ್ತಿದ್ದಾರೆ. ಅದಕ್ಕೆ ಈ ವಿಚಾರದ ಬಗ್ಗೆ ತರಾತುರಿಯಲ್ಲಿದ್ದಾರೆ. ಸೋನಿಯಾ ಗಾಂಧಿ ಅವರ ನೇತೃತ್ವದಲ್ಲಿ ಈ ಹಿಂದೆ ಈ ಬಗ್ಗೆ ತೀರ್ಮಾನ ಆಗಿತ್ತು” ಎಂದರು. ಕ್ಷೇತ್ರ ಪುನರ್ ವಿಂಗಡಣೆ ವಿರೋಧಿಸಿ ತಮಿಳುನಾಡಿನ ನಿಲುವಿನ ಬಗ್ಗೆ ಕೇಳಿದಾಗ, “ಕ್ಷೇತ್ರ ಪುನರ್ ವಿಂಗಡಣೆ ಸರಿಯಾದ ಕ್ರಮವಲ್ಲ. ಇದು ಬೇಕಾಗಿಲ್ಲ” ಎಂದರು. ದೆಹಲಿ ಭೇಟಿ ಹಾಗೂ ಸಚಿವ ಸಂಪುಟ ವಿಸ್ತರಣೆ ಬಗ್ಗೆ ಕೇಳಿದಾಗ, “ಈಗ ಆ ವಿಚಾರ ಚರ್ಚೆಯಿಲ್ಲ. ಮೊದಲು ಚುನಾವಣೆಗಳನ್ನು ಮುಗಿಸೋಣ. ಮೊದಲ ಆದ್ಯತೆ ಚುನಾವಣೆಗೆ. ‘ಬ್ರಿಡ್ಜ್ ಟು ಬೆಂಗಳೂರು’ ಕಾರ್ಯಕ್ರಮ ನಿಮಿತ್ತ ನಾನು ಹಾಗೂ ಮುಖ್ಯಮಂತ್ರಿ ದೆಹಲಿಗೆ ತೆರಳುತ್ತಿದ್ದೇವೆ. ಇತರೇ ದೇಶಗಳ ರಾಯಭಾರಿಗಳು, ಉದ್ಯಮಿಗಳು ಸೇರಿದಂತೆ ಅನೇಕರು ಸೇರುತ್ತಿದ್ದಾರೆ. ಐಟಿ ಬಿಟಿ ಸಚಿವರು ಇದನ್ನು ಆಯೋಜಿಸಿದ್ದಾರೆ” ಎಂದು ತಿಳಿಸಿದರು.

# ಶಾಸಕ ಜಿ.ಮಂಜುನಾಥ್ ಅಪೀಲ್ ತಳ್ಳಿಹಾಕಿದ ಹೈಕೋರ್ಟ್

ಕೋಲಾರ

ದಶಕದಿಂದ ಮುಂದುವರಿದ ಜಾತಿ ಪ್ರಮಾಣಪತ್ರ ವಿವಾದದಲ್ಲಿ ಮುಳಬಾಗಲ್ ಶಾಸಕ ಜಿ. ಮಂಜುನಾಥ್ ಅವರಿಗೆ ಮತ್ತೊಮ್ಮೆ ಕಾನೂನು ಹಿನ್ನಡೆಯಾಗಿದೆ. ಅವರು ಸಲ್ಲಿಸಿದ್ದ ರಿಟ್ ಅಪೀಲ್ ನಂ. 435/2024 ಅನ್ನು ಕರ್ನಾಟಕ ಹೈಕೋರ್ಟ್ ವಿಭಾಗೀಯ ಪೀಠ ತಳ್ಳಿಹಾಕಿದೆ.

ಮುಖ್ಯ ನ್ಯಾಯಮೂರ್ತಿ ವಿಭು ಬಾಖ್ರು ಹಾಗೂ ನ್ಯಾಯಮೂರ್ತಿ ಸಿ.ಎಂ. ಪೂಣಚ್ಚ ಅವರನ್ನೊಳಗೊಂಡ ಪೀಠ ಈ ತೀರ್ಪು ನೀಡಿದೆ. ಪ್ರಕರಣದ ಹಿನ್ನೆಲೆ ನೋಡಿದರೆ, ಮಂಜುನಾಥ್ ಅವರು 2012ರಲ್ಲಿ “ಬುಡಗ ಜಂಗಮ” (ಪರಿಶಿಷ್ಟ ಜಾತಿ) ಎಂದು ಜಾತಿ ಪ್ರಮಾಣಪತ್ರ ಪಡೆದು, ಮುಳಬಾಗಲ್ ಮೀಸಲು ಕ್ಷೇತ್ರದಿಂದ ಸ್ಪರ್ಧಿಸಿ ಶಾಸಕನಾಗಿ ಆಯ್ಕೆಯಾಗಿದ್ದರು. ಆದರೆ ಅವರ ಶಾಲಾ ದಾಖಲೆಗಳಲ್ಲಿ “ಬೈರಾಗಿ” (ಹಿಂದುಳಿದ ವರ್ಗ) ಎಂದು ನಮೂದಿರುವುದು ವಿವಾದಕ್ಕೆ ಕಾರಣವಾಗಿತ್ತು.

ಈ ಸಂಬಂಧ ಸಲ್ಲಿಸಲಾದ ಚುನಾವಣಾ ಅರ್ಜಿಯಲ್ಲಿ 2018ರಲ್ಲಿ ಹೈಕೋರ್ಟ್ ಅವರ ಆಯ್ಕೆಯನ್ನು ಅಮಾನ್ಯಗೊಳಿಸಿ, ಅವರು ಬುಡಗ ಜಂಗಮ ಸಮುದಾಯಕ್ಕೆ ಸೇರಿಲ್ಲ ಎಂದು ತೀರ್ಮಾನಿಸಿತ್ತು. ಬಳಿಕ ಸುಪ್ರೀಂ ಕೋರ್ಟ್ ಸೂಚನೆಯಂತೆ ಜಿಲ್ಲಾ ಜಾತಿ ಪರಿಶೀಲನಾ ಸಮಿತಿ ಮರು ತನಿಖೆ ನಡೆಸಿ, ಮಂಜುನಾಥ್ ಅವರು ಬೈರಾಗಿ ಸಮುದಾಯಕ್ಕೆ ಸೇರಿದವರೇ ಎಂದು ದೃಢಪಡಿಸಿತ್ತು.

ಈ ವರದಿಯನ್ನು ಪ್ರಶ್ನಿಸಿ ಅವರು ಸಲ್ಲಿಸಿದ್ದ ರಿಟ್ ಅರ್ಜಿಯನ್ನು ಏಕಸದಸ್ಯ ಪೀಠ ಈಗಾಗಲೇ ತಳ್ಳಿಹಾಕಿತ್ತು.

# ಜಾನುವಾರುಗಳ ತುರ್ತು ಚಿಕಿತ್ಸೆಗೆ 1962 ಸಹಾಯವಾಣಿ ಬಳಸಿ: ಡಿಸಿ

ಚಿಕ್ಕಬಳ್ಳಾಪುರ

ಜಿಲ್ಲೆಯ ರೈತರು ತಮ್ಮ ಜಾನುವಾರುಗಳ ತುರ್ತು ಚಿಕಿತ್ಸೆಗಾಗಿ ಇನ್ನು ಮುಂದೆ ಅಲೆದಾಡುವ ಅಗತ್ಯವಿಲ್ಲ. ಸರ್ಕಾರ ಜಾರಿಗೆ ತಂದಿರುವ 1962 ಉಚಿತ ದೂರವಾಣಿ ಸಂಖ್ಯೆಗೆ ಕರೆ ಮಾಡುವ ಮೂಲಕ ಮನೆ ಬಾಗಿಲಿಗೇ ಪಶು ವೈದ್ಯಕೀಯ ಸೇವೆ ಪಡೆಯಬಹುದು ಎಂದು ಜಿಲ್ಲಾಧಿಕಾರಿ ಜಿ.ಪ್ರಭು ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಸಂಚಾರಿ ಪಶುಚಿಕಿತ್ಸಾ ಘಟಕಗಳ ಪ್ರಗತಿ ಪರಿಶೀಲನೆ ಹಾಗೂ ಕಾಲುಬಾಯಿ ಜ್ವರ ಲಸಿಕಾ ಕಾರ್ಯಕ್ರಮದ ಸಭೆಯಲ್ಲಿ ಅವರು ಮಾತನಾಡಿದರು.



ಮನೆ ಬಾಗಿಲಿಗೆ ವೈದ್ಯರು: ಜಾನುವಾರುಗಳ ಹೆರಿಗೆ ಸಮಸ್ಯೆ, ಹೊಟ್ಟೆ ಉಬ್ಬರ, ಕಾಲು ಮುರಿತ ಅಥವಾ ವಿಷ ಪ್ರಾಶನದಂತಹ ತುರ್ತು ಸಂದರ್ಭಗಳಲ್ಲಿ ರೈತರು 1962 ಸಂಖ್ಯೆಗೆ ಕರೆ ಮಾಡಬಹುದು. ಜಿಲ್ಲೆಯ 8 ತಾಲ್ಲೂಕುಗಳಲ್ಲಿ 8 ಸಂಚಾರಿ ಘಟಕಗಳು ಇದಕ್ಕಾಗಿ ಸನ್ನದ್ಧವಾಗಿವೆ.

ಕಾಲುಬಾಯಿ ಜ್ವರ ಲಸಿಕಾ ಅಭಿಯಾನ: ರಾಷ್ಟ್ರೀಯ ಜಾನುವಾರು ರೋಗ ನಿಯಂತ್ರಣ ಯೋಜನೆಯಡಿ 9ನೇ ಹಂತದ ಲಸಿಕಾ ಅಭಿಯಾನವು ಜಿಲ್ಲೆಯಲ್ಲಿ ಏಪ್ರಿಲ್ 23 ರಿಂದ ಮೇ 22 ರವರೆಗೆ ನಡೆಯಲಿದೆ.

ಶೇ. 100 ರಷ್ಟು ಗುರಿ: ಜಿಲ್ಲೆಯಲ್ಲಿರುವ ಒಟ್ಟು 1,81,676 ದನ ಮತ್ತು ಎಮ್ಮೆಗಳಿಗೆ ಕಡ್ಡಾಯವಾಗಿ ಲಸಿಕೆ ಹಾಕಬೇಕು. ಈ ಪ್ರಗತಿಯನ್ನು 'ಭಾರತ್ ಪಶುಧನ್ ಪೋರ್ಟಲ್'ನಲ್ಲಿ ಅಪ್‌ಲೋಡ್ ಮಾಡಲು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಕಾಲುಬಾಯಿ ರೋಗವು ಗಾಳಿಯ ಮೂಲಕ ವೇಗವಾಗಿ ಹರಡುವುದರಿಂದ ಪ್ರತಿ 6 ತಿಂಗಳಿಗೊಮ್ಮೆ ಲಸಿಕೆ ಅನಿವಾರ್ಯವಾಗಿದೆ. ಲಸಿಕೆ ನೀಡುವ ದಿನಾಂಕಗಳ ಬಗ್ಗೆ ಗ್ರಾಮಗಳಲ್ಲಿ ಡಂಗೂರು ಹೊಡೆಸಲು ಹಾಗೂ ಹಾಲಿನ ಡೈರಿಗಳ ಮೂಲಕ ರೈತರಿಗೆ ಮಾಹಿತಿ ನೀಡಿ ಜಾಗೃತಿ ಮೂಡಿಸಲು ಪಶುಸಂಗೋಪನಾ ಇಲಾಖೆಯ ಅಧಿಕಾರಿಗಳಿಗೆ ಡಿಸಿ ಕಟ್ಟುನಿಟ್ಟಿನ ಆದೇಶ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ. ವೈ.ನವೀನ್ ಭಟ್, ಪಶುಪಾಲನಾ ಇಲಾಖೆಯ ಉಪನಿರ್ದೇಶಕ ಡಾ. ರಂಗಪ್ಪ, ತಾಲ್ಲೂಕು ಪಶು ವೈದ್ಯಾಧಿಕಾರಿಗಳು ಹಾಗೂ ಸಹಾಯಕ ನಿರ್ದೇಶಕರು ಹಾಜರಿದ್ದರು.

# ಯೋಜನೆಗಳು ಕಡತಕ್ಕೆ ಸೀಮಿತವಾಗಬಾರದು: ಕೋಲಾರ ಡಿಸಿ ಕಟ್ಟುನಿಟ್ಟಿನ ಸೂಚನೆ

ಕೋಲಾರ

ಜಿಲ್ಲೆಯಲ್ಲಿ ಅಲ್ಪಸಂಖ್ಯಾತರ ಶೈಕ್ಷಣಿಕ ಮತ್ತು ಸಾಮಾಜಿಕ ಅಭಿವೃದ್ಧಿಗಾಗಿ ಹಮ್ಮಿಕೊಳ್ಳಲಾಗಿರುವ ಯೋಜನೆಗಳು ಕೇವಲ ಕಡತಕ್ಕೆ ಸೀಮಿತವಾಗದೆ, ಜನಸಾಮಾನ್ಯರಿಗೆ ತಲುಪಬೇಕು ಎಂದು ಜಿಲ್ಲಾಧಿಕಾರಿ ಡಾ. ಎಂ. ಆರ್. ರವಿ ತಿಳಿಸಿದರು.

ಶುಕ್ರವಾರ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ನಡೆದ "ಪ್ರಧಾನ ಮಂತ್ರಿಗಳ 15 ಅಂಶಗಳ ಕಾರ್ಯಕ್ರಮ"ದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.



ಜಿಲ್ಲೆಯ ಅಲ್ಪಸಂಖ್ಯಾತ ಹೆಣ್ಣು ಮಕ್ಕಳ ಉನ್ನತ ಶಿಕ್ಷಣಕ್ಕೆ ಬಲ ನೀಡುವ ಉದ್ದೇಶದಿಂದ ಹೊಸದಾಗಿ 'ವಕ್ಫ್ ಮಹಿಳಾ ಪಿಯು ಕಾಲೇಜು' ಪ್ರಾರಂಭಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು. "ಕಟ್ಟಡದ ಲಭ್ಯತೆ ಇಲ್ಲ ಎಂಬ ನೆಪವೊಡ್ಡಿ ಶಿಕ್ಷಣವನ್ನು ಮುಂದೂಡಬಾರದು. ಸ್ವಂತ ಕಟ್ಟಡ ಸಿದ್ಧವಾಗುವವರೆಗೆ ನಗರಸಭೆಯ ಸಮುದಾಯ ಭವನ ಅಥವಾ ಸುಸಜ್ಜಿತ ಖಾಸಗಿ ಕಟ್ಟಡವನ್ನಾದರೂ ಬಾಡಿಗೆಗೆ ಪಡೆದು ತಕ್ಷಣವೇ ಶೈಕ್ಷಣಿಕ ಚಟುವಟಿಕೆಗಳನ್ನು ಆರಂಭಿಸಿ" ಎಂದು ಜಿಲ್ಲಾಧಿಕಾರಿಗಳು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧಿಕಾರಿಗಳಿಗೆ ಗಡುವು ನೀಡಿದರು.

ಗಾಜಲದಿನ್ನೆಯ ಮೊರಾರ್ಜಿ ದೇಸಾಯಿ ಮಾದರಿಯ ಸಿಬಿಎಸ್‌ಇ ಶಾಲೆಯು ಸತತವಾಗಿ ಶೇ. 100ರಷ್ಟು ಫಲಿತಾಂಶ ದಾಖಲಿಸುತ್ತಿರುವುದಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದ ಅವರು, ಜಿಲ್ಲೆಯ ಇತರ ಶಾಲೆಗಳು ಇವುಗಳನ್ನು ಮಾದರಿಯಾಗಿಟ್ಟುಕೊಳ್ಳಬೇಕು ಎಂದರು. ಈ ಸಾಧನೆ ಮಾಡಿದ ಶಿಕ್ಷಕರನ್ನು ಹಾಗೂ ಉತ್ತಮ ಅಂಕ ಗಳಿಸಿದ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಜಿಲ್ಲಾ ಮಟ್ಟದ ಸಮಾರಂಭದಲ್ಲಿ ಅಧಿಕೃತವಾಗಿ ಸನ್ಮಾನಿಸಿ ಗೌರವಿಸಲು ಅವರು ನಿರ್ದೇಶಿಸಿದರು.

ಬಂಗಾರಪೇಟೆ ಹಾಗೂ ಕೆಜಿಎಫ್ ಭಾಗದಲ್ಲಿ ನಿರ್ಮಾಣವಾಗುತ್ತಿರುವ ಅಲ್ಪಸಂಖ್ಯಾತ ವಿದ್ಯಾರ್ಥಿಗಳ ವಸತಿ ನಿಲಯಗಳ ಕಾಮಗಾರಿ ನಿಧಾನಗತಿಯಲ್ಲಿ ಸಾಗುತ್ತಿರುವುದಕ್ಕೆ ಜಿಲ್ಲಾಧಿಕಾರಿಗಳು ಅಸಮಾಧಾನ ವ್ಯಕ್ತಪಡಿಸಿದರು. ಮಳೆಗಾಲ ಆರಂಭವಾಗುವ ಮೊದಲೇ ಕಟ್ಟಡಗಳ ಒಳಾಂಗಣ ಕೆಲಸಗಳನ್ನು ಪೂರ್ಣಗೊಳಿಸಿ, ಪೀಠೋಪಕರಣ ಸೇರಿದಂತೆ ಅಗತ್ಯ ಸೌಲಭ್ಯಗಳೊಂದಿಗೆ ಪ್ರವೇಶಾತಿ ಪ್ರಕ್ರಿಯೆ ಆರಂಭಿಸುವಂತೆ ಎಂಜಿನಿಯರಿಂಗ್ ವಿಭಾಗಕ್ಕೆ ತಾಕೀತು ಮಾಡಿದರು.

ಜಿಲ್ಲೆಯಲ್ಲಿ ಶಿಕ್ಷಣ ಹಕ್ಕು ಕಾಯ್ದೆಯನ್ನು ಉಲ್ಲಂಘಿಸಿ ನಡೆಯುತ್ತಿರುವ ಅನಧಿಕೃತ ಶಾಲೆಗಳ ಪಟ್ಟಿಯನ್ನು ಸಿದ್ಧಪಡಿಸಲು ಬಿಇಒಗಳಿಗೆ ಸೂಚನೆ ನೀಡಲಾಯಿತು. "ಪೋಷಕರಿಂದ ಬಲವಂತವಾಗಿ ಡೊನೇಷನ್ ಪಡೆಯುವ ಅಥವಾ ಅತಿಯಾದ ಶುಲ್ಕ ವಸೂಲಿ ಮಾಡುವ ಶಾಲೆಗಳ ಮೇಲೆ ಮುಲಾಜಿಲ್ಲದೆ ಕ್ರಮ ಕೈಗೊಳ್ಳಿ. ಅಲ್ಪಸಂಖ್ಯಾತ ಸಮುದಾಯದ ಬಡ ಮಕ್ಕಳಿಗೆ ಶಿಕ್ಷಣ ಹೊರೆಯಾಗಬಾರದು" ಎಂದು ಅವರು ಎಚ್ಚರಿಕೆ ನೀಡಿದರು.

ಸರ್ಕಾರದ 'ಸರಳ ವಿವಾಹ' ಯೋಜನೆ ಹಾಗೂ ಅಲ್ಪಸಂಖ್ಯಾತ ವಿದ್ಯಾರ್ಥಿ ವೇತನಗಳ ಬಗ್ಗೆ ಗ್ರಾಮೀಣ ಮಟ್ಟದಲ್ಲಿ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು. ಅರ್ಹ ಫಲಾನುಭವಿಗಳು ಕಚೇರಿಗಳಿಗೆ ಅಲೆಯದಂತೆ ಆನ್‌ಲೈನ್ ಮೂಲಕವೇ ಸೌಲಭ್ಯಗಳನ್ನು ತಲುಪಿಸಲು ಕ್ರಮ ವಹಿಸಬೇಕು ಎಂದು ಅವರು ಅಧಿಕಾರಿಗಳಿಗೆ ಸೂಚಿಸಿದರು.

ಸಭೆಯಲ್ಲಿ ಜಿಲ್ಲಾ ಸಮಿತಿ ಸದಸ್ಯರಾದ ಶಫೀಕ್ ಅಹಮದ್ ಮತ್ತು ಶಬೀರ್ ಅಹಮದ್ ಅವರು ಮಾತನಾಡಿ, ಸಮುದಾಯದ ಆಸ್ತಿಗಳ ಒತ್ತುವರಿ ತೆರವುಗೊಳಿಸಲು ಮತ್ತು ಮೌಲಾನಾ ಆಜಾದ್ ಶಾಲೆಗಳಿಗೆ ಮೂಲಭೂತ ಸೌಕರ್ಯ ಒದಗಿಸುವಂತೆ ಜಿಲ್ಲಾಧಿಕಾರಿಗಳ ಗಮನಕ್ಕೆ ತಂದರು.

ಜಿಲ್ಲೆಯಲ್ಲಿ ಕೌಶಲ್ಯಾಭಿವೃದ್ಧಿ ಕಾರ್ಯಕ್ರಮಗಳ ಅನುಷ್ಠಾನದಲ್ಲಿ ಆಗುತ್ತಿರುವ ವಿಳಂಬದ ಬಗ್ಗೆ ಜಿಲ್ಲಾಧಿಕಾರಿಗಳು ತೀವ್ರ ಅಸಮಾಧಾನ ವ್ಯಕ್ತಪಡಿಸಿದರು. ಕಳೆದ ಒಂದು ವರ್ಷದಿಂದ ಯಾವುದೇ ಹೊಸ ತರಬೇತಿಗಳು ನಡೆಯದಿರುವುದನ್ನು ಪ್ರಶ್ನಿಸಿದ ಅವರು, ಸಾಂಪ್ರದಾಯಿಕ ತರಬೇತಿಗಳ ಬದಲಿಗೆ ಎಐ (AI), ಸಾಫ್ಟ್‌ವೇರ್ ಮತ್ತು ಮೊಬೈಲ್ ರಿಪೇರಿಯಂತಹ ಆಧುನಿಕ ತಂತ್ರಜ್ಞಾನ ಆಧಾರಿತ ಕೌಶಲ್ಯಗಳನ್ನು ಕಲಿಸಲು ಸೂಚಿಸಿದರು.

ರೇಷ್ಮೆ ಮತ್ತು ಕೃಷಿ ಇಲಾಖೆಗಳ ಯೋಜನೆಗಳಲ್ಲಿ ಅಲ್ಪಸಂಖ್ಯಾತ ರೈತರ ಸಂಖ್ಯೆ ಕಡಿಮೆ ಇರುವುದನ್ನು ಗಮನಿಸಿದ ಡಾ. ರವಿ ಅವರು, ಅಧಿಕಾರಿಗಳು ಕೇವಲ ಅಂಕಿ–ಅಂಶ ನೀಡುವ ಬದಲು ಸಮುದಾಯದವರನ್ನು ತಲುಪಿ ಅವರಿಗೆ ಸರ್ಕಾರದ ಸೌಲಭ್ಯಗಳ ಬಗ್ಗೆ ಮಾಹಿತಿ ನೀಡಬೇಕು ಎಂದರು. ಜೈವಿಕ ಗೊಬ್ಬರ ಮತ್ತು ನ್ಯಾನೋ ಯೂರಿಯಾ ಬಳಕೆಯ ಬಗ್ಗೆ ಅರಿವು ಮೂಡಿಸಲು ತಿಳಿಸಿದರು.

ಜಿಲ್ಲೆಯಲ್ಲಿ ತಾಜಾ ಮೀನುಗಳ ಮಾರಾಟಕ್ಕೆ ಅನುಕೂಲವಾಗುವಂತೆ ಪ್ರತಿ ತಾಲ್ಲೂಕಿನಲ್ಲಿ ಮೀನು ಮಾರಾಟ ಮಳಿಗೆಗಳನ್ನು ಸ್ಥಾಪಿಸಲು ನಗರಸಭೆಗಳ ಮೂಲಕ ಜಾಗ ಗುರುತಿಸಿ ಕ್ರಮ ಕೈಗೊಳ್ಳುವಂತೆ ಮೀನುಗಾರಿಕೆ ಇಲಾಖೆಗೆ ನಿರ್ದೇಶನ ನೀಡಿದರು.

ಕ್ಲಾಕ್ ಟವರ್ ಬಳಿ ಇರುವ ಹಳೆಯ ವಕ್ಫ್ ಕಟ್ಟಡವನ್ನು ನವೀಕರಿಸಿ ಅಲ್ಲಿ ಮಾಹಿತಿ ಕೇಂದ್ರ ಮತ್ತು ವಕ್ಫ್ ಕಚೇರಿಯನ್ನು ನಡೆಸುವ ಬಗ್ಗೆ ಚರ್ಚಿಸಲಾಯಿತು. ಜನದಟ್ಟಣೆ ಇರುವ ಪ್ರದೇಶದಲ್ಲಿ ಕಚೇರಿ ಇರುವುದರಿಂದ ಸಾರ್ವಜನಿಕರಿಗೆ ಹೆಚ್ಚಿನ ಅನುಕೂಲವಾಗಲಿದೆ ಎಂದು ಅವರು ಅಭಿಪ್ರಾಯಪಟ್ಟರು.

ಅನುಮತಿ ಇಲ್ಲದೆ ನಡೆಯುತ್ತಿರುವ ಅನಧಿಕೃತ ಶಾಲೆಗಳ ಪಟ್ಟಿಯನ್ನು ಸಿದ್ಧಪಡಿಸಿ ಅವುಗಳನ್ನು ಮುಚ್ಚಲು ಹಾಗೂ ಪೋಷಕರಿಂದ ಅತಿಯಾದ ಶುಲ್ಕ ಮತ್ತು ಡೊನೇಷನ್ ವಸೂಲಿ ಮಾಡುವ ಶಾಲೆಗಳ ಮೇಲೆ ಕಠಿಣ ಕ್ರಮ ಕೈಗೊಳ್ಳಲು ಬಿಇಒಗಳಿಗೆ ಸೂಚನೆ ನೀಡಿದರು.

ಈ ಸಭೆಯಲ್ಲಿ ಸಮಿತಿ ಸದಸ್ಯರಾದ ಮಹಮದ್ ಪಾಷ, ಮಹಮದ್ ಶಬ್ಬೀರ್, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧಿಕಾರಿ ಮೈಲಾರಪ್ಪ, ತೋಟಗಾರಿಕೆ ಇಲಾಖೆಯ ಜಂಟಿ ನಿರ್ದೇಶಕರಾದ ಕುಮಾರಸ್ವಾಮಿ, ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕಿ ಅಲ್ಮಾಸ್ ಪರ್ವೀನ್ ತಾಜ್, ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ರವಿಚಂದ್ರ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಉಪನಿರ್ದೇಶಕ ನಾರಾಯಣಸ್ವಾಮಿ ಸೇರಿದಂತೆ ಇತರ ಜಿಲ್ಲಾ ಮಟ್ಟದ ಅಧಿಕಾರಿಗಳು ಪಾಲ್ಗೊಂಡಿದ್ದರು.

## ಸಾರ್ವಜನಿಕರು ಜಾಗೃತಿಯಿಂದಿರಲು ಆರೋಗ್ಯ ಇಲಾಖೆ ಮನವಿ

ತುಮಕೂರು

ಪ್ರಸ್ತುತ ವರ್ಷದ ಬೇಸಿಗೆಯು ಪ್ರಖರವಾಗಿರುವ ಸಾಧ್ಯತೆಗಳ ಬಗ್ಗೆ ವರದಿ ಬಂದಿರುವ ಹಿನ್ನೆಲೆಯಲ್ಲಿ ಮುಖ್ಯವಾಗಿ ಚಿಕ್ಕ ಮಕ್ಕಳು, ಗರ್ಭಿಣಿ, ಬಾಣಂತಿಯರು, ವಯೋವೃದ್ಧರ ಕಾಳಜಿಗಾಗಿ ಕುಟುಂಬದ ಸದಸ್ಯರು ಹೆಚ್ಚಿನ ಆದ್ಯತೆ ನೀಡಬೇಕೆಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಚಂದ್ರಶೇಖರ್ ಮನವಿ ಮಾಡಿದ್ದಾರೆ.

ಹೆರಿಗೆ ನಂತರ ಬಾಣಂತಿಯರು ನವಜಾತ ಶಿಶುವಿಗೆ ಮೇಲಿಂದ ಮೇಲೆ ಎದೆ ಹಾಲುಣಿಸುವ ಮೂಲಕ ಶಿಶುವಿನಲ್ಲಾಗುವ ನಿರ್ಜಲೀಕರಣ ತಡೆಯಲು ಸಹಕಾರಿಯಾಗುತ್ತದೆ ಹಾಗೂ ರೋಗ ನಿರೋಧಕ ಶಕ್ತಿ ವೃದ್ಧಿಸಲು 12 ಮಾರಕ ರೋಗಗಳ ವಿರುದ್ಧ ಲಸಿಕೆ ಹಾಕಿಸಬೇಕು.

ಪ್ರಖರ ಬಿಸಿಲಿನ ಅವಧಿಯಲ್ಲಿ ಆದಷ್ಟು ಮನೆಯ ಹೊರಗೆ ಹೋಗದಂತೆ ಮುತವರ್ಜಿ ವಹಿಸಿ, ಮನೆಯ ಒಳಗೆ ಅಥವಾ ನೆರಳು ಇರುವ ಸ್ಥಳದಲ್ಲಿ ವಿಶ್ರಾಂತಿ ಪಡೆಯಬೇಕು. ಆದಷ್ಟು ಮಸಾಲೆಯುಕ್ತ ಪದಾರ್ಥಗಳ ಸೇವನೆ ಕಡಿಮೆ ಮಾಡಬೇಕು.

ಬೇಸಿಗೆಯಲ್ಲಿ ಕಲುಷಿತ ನೀರಿನ ಸೇವನೆಯಿಂದ ಸಂಭಾವ್ಯ ವಾಂತಿ–ಬೇಧಿ ಪ್ರಕರಣಗಳು ಉಂಟಾಗುವ ಹಿನ್ನೆಲೆಯಲ್ಲಿ ಶುದ್ಧೀಕರಿಸಿದ ನೀರು ಅಥವಾ ನೀರು ಶುದ್ಧೀಕರಣ ಘಟಕದ ನೀರನ್ನು ಕುಡಿಯಲು ಬಳಸಬೇಕು.

ಅಲ್ಲದೆ, ಊಟದ ಮೊದಲು ಶೌಚದ ನಂತರ ಕೈಗಳನ್ನು ಸಾಬೂನು ಮತ್ತು ನೀರಿನಿಂದ 45 ಸೆಕೆಂಡ್‌ಗಳ ಕಾಲ ತೊಳೆದ ನಂತರ ಆಹಾರ ಸೇವಿಸಬೇಕು. ನೀರಿನ ಸಂಗ್ರಹಣಗಳ ಮೇಲೆ ತಪ್ಪದೇ ಮುಚ್ಚಳ ಮುಚ್ಚಬೇಕು.

ಸುರಕ್ಷಿತ ಆಹಾರ ಮಾತ್ರ ಸೇವಿಸಿ, ಆದಷ್ಟು ಮನೆಯಲ್ಲಿ ತಯಾರಿಸಿದ ಆಹಾರಕ್ಕೆ ಆದ್ಯತೆ ನೀಡಿ. ರಸ್ತೆ ಬದಿ ತೆರೆದಿಟ್ಟ ಆಹಾರ ಪದಾರ್ಥ ಸೇವಿಸಬಾರದು, ಮಲ, ಮೂತ್ರ ವಿಸರ್ಜನೆಗಾಗಿ ಶೌಚಾಲಯ ಬಳಸಬೇಕು. ಅಲ್ಲದೆ, ಎಲ್ಲ ಸರ್ಕಾರಿ ಆಸ್ಪತ್ರೆಗಳಲ್ಲಿ ಅಗತ್ಯ ಮುಂಜಾಗ್ರತಾ ಔಷಧಿಗಳು ಲಭ್ಯವಿದ್ದು, ಯಾವುದೇ ತುರ್ತು ಸಂದರ್ಭದಲ್ಲಿ 108ಕ್ಕೆ ಕರೆ ಮಾಡಿ ಆಂಬ್ಯುಲೆನ್ಸ್ ಸದುಪಯೋಗ ಪಡೆದುಕೊಳ್ಳಬಹುದೆಂದು ಮನವಿ ಮಾಡಿದ್ದಾರೆ.

ಬೇಸಿಗೆಯಲ್ಲಿ ಕಲುಷಿತ ನೀರಿನ ಸೇವನೆಯಿಂದ ಸಂಭಾವ್ಯ ವಾಂತಿ–ಬೇಧಿ ಪ್ರಕರಣಗಳು ಉಂಟಾಗುವ ಹಿನ್ನೆಲೆಯಲ್ಲಿ ಶುದ್ಧೀಕರಿಸಿದ ನೀರು ಅಥವಾ ನೀರು ಶುದ್ಧೀಕರಣ ಘಟಕದ ನೀರನ್ನು ಕುಡಿಯಲು ಬಳಸಬೇಕು.

ಅಲ್ಲದೆ, ಊಟದ ಮೊದಲು ಶೌಚದ ನಂತರ ಕೈಗಳನ್ನು ಸಾಬೂನು ಮತ್ತು ನೀರಿನಿಂದ 45 ಸೆಕೆಂಡ್‌ಗಳ ಕಾಲ ತೊಳೆದ ನಂತರ ಆಹಾರ ಸೇವಿಸಬೇಕು. ನೀರಿನ ಸಂಗ್ರಹಣಗಳ ಮೇಲೆ ತಪ್ಪದೇ ಮುಚ್ಚಳ ಮುಚ್ಚಬೇಕು. ಸುರಕ್ಷಿತ ಆಹಾರ ಮಾತ್ರ ಸೇವಿಸಿ, ಆದಷ್ಟು ಮನೆಯಲ್ಲಿ ತಯಾರಿಸಿದ ಆಹಾರಕ್ಕೆ ಆದ್ಯತೆ ನೀಡಿ. ರಸ್ತೆ ಬದಿ ತೆರೆದಿಟ್ಟ ಆಹಾರ ಪದಾರ್ಥ ಸೇವಿಸಬಾರದು, ಮಲ, ಮೂತ್ರ ವಿಸರ್ಜನೆಗಾಗಿ ಶೌಚಾಲಯ ಬಳಸಬೇಕು.

ಅಲ್ಲದೆ, ಎಲ್ಲ ಸರ್ಕಾರಿ ಆಸ್ಪತ್ರೆಗಳಲ್ಲಿ ಅಗತ್ಯ ಮುಂಜಾಗ್ರತಾ ಔಷಧಿಗಳು ಲಭ್ಯವಿದ್ದು, ಯಾವುದೇ ತುರ್ತು ಸಂದರ್ಭದಲ್ಲಿ 108ಕ್ಕೆ ಕರೆ ಮಾಡಿ ಆಂಬ್ಯುಲೆನ್ಸ್ ಸದುಪಯೋಗ ಪಡೆದುಕೊಳ್ಳಬಹುದೆಂದು ಮನವಿ ಮಾಡಿದ್ದಾರೆ.

# ಸಾಸಲು ಚಿನ್ನಮ್ಮ ಉತ್ಸವಕ್ಕೆ ಸಜ್ಜು: ಜಾನಪದ ಕಲಾ ತಂಡಗಳ ಭವ್ಯ ಪ್ರದರ್ಶನ

ದೊಡ್ಡಬಳ್ಳಾಪುರ

ತಾಲ್ಲೂಕಿನ ಸಾಸಲು ಹೋಬಳಿ ಕೇಂದ್ರದ ಡಾ.ಬಿ.ಆರ್.ಅಂಬೇಡ್ಕರ್ ಪ್ರೌಢಶಾಲಾ ಆವರಣದಲ್ಲಿ ಏ.19 ರಂದು ಭಾನುವಾರ ಸಾಸಲು ಚಿನ್ನಮ್ಮ ಉತ್ಸವ ನಡೆಯಲಿದೆ. ಸಾಸಲು ಹೋಬಳಿ ಚಿನ್ನಮ್ಮ ಉತ್ಸವ ಸಮಿತಿ ವತಿಯಿಂದ ಮೊದಲ ಬಾರಿಗೆ ನಡೆಯುತ್ತಿರುವ ಸಾಸಲು ಚಿನ್ನಮ್ಮ ಉತ್ಸವ–2026 ಕಾರ್ಯಕ್ರಮವನ್ನು ಬೆಂಗಳೂರು ವಿಶ್ವವಿದ್ಯಾಲಯದ ಕನ್ನಡ ಅಧ್ಯಯನ ಕೇಂದ್ರದ ಪ್ರಾಧ್ಯಾಪಕ ಡಾ. ಡಿ.ಕೆ. ಚಿತ್ತಯ್ಯ ಪೂಜಾರ್ ಉದ್ಘಾಟಿಸಲಿದ್ದಾರೆ ಎಂದು ತಾ.ಪಂ ಮಾಜಿ ಅಧ್ಯಕ್ಷ ಲಾವಣ್ಯ ನಾಗರಾಜ್ ತಿಳಿಸಿದರು.

ನಗರದ ಪ್ರವಾಸಿ ಮಂದಿರದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಭಾಗವಹಿಸಿ ಮಾತನಾಡಿದ ಅವರು ಸಾಸಲು ಚಿನ್ನಮ್ಮ ಉತ್ಸವ ಏ.19ರ ಬೆಳಗ್ಗೆ 8 ಗಂಟೆಗೆ ಸಾಧ್ವಿಮಣಿ ಸಾಸಲು ಚಿನ್ನಮ್ಮ ದೇವಾಲಯ ಮುಂಭಾಗದಿಂದ ಡಾ.ಬಿ.ಆರ್. ಅಂಬೇಡ್ಕರ್ ಪ್ರೌಢಶಾಲೆಯ ಸಾಸಲು ಚಿನ್ನಮ್ಮ ಉತ್ಸವ ವೇದಿಕೆ ತನಕ ಜಾನಪದ ಕಲಾ ತಂಡಗಳೊಂದಿಗೆ ಸಾಸಲು ಚಿನ್ನಮ್ಮ ಮೂರ್ತಿಯನ್ನು ಚಿಲಕಲ ಬಂಡಿ ಮೂಲಕ ಮೆರವಣಿಗೆ ನಡೆಯುತ್ತದೆ ಎಂದರು.



ಸಾಸಲು ಚಿನ್ನಮ್ಮ ಉತ್ಸವದ ಮುಖ್ಯ ವೇದಿಕೆಯಲ್ಲಿಬಜಾನಪದ ವಿದ್ವಾಂಸರಾದ ಸಣ್ಣ ನಾಗಪ್ಪನವರಿಂದ ಸಾಸಲು ಚಿನ್ನಮ್ಮ ಪರಿಚಯದ ಕಿರುಪುಸ್ತಕ ಬಿಡುಗಡೆ ಮಾಡುತ್ತಾರೆ. ಮುಖ್ಯ ಅತಿಥಿಗಳಾಗಿ ಶಾಸಕ ಧೀರಾಜ್ ಮುನಿರಾಜು, ಶಾಸಕರು, ಮಾಜಿ ಶಾಸಕ ಟಿ.ವೆಂಕಟರಮಣಯ್ಯ, ಕಿಮ್ಸ್ ಆಸ್ಪತ್ರೆ ಮಾಜಿ ಅಧ್ಯಕ್ಷರಾದ ಬಿ. ಮುನೇಗೌಡ ಭಾಗವಹಿಸುವರು. ದೊಡ್ಡಬಳ್ಳಾಪುರ ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ತು ಅಧ್ಯಕ್ಷ ಪಿ.ಗೋವಿಂದರಾಜು ಅಧ್ಯಕ್ಷತೆ ವಹಿಸಲಿದ್ದಾರೆ. ಮಧ್ಯಾಹ್ನ 12 ಗಂಟೆಯಿಂದ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜನೆ ಮಾಡಲಾಗಿರುತ್ತದೆ. ಸಾಸಲು ಹೋಬಳಿ ಕುರಿತು ಚಿಂತನ– ಮಂಥನ ವಿಚಾರಗೋಷ್ಠಿ, ರಾತ್ರಿ 7ಗಂಟೆಗೆ ಸಾಸಲು ಚಿನ್ನಮ್ಮ ಕುರಿತ ನಾಟಕ ನಡೆಯಲಿದೆ ಎಂದರು.

ಸುದ್ದಿಗೋಷ್ಠಿಯಲ್ಲಿ ದೊಡ್ಡಬಳ್ಳಾಪುರ ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ತು ಅಧ್ಯಕ್ಷ ಪಿ.ಗೋವಿಂದರಾಜು, ಗೌರವ ಕಾರ್ಯದರ್ಶಿ ಎ. ಜಯರಾಮ್, ಸಾಸಲು ಹೋಬಳಿ ಕಸಾಪ ಘಟಕದ ಅಧ್ಯಕ್ಷ ಜಿ.ಎಂ.ನಾಗರಾಜು, ಸಾಸಲು ಚಿನ್ನಮ್ಮ ಉತ್ಸವ ಸಮಿತಿಯ ಮುಖಂಡರುಗಳಾದ ವಕೀಲರಾದ ನರಸಿಂಹಗೌಡ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಶ್ರೀನಿವಾಸ್, ಗ್ರಾಮ ಪಂಚಾಯಿತಿ ಸದಸ್ಯ ಪಚ್ಚಾರಹಳ್ಳಿ ರಮೇಶ್, ಉಪನ್ಯಾಸಕ ಕೇಶವಮೂರ್ತಿ, ಚಂದ್ರಶೇಖರ್ ಮುಂತಾದವರು ಭಾಗವಹಿಸಿದ್ದರು.




ಗೋ ಮಾತೆಯನ್ನು ರಾಷ್ಟ್ರೀಯ ಪ್ರಾಣಿಯಾಗಿ ಗುರುತಿಸಬೇಕು. ಗೋ ಹತ್ಯೆ ನಿಷೇಧ ಕಾಯ್ದೆಯನ್ನು ಜಾರಿಗೊಳಿಸಬೇಕು. ಗೋ ಹತ್ಯೆ ನಿಷೇಧವಾಗಬೇಕು. ಗೋ ಅಕ್ರಮ ಸಾಗಾಣಿಕೆ ನಿಲ್ಲಬೇಕು ಎನ್ನುವ ಸಹಿ ಅಭಿಯಾನಕ್ಕೆ ಬಳ್ಳಾರಿಯಲ್ಲಿ ಚಾಲನೆ ನೀಡಲಾಯಿತು. ವಿವಿಧ ಸಂಘಟನೆಗಳ ಮಹಿಳೆಯರು, ಯುವಕರು, ಮಕ್ಕಳು ಈ ಅಭಿಯಾನದಲ್ಲಿ ಪಾಲ್ಗೊಂಡಿದ್ದರು.

# ಹೂಹಳ್ಳಿ ಗ್ರಾಮದ ನಿವೇಶನಗಳಿಗೆ ಹಕ್ಕು ಪತ್ರ ವಿತರಣೆಗೆ ಡಿಸಿಗೆ ಮನವಿ

ಕೋಲಾರ

ಜಿಲ್ಲೆಯ ಶ್ರೀನಿವಾಸಪುರ ತಾಲೂಕಿನ ದಳಸನೂರು ಗ್ರಾಮ ಪಂಚಾಯತಿ ವ್ಯಾಪ್ತಿಯ ಹೂಹಳ್ಳಿ ಗ್ರಾಮದಲ್ಲಿನ ನಿವೇಶನಗಳಿಗೆ ಹಕ್ಕು ಪತ್ರ ವಿತರಿಸುವಂತೆ ಒತ್ತಾಯಿಸಿ ರೈತ ಸಂಘದ ನೇತೃತ್ವದಲ್ಲಿ ಗ್ರಾಮಸ್ಥರು ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಿ ಒತ್ತಾಯಿಸಿದರು



ಸುಮಾರು 15 ವರ್ಷಗಳಿಂದ ಗ್ರಾಮದಲ್ಲಿನ ಕೂಲಿ ಕಾರ್ಮಿಕರಿಗೆ, ರೈತರಿಗೆ ಮನೆ ಇಲ್ಲದವರಿಗಾಗಿ ಸರ್ವೆ ನಂಬರ್ 68 ರಲ್ಲಿ ಊರಿನ ಗ್ರಾಮಸ್ಥರೆಲ್ಲರೂ ಒಟ್ಟಾಗಿ ನಿವೇಶನಗಳನ್ನು ನೀಡಿದ್ದಾರೆ ಜನರು ತಮ್ಮ ಸ್ವಂತ ಕೂಲಿ ಮಾಡಿದ ಹಣದಲ್ಲಿ ಮನೆ ಕಟ್ಟಿಕೊಂಡಿದ್ದಾರೆ ರಸ್ತೆ ಮಾಡಿಕೊಂಡಿದ್ದಾರೆ ಬೀದಿ ದೀಪ ಅಳವಡಿಸಿಕೊಂಡಿದ್ದಾರೆ ಆದರೆ ಹಕ್ಕುಪತ್ರ ಮಾತ್ರ ಅಲ್ಲಿನ ಗ್ರಾಮ ಪಂಚಾಯಿತಿಯ ಅಧಿಕಾರಿಗಳು ನೀಡುತ್ತಿಲ್ಲ ಎಂದು ಆರೋಪಿಸಿದರು

ಸುಮಾರು ವರ್ಷಗಳಿಂದ ಜಿಲ್ಲಾಧಿಕಾರಿಗೆ, ತಹಸೀಲ್ದಾರ್ ಗೆ, ತಾಲೂಕು ಪಂಚಾಯಿತಿ ಇಒಗೆ, ಗ್ರಾಮ ಪಂಚಾಯಿತಿ ಅಧಿಕಾರಿಗಳಿಗೆ ಮನವಿಗಳನ್ನು ಸಲ್ಲಿಸಿ ಹಕ್ಕು ಪತ್ರ ವಿತರಿಸಲು ಮನವಿ ಮಾಡಿಕೊಂಡಿದ್ದರು ಇದುವರೆಗೂ ಯಾರು ಸಹ ಇವರ ಬಗ್ಗೆ ಗಮನ ಹರಿಸಿಲ್ಲ ಕೂಡಲೇ ಪರಿಶೀಲಿಸಿ ನಮಗೆ ಹಕ್ಕುಪತ್ರ ವಿತರಿಸಲು ಆದೇಶ ಮಾಡಬೇಕೆಂದು ಒತ್ತಾಯಿಸಿದರು

ಈ ಸಂದರ್ಭದಲ್ಲಿ ಮನವಿ ಸ್ವೀಕರಿಸಿ ಮಾತನಾಡಿದ ಜಿಲ್ಲಾಧಿಕಾರಿ ಅರ್ಜಿಗಳನ್ನು ಪರಿಶೀಲಿಸಿ ಇದುವರೆಗೂ ಏಕೆ ಅಧಿಕಾರಿಗಳು ಅನುಕೂಲ ಕಲ್ಪಿಸಲಿಲ್ಲ ಎಂಬುದನ್ನು ಬೇಸರದಿಂದ ವ್ಯಕ್ತಪಡಿಸಿ ಈ ಕೂಡಲೇ ಸಂಬಂಧಪಟ್ಟ ಅಧಿಕಾರಿಗಳಿಗೆ ಹಕ್ಕು ಪತ್ರ ವಿತರಿಸಲು ಸಮಸ್ಯೆಯನ್ನು ಪರಿಶೀಲಿಸುವುದಾಗಿ ಮುಂದಿನ ದಿನಗಳಲ್ಲಿ ನಿಮಗೆಲ್ಲ ಅನುಕೂಲವಾಗುವಂತೆ ಹಕ್ಕುಪತ್ರ ನೀಡಲು ಪ್ರಯತ್ನಿಸುವುದಾಗಿ ಭರವಸೆ ನೀಡಿದರು

ಈ ಸಂದರ್ಭದಲ್ಲಿ ಕರ್ನಾಟಕ ಪ್ರಾಂತ ರೈತ ಸಂಘದ ರಾಜ್ಯ ಉಪಾಧ್ಯಕ್ಷ ಪಿ.ಆರ್ ಸೂರ್ಯನಾರಾಯಣ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಪಾತಕೋಟೆ ನವೀನ್ ಕುಮಾರ್, ಜಿಲ್ಲಾ ಸಂಚಾಲಕ ಆರ್ ಶ್ರೀನಿವಾಸನ್, ಮುಖಂಡರಾದ ಹರಟಿ ಪ್ರಕಾಶ್, ಸೋಮಶೇಖರ್, ಗಂಗಮ್ಮ, ಹೊಲ್ಲಂಬಳ್ಳಿ ವೆಂಕಟೇಶ್, ವೆಂಕಟಲಕ್ಷ್ಮಮ್ಮ, ಕವಿತಾ, ಉಮಾ, ಮುನಿಲಕ್ಷ್ಮಮ್ಮ ಸೇರಿದಂತೆ ಗ್ರಾಮಸ್ಥರು ಇದ್ದರು.

## ನೆರ್ನಹಳ್ಳಿ ಎಂಪಿಎಸ್ ಅಧ್ಯಕ್ಷರಾಗಿ ವೆಂಕಟಲಕ್ಷ್ಮಮ್ಮ ಆಯ್ಕೆ



ಕೋಲಾರ

ತಾಲ್ಲೂಕಿನ ಮುದುವತ್ತಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ನೆರ್ನಹಳ್ಳಿ ಹಾಲು ಉತ್ಪಾದಕರ ಸಹಕಾರ ಸಂಘದ ಆಡಳಿತ ಮಂಡಳಿಯ ಐದು ವರ್ಷಗಳ ಅವಧಿಗೆ ನೂತನ ಅಧ್ಯಕ್ಷರಾಗಿ ವೆಂಕಟಲಕ್ಷ್ಮಮ್ಮ ಹಾಗೂ ಉಪಾಧ್ಯಕ್ಷರಾಗಿ ಜಿ. ಮುನಿಯಪ್ಪ ಅವರು ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಸಂಘದ ಕಚೇರಿಯಲ್ಲಿ ಶುಕ್ರವಾರ ನಡೆದ ಚುನಾವಣಾ ಪ್ರಕ್ರಿಯೆಯಲ್ಲಿ ಅಧ್ಯಕ್ಷ ಮತ್ತು ಉಪಾಧ್ಯಕ್ಷ ಸ್ಥಾನಗಳಿಗೆ ತಲಾ ಒಂದೊಂದೇ ನಾಮಪತ್ರ ಸಲ್ಲಿಕೆಯಾದ ಹಿನ್ನೆಲೆಯಲ್ಲಿ, ಚುನಾವಣಾಧಿಕಾರಿಗಳಾದ ಸಹಕಾರ ಇಲಾಖೆಯ ವೆಂಕಟೇಶ್ ಬಾಬು ಅವರು ಅವಿರೋಧ ಆಯ್ಕೆಯನ್ನು ಘೋಷಿಸಿದರು.

ಹಿನ್ನೆಲೆ: ಕಳೆದ ಏಪ್ರಿಲ್ 7 ರಂದು ಸಂಘದ ನಿರ್ದೇಶಕರ ಸ್ಥಾನಕ್ಕೆ ಚುನಾವಣೆ ನಡೆದಿತ್ತು. ಒಟ್ಟು 11 ನಿರ್ದೇಶಕರ ಸ್ಥಾನಗಳ ಪೈಕಿ ಮುನಿನರಸಮ್ಮ ಮತ್ತು ರಾಮಪ್ಪ ಅವರು ಸ್ಪರ್ಧೆಯ ಮೂಲಕ ಆಯ್ಕೆಯಾಗಿದ್ದರು. ನಾಗಪ್ಪ, ಎನ್. ಮುನಿಯಪ್ಪ, ಎನ್. ವೆಂಕಟೇಶಪ್ಪ, ವಿ. ಸುಮಿತ್ರ, ರಾಧಮ್ಮ, ಪಾರ್ವತಮ್ಮ ಮತ್ತು ನೀಲಮ್ಮ ಸೇರಿದಂತೆ ಒಂಬತ್ತು ಮಂದಿ ನಿರ್ದೇಶಕರು ಈ ಹಿಂದೆಯೇ ಅವಿರೋಧವಾಗಿ ಆಯ್ಕೆಯಾಗಿದ್ದರು.

## ಎಲೆರಾಂಪುರ ಮಠದಲ್ಲಿ 5ನೇ ವರ್ಷದ ಸಂಸ್ಕಾರ ಶಿಬಿರ



ಕೊರಟಗೆರೆ

"ಮಕ್ಕಳು ಕೇವಲ ಅಂಕ ಗಳಿಸುವ ಯಂತ್ರಗಳಾಗದೆ ಸಮಾಜದಲ್ಲಿ ಸುಸಂಸ್ಕೃತ ವ್ಯಕ್ತಿಗಳಾಗಿ ಬೆಳೆಯಬೇಕು" ಎಂದು ಎಲೆರಾಂಪುರ ಕುಂಚಿಟಿಗ ಮಹಾಸಂಸ್ಥಾನ ಮಠದ ಪೀಠಾಧ್ಯಕ್ಷರಾದ ಶ್ರೀ ಡಾ. ಹನುಮಂತನಾಥ್ ಸ್ವಾಮೀಜಿ ತಿಳಿಸಿದರು.

ತಾಲ್ಲೂಕಿನ ಎಲೆರಾಂಪುರ ಮಠದ ಕುಂಚಶ್ರೀ ಸಮುದಾಯ ಭವನದಲ್ಲಿ ಆಯೋಜಿಸಿದ್ದ 5ನೇ ವರ್ಷದ ಸಂಸ್ಕಾರ ಶಿಬಿರದ ದಿವ್ಯ ಸಾನಿಧ್ಯ ವಹಿಸಿ ಅವರು ಆಶೀರ್ವಚನ ನೀಡಿದರು.

ಮೌಲ್ಯಾಧಾರಿತ ಶಿಕ್ಷಣ: ಪರೀಕ್ಷೆಗಳಲ್ಲಿ ಅಂಕ ಗಳಿಸುವುದು ಮುಖ್ಯವಲ್ಲ; ತಂದೆ–ತಾಯಿ ಹಾಗೂ ಗುರುಹಿರಿಯರನ್ನು ಗೌರವಿಸುವ ಸಂಸ್ಕಾರವನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಮೌಲ್ಯಾಧಾರಿತ ಶಿಕ್ಷಣವೇ ಜೀವನದ ಅಡಿಪಾಯ ಎಂದು ಶ್ರೀಗಳು ನುಡಿದರು.

ಸನಾತನ ಪರಂಪರೆ ರಕ್ಷಣೆ: ಮೇಲುಕೋಟೆಯ ಭಗವತ್ ರಾಮಾನುಜ ಸಂಶೋಧನಾ ಸಂಸ್ಥೆಯ ಕುಲಸಚಿವ ಸಿ. ಕುಮಾರ್ ಮಾತನಾಡಿ, "ಹಿಂದೂ ಸಮಾಜದಲ್ಲಿ ಶಿಕ್ಷಣವಂತರ ಸಂಖ್ಯೆ ಕುಸಿಯುತ್ತಿರುವುದು ಆತಂಕಕಾರಿ. ಎಲೆರಾಂಪುರ ಮಠದ ಸಂಸ್ಕಾರ ಶಿಬಿರವು ಸನಾತನ ಪರಂಪರೆಯನ್ನು ಉಳಿಸುವ ನಿಟ್ಟಿನಲ್ಲಿ ಇಡೀ ರಾಜ್ಯಕ್ಕೆ ಮಾದರಿಯಾಗಿದೆ" ಎಂದರು.

ವಿದ್ಯೆಯೇ ಶ್ರೇಷ್ಠ ದಾನ: ಮಠದ ದಾನಿಗಳಾದ ಡಾ. ನವೀನ್ ದೇವರಾಜಯ್ಯ ಮಾತನಾಡಿ, ವಿದ್ಯೆ ಜ್ಞಾನದ ಜೊತೆಗೆ ಜೀವನೋಪಾಯದ ಮಾರ್ಗವನ್ನೂ ನೀಡುತ್ತದೆ. ದೇಶ, ಭಾಷೆ ಮತ್ತು ಸಂಸ್ಕೃತಿಯನ್ನು ಪ್ರೀತಿಸುವ ಮನೋಭಾವ ಬೆಳೆಸಿಕೊಳ್ಳಲು ಕರೆ ನೀಡಿದರು.

ಮನಸ್ಸಿನ ನಿಯಂತ್ರಣ: ತಹಶೀಲ್ದಾರ್ ಕೆ. ಮಂಜುನಾಥ್ ಮಾತನಾಡಿ, ವಿದ್ಯೆಯು ವಿನಯವನ್ನು ಕಲಿಸಬೇಕು. ಮಕ್ಕಳು ಚಂಚಲತೆಯಿಂದ ದೂರವಾಗಿ ಮನಸ್ಸನ್ನು ನಿಯಂತ್ರಿಸುವುದನ್ನು ಕಲಿಯಬೇಕು ಎಂದು ಕಿವಿಮಾತು ಹೇಳಿದರು.

ಗೃಹ ಸಚಿವರ ವಿಶೇಷ ಅಧಿಕಾರಿ ಡಾ. ಕೆ. ನಾಗಣ್ಣ, ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಅನಂತರಾಜು, ಸದ್ವಿದ್ಯಾ ಸಂಸ್ಥಾಪಕ ಶಾಲೆಯ ಆಡಳಿತಾಧಿಕಾರಿ ಡಾ. ನಂಜುಂಡಯ್ಯ, ಶಿಬಿರದ ಸಂಚಾಲಕ ಡಾ. ಕುಮಾರಸ್ವಾಮಿ ಹಾಗೂ ಮುಖಂಡರಾದ ನರೇಂದ್ರಬಾಬು, ನೇತಾಜಿ ಶ್ರೀಧರ, ನಾಗರಾಜು, ಲೋಕೇಶ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಮಧ್ಯವರ್ತಿಗಳ ತ್ರಿಕೋನ ಜೂಜಾಟದಲ್ಲಿ ರೈತ ಹೈರಾಣ

ತುಮಕೂರು

ದೇಶದ ಬೆನ್ನೆಲುಬಾದ ರೈತ ಇಂದು ಮಳೆ, ಸರ್ಕಾರದ ಮಂದಗತಿಯ ನೀತಿ ಮತ್ತು ಮಧ್ಯವರ್ತಿಗಳ ದರೋಡೆಯಿಂದಾಗಿ ಬೀದಿಗೆ ಬರುವಂತಾಗಿದೆ ಎಂದು ಹಾವೇರಿ ವಿಶ್ವವಿದ್ಯಾನಿಲಯದ ಮೌಲ್ಯಮಾಪನ ಕುಲಸಚಿವರಾದ ಪ್ರೊ. ಎಸ್. ಟಿ. ಬಾಗಲಕೋಟಿ ಅವರು ಕಳವಳ ವ್ಯಕ್ತಪಡಿಸಿದರು.

ತುಮಕೂರು ವಿಶ್ವವಿದ್ಯಾನಿಲಯದ ಪ್ರೊ. ಎಂ.ಡಿ. ನಂಜುಂಡಸ್ವಾಮಿ ಅಧ್ಯಯನ ಪೀಠ ಹಾಗೂ ಸ್ನಾತಕೋತ್ತರ ಅರ್ಥಶಾಸ್ತ್ರ ಅಧ್ಯಯನ ಮತ್ತು ಸಂಶೋಧನಾ ವಿಭಾಗದ ಸಂಯುಕ್ತಾಶ್ರಯದಲ್ಲಿ ಏ. 17 ಶುಕ್ರವಾರದಂದು ಆಯೋಜಿಸಿದ್ದ 'ಕರ್ನಾಟಕ ಕೃಷಿಯ ಪ್ರಸ್ತುತ ಸಮಸ್ಯೆಗಳು' ಎಂಬ ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ ಮಾತನಾಡಿದರು.

ಕೃಷಿಯಲ್ಲಿ ಆದಾಯದ ಅಸಮಾನತೆ ಹೆಚ್ಚಾಗಿದ್ದು, ರಾಜ್ಯದಲ್ಲಿ ರೈತರ ಭೂ ಹಿಡುವಳಿಯ ಗಾತ್ರ ಸರಾಸರಿ 1.5 ಎಕರೆಗೆ ಕುಸಿದಿದೆ. ಇದರಿಂದಾಗಿ ಉತ್ಪಾದನೆ ಮತ್ತು ಆದಾಯ ಎರಡೂ ಕಡಿಮೆಯಾಗಿದ್ದು, ಕೃಷಿ ಕಾರ್ಮಿಕರು ಹೆಚ್ಚಿನ ಸಂಖ್ಯೆಯಲ್ಲಿ ನಗರಗಳತ್ತ ವಲಸೆ ಹೋಗುತ್ತಿದ್ದಾರೆ ಎಂದು ಅವರು ವಿವರಿಸಿದರು. ವರುಣನ ಜೂಜಾಟ, ಪ್ರವಾಹ ಹಾಗೂ ಬರಗಾಲದಂತಹ ಅನಿಶ್ಚಿತತೆಗಳಿಂದ ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಸಿರಿಧಾನ್ಯ ಹಾಗೂ ವಾಣಿಜ್ಯ ಬೆಳೆಗಳಿಗೆ ಮಾರುಕಟ್ಟೆಯಲ್ಲಿ ಸರಿಯಾದ ಬೆಲೆ ಸಿಗುತ್ತಿಲ್ಲ. ಸರ್ಕಾರವು ಸಂಸ್ಕರಣಾ ಘಟಕಗಳು ಮತ್ತು ಸಂಗ್ರಹಣಾ ಕೇಂದ್ರಗಳನ್ನು ಸ್ಥಾಪಿಸುವಲ್ಲಿ ವಿಫಲವಾಗಿದೆ. ನಬಾರ್ಡ್ ಅಂಕಿ–ಅಂಶಗಳ ಪ್ರಕಾರ 14,700 ಸಹಕಾರಿ ಸಂಘಗಳು ದಿವಾಳಿಯಾಗಿರುವುದು ರೈತರ ಪಾಲಿಗೆ ಆತಂಕಕಾರಿ ವಿಷಯವಾಗಿದೆ. ಆದ್ದರಿಂದ ಸರ್ಕಾರವು ಹೋಬಳಿ ಮಟ್ಟದಲ್ಲಿ ರೈತರ ಸಂತೆಗಳು ಹಾಗೂ ಮಾರುಕಟ್ಟೆ ವ್ಯವಸ್ಥೆಯನ್ನು ಬಲಪಡಿಸಬೇಕಿದೆ ಎಂದು ಒತ್ತಿ ಹೇಳಿದರು.

ಪ್ರೊ. ಎಂ.ಡಿ. ನಂಜುಂಡಸ್ವಾಮಿ ಅಧ್ಯಯನ ಪೀಠದ ನಿರ್ದೇಶಕರಾದ ಡಾ. ಮುನಿರಾಜು ಎಂ. ಸ್ವಾಗತಿಸಿದರು, ಸ್ನಾತಕೋತ್ತರ ಅರ್ಥಶಾಸ್ತ್ರ ಅಧ್ಯಯನ ಮತ್ತು ಸಂಶೋಧನಾ ವಿಭಾಗದ ಅಧ್ಯಕ್ಷರಾದ ಪ್ರೊ. ರವೀಂದ್ರ ಕುಮಾರ್ ವಂದಿಸಿದರು ಹಾಗೂ ಸಹಪ್ರಾಧ್ಯಾಪಕ ಡಾ.ನೀಲಕಂಠ ಎನ್. ಟಿ. ಅವರು ನಿರೂಪಣೆ ಮಾಡಿದರು.

## ಕರ್ನಾಟಕ ಲೋಕಾಯುಕ್ತದ ನಾಲ್ಕು ದಶಕಗಳ ಸಾರ್ಥಕ ಪಯಣ

ಬೆಂಗಳೂರು

ಭ್ರಷ್ಟಾಚಾರ ನಿರ್ಮೂಲನೆ ಮತ್ತು ಆಡಳಿತ ಸುಧಾರಣೆಯಲ್ಲಿ ಮಹತ್ತರ ಪಾತ್ರ ವಹಿಸಿರುವ 'ಕರ್ನಾಟಕ ಲೋಕಾಯುಕ್ತ' ಸಂಸ್ಥೆಯು ತನ್ನ ಯಶಸ್ವಿ ನಾಲ್ಕು ದಶಕಗಳ ಪಯಣವನ್ನು ಪೂರೈಸಿದ್ದು, ಈ ಅಂಗವಾಗಿ 2026ರ ಏಪ್ರಿಲ್ 18, ಶನಿವಾರದಂದು ಬೆಂಗಳೂರಿನ ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.



ಈ ಐತಿಹಾಸಿಕ ಕಾರ್ಯಕ್ರಮಕ್ಕೆ ಭಾರತದ ಮುಖ್ಯ ನ್ಯಾಯಮೂರ್ತಿಗಳಾದ ಸೂರ್ಯ ಕಾಂತ್ ಅವರು ಮುಖ್ಯ ಅತಿಥಿಗಳಾಗಿ ಆಗಮಿಸಿ ಉದ್ಘಾಟನೆ ನೆರವೇರಿಸಲಿದ್ದಾರೆ. ಸುಪ್ರೀಂ ಕೋರ್ಟ್‌ನ ನ್ಯಾಯಮೂರ್ತಿಗಳಾದ ಅರವಿಂದ್ ಕುಮಾರ್ ಅವರು ಗೌರವ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ. ಕರ್ನಾಟಕದ ಲೋಕಾಯುಕ್ತರಾದ ಬಿ.ಎಸ್. ಪಾಟೀಲ್, ಉಪಲೋಕಾಯುಕ್ತರುಗಳಾದ ಕೆ.ಎನ್. ಫಣೀಂದ್ರ ಮತ್ತು ಬಿ. ವೀರಪ್ಪ ಅವರ ಘನ ಉಪಸ್ಥಿತಿಯಲ್ಲಿ ಈ ಕಾರ್ಯಕ್ರಮವು ಜರುಗಲಿದೆ.

ಈ ಸಂದರ್ಭದಲ್ಲಿ ಭಾರತದ ಮುಖ್ಯ ನ್ಯಾಯಮೂರ್ತಿಗಳಾದ ಸೂರ್ಯ ಕಾಂತ್ ಅವರು ಲೋಕಾಯುಕ್ತ ನಿಯತಕಾಲಿಕೆಯನ್ನು ಬಿಡುಗಡೆ ಮಾಡುವ ಜೊತೆಗೆ ಚುನಾಯಿತ ಪ್ರತಿನಿಧಿಗಳ ಆಸ್ತಿ ಮತ್ತು ಹೊಣೆಗಾರಿಕೆಗಳ ಹೊಸ ಪೋರ್ಟಲ್ ಹಾಗೂ ಆನ್‌ಲೈನ್ ತನಿಖಾ ಮಾಡ್ಯೂಲ್‌ಗೆ ಚಾಲನೆ ನೀಡಲಿದ್ದಾರೆ. ಇದೇ ಸಂದರ್ಭದಲ್ಲಿ ಮಾಜಿ ಲೋಕಾಯುಕ್ತರು ಮತ್ತು ಉಪಲೋಕಾಯುಕ್ತರನ್ನು ಸನ್ಮಾನಿಸಲಾಗುವುದು.

ಭ್ರಷ್ಟಾಚಾರ ಮತ್ತು ದುರಾಡಳಿತ ವಿರುದ್ಧ ಹೋರಾಟದ ಬಗ್ಗೆ ನಿವೃತ್ತ ನ್ಯಾಯಮೂರ್ತಿಗಳಾದ ಬಿ.ಎಸ್. ಪಾಟೀಲ್, ಲೋಕಾಯುಕ್ತ ಕಾಯ್ದೆಯಡಿ ಕುಂದುಕೊರತೆಗಳ ಪರಿಹಾರ ವಿಷಯದ ಮೇಲೆ ನಿವೃತ್ತ ನ್ಯಾಯಮೂರ್ತಿಗಳಾದ ಕೆ.ಎನ್. ಫಣೀಂದ್ರ ಹಾಗೂ ಭ್ರಷ್ಟಾಚಾರ ತಡೆಗಟ್ಟುವುದು ಹೇಗೆ? ಎಂಬುದರ ಬಗ್ಗೆ ನಿವೃತ್ತ ನ್ಯಾಯಮೂರ್ತಿಗಳಾದ ಬಿ. ವೀರಪ್ಪ ಅವರು ವಿಚಾರಗೋಷ್ಠಿ ನಡೆಲಿಸಲಿದ್ದಾರೆ.

ಕರ್ನಾಟಕ ಲೋಕಾಯುಕ್ತ ಸಂಸ್ಥೆಯು ತನ್ನ ಅರ್ಥಪೂರ್ಣ ಹಾಗೂ ಅವಿರತ ಸೇವೆಯ 40 ವರ್ಷಗಳನ್ನು ಯಶಸ್ವಿಯಾಗಿ ಪೂರೈಸಿದ್ದು, ಈ ಸುದೀರ್ಘ ಅವಧಿಯಲ್ಲಿ ಸಂಸ್ಥೆಯು ಹಲವಾರು ಸವಾಲುಗಳನ್ನು ಎದುರಿಸಿದ್ದರೂ ಸಹ, ಸಾರ್ವಜನಿಕ ಸೇವೆಯಲ್ಲಿನ ಭ್ರಷ್ಟಾಚಾರ, ಸ್ವಜನಪಕ್ಷಪಾತ ಹಾಗೂ ಆಡಳಿತ ದುರುಪಯೋಗದ ವಿರುದ್ಧದ ಹೋರಾಟದಲ್ಲಿ ಸದಾ ಸ್ಥಿತಪ್ರಜ್ಞವಾಗಿ ಕಾರ್ಯ ನಿರ್ವಹಿಸಿಕೊಂಡು ಬಂದಿದೆ.

ಒಟ್ಟಾರೆಯಾಗಿ, ಪ್ರಾಮಾಣಿಕ ವ್ಯಕ್ತಿಗಳನ್ನು ಬೆಳೆಸುವಲ್ಲಿ ನಾವು ವಿಫಲವಾದರೆ ಅನ್ಯಾಯವು ಗೆದ್ದು, ನ್ಯಾಯವು ಮರೆಯಾಗುವ ಅಪಾಯವಿದೆ ಎಂದು ಸಂಸ್ಥೆಯು ಎಚ್ಚರಿಸಿದೆ.

ಸವಾಲುಗಳೇ ವ್ಯಕ್ತಿಯನ್ನು ಪರಿಪೂರ್ಣಗೊಳಿಸುತ್ತವೆ ಎಂಬ ಧ್ಯೇಯವಾಕ್ಯದೊಂದಿಗೆ ಲೋಕಾಯುಕ್ತವು ನಾಲ್ಕು ದಶಕಗಳನ್ನು ದಾಟಿ ಮುಂದಿನ ಹೆಜ್ಜೆಯನ್ನು ಇಡುತ್ತಿದೆ.

## ಜನಗಣತಿ ಸ್ಥಳ ಪರಿಶೀಲನೆ

ಬೆಂಗಳೂರು



ಪಶ್ಚಿಮ ನಗರ ಪಾಲಿಕೆ ಆಯುಕ್ತ ಡಾ.ರಾಜೇಂದ್ರ ಕೆ.ವಿ. ಅವರು ಪದ್ಮನಾಭನಗರ ವಿಭಾಗದ ವ್ಯಾಪ್ತಿಯಲ್ಲಿ ಪ್ರಸ್ತಾಪಿತ ರಸ್ತೆ ಅಗಲೀಕರಣ, ವಾರ್ಡ್ ಮಟ್ಟದ ಸ್ವಚ್ಛತಾ ಕಾರ್ಯಗಳು ಹಾಗೂ ಭಾರತ ಜನಗಣತಿ–2027ಕ್ಕೆ ಸಂಬಂಧಿಸಿದಂತೆ ಸ್ಥಳ ಪರಿಶೀಲನೆ ನಡೆಸಿದರು.

ಪದ್ಮನಾಭನಗರ ವ್ಯಾಪ್ತಿ ಪ್ರಸಕ್ತ ಆಯ ವ್ಯಯ ದಲ್ಲಿನ ಬಿ-ಸ್ಮೈಲ್ ಅಡಿ ಪ್ರಸ್ತಾಪಿತ ರಸ್ತೆ ಅಗಲೀಕರಣಕ್ಕೆ ಸಂಬಂಧಿಸಿದಂತೆ ಇಟ್ಟಮಡು ರಸ್ತೆಯ ಸುಮಾರು 1.2 ಕಿ.ಮೀ ಉದ್ದದ ಭಾಗಕ್ಕೆ ಭೇಟಿ ನೀಡಿ ಪರಿಶೀಲಿಸಿ, ಸರ್ವೇಯರ್‌ಗಳು, ನಗರ ಯೋಜಕರು ಹಾಗೂ ಕಂದಾಯ ಅಧಿಕಾರಿಗಳು ಜಂಟಿಯಾಗಿ ಸ್ಥಳ ಪರಿಶೀಲನೆಯೊಂದಿಗೆ ಸೂಕ್ತ ಕ್ರಮ ಕೈಗೊಳ್ಳಲು ಸೂಚನೆ ನೀಡಿದರು.

ಹೊಸಕೆರೆಹಳ್ಳಿ ವಾರ್ಡ್ ನ ಇಟ್ಟಮಡು ರಸ್ತೆಯಲ್ಲಿ ಸ್ವಚ್ಛತಾ ವ್ಯವಸ್ಥೆಯನ್ನು ಪರಿಶೀಲಿಸಿ, ಆರೋಗ್ಯ ಮೇಲ್ವಿಚಾರಕರು ಹಾಗೂ ಮಾರ್ಷಲ್ ಗಳಿಗೆ ರಸ್ತೆಗಳಲ್ಲಿ ಕಸ ವಿಲೇವಾರಿಯನ್ನು ಸಮರ್ಪಕವಾಗಿ ನಿರ್ವಹಿಸುವಂತೆ ಹಾಗೂ ಅನಧಿಕೃತವಾಗಿ ಕಸ ಹಾಕುವವರ ವಿರುದ್ಧ ದಂಡಾತ್ಮಕ ಕ್ರಮಗಳನ್ನು ಕಟ್ಟುನಿಟ್ಟಾಗಿ ಜಾರಿಗೆ ತರುವಂತೆ ನಿರ್ದೇಶನ ನೀಡಿದರು.

ಹೊಸಕೆರೆಹಳ್ಳಿ ವಾರ್ಡ್ ನ 5ನೇ ಅಡ್ಡರಸ್ತೆ, ಟಿ.ಜಿ. ಲೇಔಟ್‌ನಲ್ಲಿ ಭಾರತ ಜನಗಣತಿ 2027 ಭಾಗವಾಗಿ ಗಣತಿದಾರರು ಮತ್ತು ಮೇಲ್ವಿಚಾರಕರೊಂದಿಗೆ ಬ್ಲಾಕ ವಾರು ಹಾಗೂ ಮನೆಗಳ ಪಟ್ಟಿ ಸಿದ್ದಪಡಿಸುವದರ ಬಗ್ಗೆ ಖುದ್ದಾಗಿ ಭೇಟಿ ನೀಡಿ ಪರಿಶೀಲಿಸಿದರು. ಜನಗಣತಿ ಮಾಹಿತಿ ಸಂಗ್ರಹಣೆ ಪ್ರಕ್ರಿಯೆಯನ್ನು ವೀಕ್ಷಿಸಿ, ಗಣತಿದಾರರಿಗೆ ಅಗತ್ಯ ಮಾಹಿತಿ ನೀಡುವಂತೆ ಸೂಚಿಸಿದರು. ಜೊತೆಗೆ, ಆಸ್ತಿ ಮಾಲೀಕರು ಪ್ರಸಕ್ತ ಸಾಲಿನ ಕಂದಾಯವನ್ನು ಪಾವತಿಸುವಂತೆ ಹಾಗೂ ಇ–ಆಸ್ತಿ ಪಡೆಯುವ ಕುರಿತು ಜಾಗೃತಿ ಮೂಡಿಸಲು ಕರೆ ನೀಡಿದರು.

ಈ ಪರಿಶೀಲನೆ ಸಂದರ್ಭದಲ್ಲಿ ಉಪ ಆಯುಕ್ತರು (ಆಡಳಿತ) ಸಾಯಿದಾ ಆಫ್ರಿನ್ ಭಾನು, ಅಧೀಕ್ಷಕ ಅಭಿಯಂತರರು ಜಯಶಂಕರ್, ನಗರ ಯೋಜಕರು, ಕಾರ್ಯಪಾಲಕ ಅಭಿಯಂತರರು, ಕಂದಾಯ ಅಧಿಕಾರಿಗಳು, ಗಣತಿದಾರರು ಹಾಗೂ ಸಂಬಂಧಪಟ್ಟ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಹಾಜರಿದ್ದರು.

# ಚಾರಣಕ್ಕೆ ಹಲವು ಕ್ರಮಗಳ ಕಡ್ಡಾಯ

ಬೆಂಗಳೂರು

ರಾಜ್ಯದಲ್ಲಿ ಅರಣ್ಯ ಇಲಾಖೆ ವ್ಯಾಪ್ತಿಗೆ ಒಳಪಡುವ ಎಲ್ಲ ಅನುಮೋದಿತ ಚಾರಣ ಪಥಗಳಲ್ಲಿ ಇನ್ನು ಮುಂದೆ ಪ್ರಕೃತಿ ಮಾರ್ಗದರ್ಶಕ (ನೇಚರ್ ಗೈಡ್) ಇಲ್ಲದೆ ಚಾರಣಕ್ಕೆ ಅವಕಾಶ ಇರುವುದಿಲ್ಲ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಸ್ಪಷ್ಟಪಡಿಸಿದ್ದಾರೆ.



ಚಾರಣಿಗರ ಸುರಕ್ಷತೆಗಾಗಿ ರೂಪಿಸಲಾಗಿರುವ ಪ್ರಮಾಣಿತ ಕಾರ್ಯಾಚರಣೆ ವಿಧಾನ(ಎಸ್.ಓ.ಪಿ.) ಬಿಡುಗಡೆ ಮಾಡಿ ಮಾತನಾಡಿದ ಅವರು, ಪ್ರತಿ 10 ಚಾರಣಿಗರಿಗೆ ಒಬ್ಬರು ಸ್ಥಳೀಯ ಪ್ರಕೃತಿ ಮಾರ್ಗದರ್ಶಕರಿರುತ್ತಾರೆ. ಎಲ್ಲ ಚಾರಣ ಪಥಗಳಲ್ಲಿ ಒಂದು ಬಸರಿಗೆ ಗರಿಷ್ಠ 150 ಜನರಿಗೆ ಮಾತ್ರ ಸೀಮಿತಗೊಳಿಸಲಾಗುವುದು ಎಂದರು.

ಚಾರಣಕ್ಕೆ ಬರುವವರು ಆನ್ ಲೈನ್‌ನಲ್ಲಿ ನೋಂದಾಯಿಸಿಕೊಳ್ಳುವುದು ಕಡ್ಡಾ. ಒಂದೊಮ್ಮೆ ಯಾವುದೇ ದಿನ ಒಬ್ಬರೇ ಚಾರಣಿಗರು ನೋಂದಾಯಿಸಿದ್ದರೂ ಗೈಡ್ ಸೌಲಭ್ಯ ಕಲ್ಪಿಸಲಾಗುವುದು, ಗೈಡ್ ಇಲ್ಲದೆ ಚಾರಣಕ್ಕೆ ಅವಕಾಶ ಇರುವುದಿಲ್ಲ ಎಂದರು.

ಇತ್ತೀಚೆಗೆ ಕೊಡಗಿನ ತಡಿಯಾಂಡಮೋಳ್ ಬೆಟ್ಟದಲ್ಲಿ ಕೇರಳದಿಂದ ಚಾರಣಕ್ಕೆ ಬಂದಿದ್ದ ಮಹಿಳೆ ನಾಪತ್ತೆಯಾಗಿ ಕಾಡಿನಲ್ಲಿ 3 ದಿನ ಕಳೆಯುವಂತಾದ ಹಾಗೂ ಅರಣ್ಯ ವ್ಯಾಪ್ತಿಗೆ ಒಳಪಡದ ಚಿಕ್ಕಮಗಳೂರಿನ ಮಾಣಿಕ್ಯಧಾರಾ ಬಳಿ ನಾಪತ್ತೆಯಾಗಿ ಶವವಾಗಿ ಬಾಲಕಿ ಪತ್ತೆಯಾದ ಹಿನ್ನೆಲೆಯಲ್ಲಿ ಚಾರಣಿಗರ ಸುರಕ್ಷತೆಗಾಗಿ ಈ ಎಸ್.ಓ.ಪಿ. ರೂಪಿಸಲು ಸೂಚಿಸಿದ್ದಾಗಿ ಅವರು ತಿಳಿಸಿದರು.

ಇನ್ನು ಮುಂದೆ ಪ್ರತಿಯೊಂದು ಚಾರಣಪಥದಲ್ಲೂ ನೇಚರ್ ಗೈಡ್ ಗಳಿಗೆ ಜಿ.ಪಿ.ಎಸ್. ಅಳವಡಿಸಿದ ವಾಕಿ ಟಾಕಿಯನ್ನು ಕಡ್ಡಾಯವಾಗಿ ನೀಡಲಾಗುವುದು. ಅದೇ ರೀತಿ ಪ್ರತಿಯೊಬ್ಬ ಚಾರಣಿಗರ ಮೊಬೈಲ್ ಗೆ ಚಾರಣಪಥದ ನಕ್ಷೆ ಸಹಿತ ಆಪ್ ಅನ್ನು ಅಳವಡಿಸಲಾಗುವುದು. ಅಕಸ್ಮಾತ್ ಯಾರೇ ಚಾರಣಿಗರು ದಾರಿ ತಪ್ಪಿದರೆ ಅವರ ಶೋಧಕ್ಕೆ ಈ ಆಪ್ ಸಹಕಾರಿಯಾಗಲಿದೆ ಎಂದರು.

ಚಾರಣ ಆರಂಭಕ್ಕೂ ಮುನ್ನ ಮೂಲ ನೆಲೆಯಲ್ಲಿ ಚಾರಣಿಗರಿಗೆ ಸಂಕ್ಷಿಪ್ತವಾಗಿ ಚಾರಣದ ದೂರ, ಅವಧಿ ಮತ್ತು ಅಲ್ಲಿನ ಪರಿಸ್ಥಿತಿಯ ಬಗ್ಗೆ ಮಾಹಿತಿ ನೀಡಲಾಗುವುದು. ಅದೇ ರೀತಿ ವನ್ಯಜೀವಿಗಳು ಎದುರಾದರೆ ಏನು ಮಾಡಬೇಕು ಎಂದೂ ತಿಳಿಸಲಾಗುವುದು. ಹೆಚ್ಚು ಶಬ್ದ ಮಾಡುವ ಯಾವುದೇ ಸಾಧನಗಳಿಗೆ, ಹರಿತವಾದ ಲೋಹದ ವಸ್ತು, ಆಯುಧಗಳನ್ನು ತೆಗೆದುಕೊಂಡು ಹೋಗಲು ಮತ್ತು ಕ್ಯಾಂಪ್ ಫೈರ್ ಮಾಡಲು ಚಾರಣ ಪಥದಲ್ಲಿ ಅವಕಾಶ ಇರುವುದಿಲ್ಲ ಎಂದು ಸ್ಪಷ್ಟಪಡಿಸಿದರು.

ಚಾರಣಿಗರಿಗೆ ಮೂಲ ನೆಲೆಯಲ್ಲಿ ಮಹಿಳೆಯರು ಮತ್ತು ಪುರುಷರಿಗೆ ಪ್ರತ್ಯೇಕ ಶೌಚಾಲಯ, ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಲಾಗುವುದು. ಚಾರಣ ಪಥದಲ್ಲಿ ಬೇಸ್ ಕ್ಯಾಂಪ್ ಗೆ ಹೋಗುವ ಮಾರ್ಗಸೂಚಿ, ಬಾಣದಾಕಾರದ ಗುರುತು ಹಾಕಲಾಗುವುದು. ಮಾರ್ಗಮಧ್ಯೆ ವಿರಮಿಸಿಕೊಳ್ಳಲು ವಿಶ್ರಾಂತಿ ತಾಣ ಮಾಡಲಾಗುವುದು ಎಂದರು.

ಇನ್ನು ಮುಂದೆ ಪ್ರಕೃತಿ ಮಾರ್ಗದರ್ಶಕರು (ಗೈಡ್)ಗಳು ಯಾವುದೇ ಚಾರಣಿಗ ತಮಗಿಂತ ಮುಂದೆ ಹೋಗಿಲ್ಲ ಹಾಗೂ ಹಿಂದೆ ಉಳಿದಿಲ್ಲ ಎಂಬುದನ್ನು ಖಾತ್ರಿ ಪಡಿಸಿಕೊಳ್ಳಬೇಕು. ಬೇಸ್ ಕ್ಯಾಂಪ್, ವಿಶಾಂತಿ ತಾಣಗಳಲ್ಲಿ ಕಡ್ಡಾಯವಾಗಿ ಚಾರಣಿಗರ ಎಣಿಕೆ ಮಾಡಬೇಕು. ಪ್ರತಿ ಅರ್ಧಗಂಟೆಗೊಮ್ಮೆ ತಮ್ಮ ವಾಕಿ ಟಾಕಿ ಮೂಲಕ ಬೇಸ್ ಕ್ಯಾಂಪ್ ನೊಂದಿಗೆ ಸಂವಹನ ನಡೆಸಬೇಕು. ಚಾರಣಿಗರ ಜವಾಬ್ದಾರಿ ಹೊರುವಂತೆ ಅವರಿಗೆ ಹೊಣೆಗಾರಿಕೆ ನೀಡಲಾಗುವುದು. ಚಾರಣ ಆರಂಭವಾದ ಒಂದು ಗಂಟೆಯೊಳಗೆ ವಾಕಿ ಟಾಕಿ ಸಂವಹನ ಗೈಡ್ ಕಡೆಯಿಂದ ನಡೆಯದಿದ್ದರೆ ಬೇಸ್ ಕ್ಯಾಂಪ್ ಸಿಬ್ಬಂದಿಯೇ ಕರೆ ಮಾಡಿ ಖಚಿತಪಡಿಸಿಕೊಳ್ಳುತ್ತಾರೆ ಎಂದರು.

ಅಪ್ರಾಪ್ತ ವಯಸ್ಕರು ಚಾರಣಕ್ಕೆ ತೆರಳಲು ಅವರ ಪಾಲಕರ, ಪೋಷಕರ ಅನುಮತಿ ಪತ್ರ ಕಡ್ಡಾಯ. ಅದೇ ರೀತಿ ಹಿರಿಯ ನಾಗರಿಕರು ಚಾರಣ ಕೈಗೊಳ್ಳಲು ತಮ್ಮ ದೈಹಿಕ ಸಾಮರ್ಥ್ಯ ಮತ್ತು ಸದೃಢತೆಯ ಪ್ರಮಾಣ ಪತ್ರ ಒದಗಿಸಬೇಕಾಗುತ್ತದೆ ಎಂದರು.

ಯಾವುದೇ ಚಾರಣಿಗರಿಗೆ ಆರೋಗ್ಯ ಸಮಸ್ಯೆ ಆದರೆ ಅವರ ಆರೈಕೆಗಾಗಿ ಗೈಡ್ ತಮ್ಮ ಜೊತೆ ಪ್ರಥಮ ಚಿಕಿತ್ಸಾ ಕಿಟ್ ಅನ್ನು ತೆಗೆದುಕೊಂಡು ಹೋಗಬೇಕಾಗುತ್ತದೆ. ಫ್ಲಾಶ್ ಬಳಸಿ ಫೋಟೋ ತೆಗೆಯುವುದನ್ನು, ಏಕ ಬಳಕೆ ಪ್ಲಾಸ್ಟಿಕ್ ಹಾಗೂ ಕ್ಯಾರಿ ಬ್ಯಾಗ್ ತೆಗೆದುಕೊಂಡು ಹೋಗುವುದನ್ನು ನಿಷೇಧಿಸಲಾಗಿದೆ. ಅದೇ ರೀತಿ ತ್ಯಾಜ್ಯವನ್ನು ಚಾರಣಿಗರು ತಂದು ಬೇಸ್ ಕ್ಯಾಂಪ್ ನಲ್ಲೇ ವಿಲೇವಾರಿ ಮಾಡಬೇಕು. ಇದೆಲ್ಲವೂ ಎಸ್.ಓ.ಪಿಯಲ್ಲಿದೆ ಎಂದರು.

## ಬೆಂಗಳೂರು ಜಲಮಂಡಳಿಗೆ ಅಂತಾರಾಷ್ಟ್ರೀಯ ಗೌರವ

ಬೆಂಗಳೂರು

ಬೆಂಗಳೂರು ಜಲ ಸರಬರಾಜು ಮತ್ತು ಒಳಚರಂಡಿ ಮಂಡಳಿ (ಜಲಮಂಡಳಿ) ದೇಶದಲ್ಲೇ ಮೊದಲ ಬಾರಿಗೆ ಐಎಸ್‌ಓ 50001:2018 ಅಂತಾರಾಷ್ಟ್ರೀಯ ಪ್ರಮಾಣಪತ್ರ ಪಡೆದು ಹೊಸ ಇತಿಹಾಸ ನಿರ್ಮಿಸಿದೆ. ಉಪಮುಖ್ಯಮಂತ್ರಿಗಳಾದ ಡಿ.ಕೆ.ಶಿವಕುಮಾರ್ ಅವರ ದೂರದೃಷ್ಟಿಯ ನಾಯಕತ್ವದಲ್ಲಿ ಈ ಸಾಧನೆ ಸಾಧ್ಯವಾಗಿದೆ ಎಂದು ಜಲಮಂಡಳಿ ತಿಳಿಸಿದೆ.



ಏಪ್ರಿಲ್ 14, 2026ರಂದು ಬ್ಯೂರೋ ವೆರಿಟಾಸ್ ಈ ಪ್ರತಿಷ್ಠಿತ ಪ್ರಮಾಣಪತ್ರವನ್ನು ನೀಡಿದ್ದು, ಜಲಮಂಡಳಿಯ ಉನ್ನತ ಮಟ್ಟದ ಇಂಧನ ನಿರ್ವಹಣಾ ವ್ಯವಸ್ಥೆಯನ್ನು ಅಧಿಕೃತವಾಗಿ ಗುರುತಿಸಿದೆ. ಟಿ.ಕೆ. ಹಳ್ಳಿ, ಹಾರೋಹಳ್ಳಿ ಮತ್ತು ತಾತಗುಣಿ ಪ್ರದೇಶಗಳಲ್ಲಿರುವ ಬೃಹತ್ ನೀರು ಸರಬರಾಜು ಪಂಪಿಂಗ್ ಕೇಂದ್ರಗಳನ್ನು ಅಂತಾರಾಷ್ಟ್ರೀಯ ಮಾನದಂಡಗಳಿಗೆ ಅನುಗುಣವಾಗಿ ನಿರ್ವಹಿಸಿರುವುದಕ್ಕಾಗಿ ಈ ಗೌರವ ಲಭಿಸಿದೆ. ಜೊತೆಗೆ ಕಾವೇರಿ ಭವನದಲ್ಲಿರುವ ಪ್ರಧಾನ ಕಚೇರಿ ಹಾಗೂ ಬೃಹತ್ ಬೆಂಗಳೂರು ವ್ಯಾಪ್ತಿಯ ನೀರು ಸರಬರಾಜು ವ್ಯವಸ್ಥೆಯನ್ನೂ ಈ ಪ್ರಮಾಣಪತ್ರ ಒಳಗೊಂಡಿದೆ.

ಈ ಹಿನ್ನೆಲೆಯಲ್ಲಿ ಜಲಮಂಡಳಿ ಅಧ್ಯಕ್ಷರಾದ ಡಾ. ರಾಮ್ ಪ್ರಸಾತ್ ಮನೋಹರ್ ಅವರ ನೇತೃತ್ವದಲ್ಲಿ ಹಿರಿಯ ಅಧಿಕಾರಿಗಳು ಉಪಮುಖ್ಯಮಂತ್ರಿಗಳನ್ನು ಭೇಟಿಯಾಗಿ ಪ್ರಮಾಣಪತ್ರವನ್ನು ಹಸ್ತಾಂತರಿಸಿ ಧನ್ಯವಾದ ಸಲ್ಲಿಸಿದರು.

ಈ ಸಾಧನೆಯನ್ನು ಶ್ಲಾಘಿಸಿದ ಡಿ.ಕೆ. ಶಿವಕುಮಾರ್ ಅವರು, "ಈ ಪ್ರಮಾಣಪತ್ರವು ಬೆಂಗಳೂರು ನಗರಕ್ಕೆ ವಿಶ್ವದರ್ಜೆಯ, ಸುಸ್ಥಿರ ಜಲ ಮೂಲಸೌಕರ್ಯ ನಿರ್ಮಿಸುವ ನಮ್ಮ ಬದ್ಧತೆಯನ್ನು ತೋರಿಸುತ್ತದೆ. ಜಲಮಂಡಳಿಯ ಕಾರ್ಯಕ್ಷಮತೆ ಲಕ್ಷಾಂತರ ಜನರಿಗೆ ವಿಶ್ವಾಸಾರ್ಹ ನೀರಿನ ಸೇವೆ ಒದಗಿಸುವಲ್ಲಿ ಪ್ರಮುಖ ಪಾತ್ರವಹಿಸುತ್ತಿದೆ," ಎಂದು ಹೇಳಿದರು.

ನಗರಾಭಿವೃದ್ಧಿ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ತುಷಾರ್ ಗಿರಿನಾಥ್ ಅವರು ಮಾತನಾಡಿ, "ಈ ಐತಿಹಾಸಿಕ ಸಾಧನೆ ಜಲಮಂಡಳಿಯ ಎಲ್ಲಾ ಸಿಬ್ಬಂದಿಯ ಪರಿಶ್ರಮದ ಫಲವಾಗಿದೆ," ಎಂದು ಹೇಳಿದರು.

## 'ತೃಪ್ತಿಕರವಾಗಿ ಕಾರ್ಯನಿರ್ವಹಿಸಿದ ಘನತ್ಯಾಜ್ಯ ನಿರ್ವಹಣಾ ಗುತ್ತಿಗೆದಾರರ ವಿರುದ್ಧ ಕ್ರಮ ಕೈಗೊಳ್ಳಿ'

ಬೆಂಗಳೂರು

ದಕ್ಷಿಣ ನಗರ ಪಾಲಿಕೆಯ ಆಯುಕ್ತ ಕೆ.ಎನ್.ರಮೇಶ್ ರವರು ಪಾಲಿಕೆ ವ್ಯಾಪ್ತಿಯಲ್ಲಿ ಘನತ್ಯಾಜ್ಯ ಸಮಸ್ಯೆ ಹೆಚ್ಚಾಗಿರುವ ಹಿನ್ನೆಲೆಯಲ್ಲಿ ಘನತ್ಯಾಜ್ಯ ನಿರ್ವಹಣಾ ವಿಭಾಗದ ಹಿರಿಯ ಅಧಿಕಾರಿಗಳೊಂದಿಗೆ ಮಹತ್ವದ ಸಭೆ ನಡೆಸಿದರು.

ನಗರದ ಸ್ವಚ್ಛತೆಯನ್ನು ಕಾಪಾಡುವ ನಿಟ್ಟಿನಲ್ಲಿ ಆಯುಕ್ತರು ಅಧಿಕಾರಿಗಳಿಗೆ ಈ ಕೆಳಗಿನ ಕಟ್ಟುನಿಟ್ಟಿನ ಸೂಚನೆಗಳನ್ನು ನೀಡಿದರು. ಪಾಲಿಕೆ ವ್ಯಾಪ್ತಿಯಲ್ಲಿ ಬೃಹತ್ ತ್ಯಾಜ್ಯ ಉತ್ಪಾದಕರ ಸಮೀಕ್ಷೆ ನಡೆಸಿ, ಅಧಿಕೃತ ಎಂಪನೆಲ್ಡ್ ವೆಂಡರ್‌ಗಳ ಮೂಲಕವೇ ಕಸ ಸಂಗ್ರಹಣೆಯಾಗುತ್ತಿದೆಯೇ ಎಂಬುದನ್ನು ಖಚಿತಪಡಿಸಿಕೊಳ್ಳಲು ಸೂಚಿಸಿದರು.

ಪ್ರತಿನಿತ್ಯ ಆಟೋ ಟಿಪ್ಪರ್‌ಗಳು ಮತ್ತು ಕಾಂಪಾಕ್ಟರ್‌ಗಳ ಕಾರ್ಯಕ್ಷಮತೆ ಹಾಗೂ ಮಾರ್ಷಲ್‌ಗಳು, ಲಿಂಕ್ ವರ್ಕರ್ಸ್, ಪಿಕೆಗಳ (ಪೌರಕಾರ್ಮಿಕರು) ಮೇಲ್ವಿಚಾರಕರ ಹಾಜರಾತಿ ಮತ್ತು ಜವಾಬ್ದಾರಿಗಳ ಕುರಿತು ನಿರ್ದೇಶನ ನೀಡಿದರು.



ಸಾರ್ವಜನಿಕರ ಹಿತದೃಷ್ಟಿಯಿಂದ ತೃಪ್ತಿಕರವಾಗಿ ಕೆಲಸ ಮಾಡದ ಗುತ್ತಿಗೆದಾರರಿಗೆ ನೋಟಿಸ್ ನೀಡಿ ವಜಾಗೊಳಿಸಲು ಸೂಚಿಸಿದರು. ಮತ್ತು ರಸ್ತೆಗಳಲ್ಲಿ ಕಸ ಎಸೆಯುವವರಿಗೆ ಭಾರಿ ಪ್ರಮಾಣದಲ್ಲಿ ದಂಡ ವಿಧಿಸಲು ನಿರ್ದೇಶನ ನೀಡಿದರು.

ಏಕಬಳಕೆಯ ಪ್ಲಾಸ್ಟಿಕ್ ಮೇಲಿನ ನಿಷೇಧವನ್ನು ಕಟ್ಟುನಿಟ್ಟಾಗಿ ಜಾರಿಗೆ ತರುವ ಸಂಬಂಧ ಅಂಗಡಿ ಮುಗ್ಗಟ್ಟುಗಳ ಮೇಲೆ ಆಗಿಂದಾಗ್ಗೆ ದಾಳಿ ಮಾಡಲು ಸೂಚಿಸಿದರು. ಸಾರ್ವಜನಿಕರಲ್ಲಿ ಏಕ ಬಳಕೆ ಪ್ಲಾಸ್ಟಿಕ್ ನಿಷೇಧ ಕುರಿತು ಅರಿವು ಮೂಡಿಸುವಂತೆ ಸೂಚಿಸಿದರು.

ಹಸಿ ಮತ್ತು ಒಣ ಕಸವನ್ನು ಮನೆಮಟ್ಟದಲ್ಲೇ ವಿಂಗಡಿಸುವ ಪ್ರಕ್ರಿಯೆಯನ್ನು ಸುಧಾರಿಸಲು ಕ್ರಮಕೈಗೊಳ್ಳುವಂತೆ ಸೂಚಿಸಿದರು. ಈ ವೇಳೆ ಪಾಲಿಕೆಯ ಘನತ್ಯಾಜ್ಯ ವಿಭಾಗದ ಡಿ.ಜಿ.ಎಂ, ಎ.ಜಿ.ಎಂ. ಹಾಗೂ ಇನ್ನಿತರ ಅಧಿಕಾರಿಗಳು ಮತ್ತು ಸ್ವಯಂ ಸೇವಕರು ಉಪಸ್ಥಿತರಿದ್ದರು.

ಇನ್ನೊಂದೆಡೆ ಆಯುಕ್ತರು ಜೆಪಿ ನಗರದ ಶಾಕಾಂಬರಿ ನಗರಕ್ಕೆ ಭೇಟಿ ನೀಡಿ ಜನಗಣತಿ ಕಾರ್ಯದ ಅಂಗವಾಗಿ ನಡೆಯುತ್ತಿರುವ ಬ್ಲಾಕ್‌ಗಳ ಸೃಜನೆ ಮತ್ತು ಮನೆಗಳ ಪಟ್ಟಿ ಮಾಡುವಿಕೆ ಕಾರ್ಯವನ್ನು ಖುದ್ದಾಗಿ ಪರಿಶೀಲಿಸಿದರು.

ಜನಗಣತಿ ಪ್ರಕ್ರಿಯೆಯಲ್ಲಿ ಯಾವುದೇ ಲೋಪದೋಷಗಳಿಲ್ಲದೆ 100% ನಿಖರತೆಯನ್ನು ಕಾಪಾಡಿಕೊಳ್ಳುವಂತೆ ಸಿಬ್ಬಂದಿಗೆ ತಿಳಿಸಿದರು. ಈ ಸಂದರ್ಭದಲ್ಲಿ ಚಾರ್ಜ್ ಆಫೀಸರ್ ಆದ ಶ್ರೀ ಮನು ಗೌಡ ಮತ್ತು ಇತರ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

## 'ಕಚೇರಿಗೆ ಅಲೆಸುವುದನ್ನು ತಪ್ಪಿಸಿ'



ಬೆಂಗಳೂರು

ಭೂ ದಾಖಲೆಗಾಗಿ ಅನಗತ್ಯವಾಗಿ ಸರ್ಕಾರಿ ಕಚೇರಿಗಳಿಗೆ ಅಲೆದಾಡಿಸುವುದನ್ನು ಅಧಿಕಾರಿಗಳು ಕಡಿಮೆ ಮಾಡಬೇಕು. ಇದರಿಂದ ಅಧಿಕಾರಿಗಳ ಕೆಲಸ ಒತ್ತಡ ಕಡಿಮೆಯಾಗುವ ಜೊತೆಗೆ ಮಧ್ಯವರ್ತಿಗಳ ಹಾವಳಿಯೂ ತಗ್ಗಲಿದೆ ಎಂದು ಕಂದಾಯ ಸಚಿವ ಕೃಷ್ಣಭೈರೇಗೌಡ ಹೇಳಿದ್ದಾರೆ.

ವಿಕಾಸಸೌಧದಲ್ಲಿ ರಾಜ್ಯದ ಎಲ್ಲ ತಹಶೀಲ್ದಾರ್ ಜೊತೆ ವಿಡಿಯೋ ಸಂವಾದ ನಡೆಸಿ, ಇಲಾಖಾ ಪ್ರಗತಿ ಕುರಿತು ಪರಿಶೀಲನೆ ನಡೆಸಿದರು.

ಭೂ ದಾಖಲೆಗಳು ದಿನಕ್ಕೆ 12 ಸಾವಿರ ಪುಟ ಸ್ಕ್ಯಾನ್ ಮಾಡಬೇಕು ಎಂಬ ಗುರಿ ನಿಗದಿಮಾಡಲಾಗಿದೆ. ಆದರೆ ಕೆಲವು ಅಧಿಕಾರಿಗಳು, ಈ ಗುರಿ ತಲುಪುವಲ್ಲಿ ವಿಫಲವಾಗಿರುವುದಕ್ಕೆ ಕಾರಣ ನೀಡುವಂತೆ ಸೂಚನೆ ನೀಡಿದರು.

## ವಿಶ್ವಮಾನವ ಎಕ್ಸಪ್ರೆಸ್‌ಗೆ ಎಲ್‌ಎಚ್‌ಬಿ ಬೋಗಿಗಳ ಅಳವಡಿಕೆ

ಬೆಂಗೂರು

ನೈಋತ್ಯ ರೈಲ್ವೆಯು ಮೈಸೂರು ಬೆಳಗಾವಿ ಮೈಸೂರು ವಿಶ್ವಮಾನವ ಸೂಪರ್ ಫಾಸ್ಟ್ ಎಕ್ಸಪ್ರೆಸ್ (ರೈಲು ಸಂಖ್ಯೆ 20676/20675) ರೈಲಿನ ಹಳೆಯ ಐಸಿಎಫ್ ಬೋಗಿಗಳನ್ನು ಆಧುನಿಕ ಎಲ್‌ಎಚ್‌ಬಿ ಬೋಗಿಗಳಾಗಿ ಬದಲಾಯಿಸುತ್ತಿದೆ. ಈ ಪರಿಷ್ಕೃತ ವ್ಯವಸ್ಥೆಯು ಮೈಸೂರಿನಿಂದ ಏಪ್ರಿಲ್ 26, 2026 ರಂದು ಮತ್ತು ಬೆಳಗಾವಿಯಿಂದ ಏಪ್ರಿಲ್ 27, 2026 ರಂದು ಜಾರಿಗೆ ಬರಲಿದೆ.

ಪ್ರಸ್ತುತ 21 ಬೋಗಿಗಳನ್ನು ಹೊಂದಿರುವ ಈ ರೈಲು, ಇನ್ನು ಮುಂದೆ ಒಟ್ಟು 20 ಎಲ್‌ಎಚ್‌ಬಿ ಬೋಗಿಗಳೊಂದಿಗೆ ಸಂಚರಿಸಲಿದೆ. ಇದರಲ್ಲಿ 1 ಎಸಿ ಚೇರ್ ಕಾರ್, 12 ಸಾಮಾನ್ಯ ದರ್ಜೆ ಬೋಗಿಗಳು, 5 ದ್ವಿತೀಯ ದರ್ಜೆ ಸಿಟಿಂಗ್ ಚೇರ್ ಕಾರ್ ಬೋಗಿಗಳು, 1 ಜನರೇಟರ್ ಕಾರ್ ಹಾಗೂ 1 ದಿವ್ಯಾಂಗ ಸ್ನೇಹಿ ಕಂಪಾರ್ಟ್‌ಮೆಂಟ್ ಒಳಗೊಂಡ ಬ್ರೇಕ್ ವ್ಯಾನ್ ಇರಲಿವೆ.

ಈ ಹೊಸ ಎಲ್‌ಎಚ್‌ಬಿ ಬೋಗಿಗಳು ಪ್ರಯಾಣಿಕರಿಗೆ ಹೆಚ್ಚಿನ ಸುರಕ್ಷತೆ, ಉತ್ತಮ ಸೌಕರ್ಯ ಮತ್ತು ಸುಧಾರಿತ ಸೌಲಭ್ಯಗಳನ್ನು ಒದಗಿಸಲಿವೆ.

## ರೈಲು ಮಾರ್ಗದ ಮೂಲಕ ಸರಕು ಸಾಗಣೆ ವ್ಯಾಪಾರ ವೃದ್ಧಿಸಲು ಕ್ರಮ

ಹುಬ್ಬಳ್ಳಿ

ಹುಬ್ಬಳ್ಳಿ ರೈಲ್ವೆ ವಿಭಾಗವು ಏಪ್ರಿಲ್ 17ರಂದು ವಿಭಾಗೀಯ ಕಚೇರಿಯಲ್ಲಿ ಸರಕು ಗ್ರಾಹಕರೊಂದಿಗೆ ವ್ಯವಹಾರ ಅಭಿವೃದ್ಧಿ ಘಟಕ ಸಭೆಯನ್ನು ಆಯೋಜಿಸಿತು.

ಸಭೆಯ ಉದ್ದೇಶ ಸರಕು ಗ್ರಾಹಕರೊಂದಿಗೆ ಸಮನ್ವಯವನ್ನು ಬಲಪಡಿಸಿ, ರೈಲು ಮಾರ್ಗದ ಮೂಲಕ ಸರಕು ಸಾಗಣೆ ವ್ಯಾಪಾರವನ್ನು ವೃದ್ಧಿಸುವುದಾಗಿದೆ.

ಈ ಸಂದರ್ಭದಲ್ಲಿ ಮಾತನಾಡಿದ ವಿಭಾಗೀಯ ರೈಲ್ವೆ ವ್ಯವಸ್ಥಾಪಕರಾದ ಬೇಲಾ ಮೀನಾ ಅವರು, ರೈಲ್ವೆ ಹಾಗೂ ಸರಕು ಗ್ರಾಹಕರ ನಡುವಿನ ಉತ್ತಮ ಸಮನ್ವಯದಿಂದ ಗಮನಾರ್ಹ ಸಾಧನೆ ಸಾಧ್ಯವಾಗಿದೆ ಎಂದು



ಹೇಳಿದರು. ರೈಲ್ವೆ ಇಲಾಖೆ ಸದಾ ಗ್ರಾಹಕರ ಹಿತಾಸಕ್ತಿಗೆ ಬದ್ಧವಾಗಿದ್ದು, ಸರಕುಗಳ ಸಕಾಲಿಕ, ಸುರಕ್ಷಿತ ಹಾಗೂ ತ್ವರಿತ ಸಾಗಣೆಗೆ ಆದ್ಯತೆ ನೀಡುವುದಾಗಿ ಭರವಸೆ ನೀಡಿದರು.

ಸಭೆಯಲ್ಲಿ ಜೆಎಸ್‌ಡಬ್ಲ್ಯೂ ಸ್ಟೀಲ್, ನ್ಯಾಷನಲ್ ಥರ್ಮಲ್ ಪವರ್ ಕಾರ್ಪೊರೇಷನ್, ನ್ಯಾಷನಲ್ ಮಿನರಲ್ ಡೆವಲಪ್ಮೆಂಟ್ ಕಾರ್ಪೊರೇಷನ್, ಪಾರಾದೀಪ್ ಫಾಸ್ಫೇಟ್ಸ್ ಲಿಮಿಟೆಡ್, ವೇದಾಂತಾ ಲಿಮಿಟೆಡ್ ಸೇರಿದಂತೆ ಹಲವು ಪ್ರಮುಖ ಕಂಪನಿಗಳ ಪ್ರತಿನಿಧಿಗಳು ಭಾಗವಹಿಸಿ ತಮ್ಮ ಅಭಿಪ್ರಾಯಗಳನ್ನು ಹಂಚಿಕೊಂಡರು.

ಹಿರಿಯ ವಿಭಾಗೀಯ ಪರಿಚಾಲನ ವ್ಯವಸ್ಥಾಪಕರಾದ ಸತೀಶ ರಟಕಲೆ ಅವರು ರೈಲ್ವೆಯ ಸರಕು ಸಾಧನೆ ಕುರಿತು ಪ್ರಸ್ತುತಿ ನೀಡಿದರು. ಇದೇ ವೇಳೆ, ಗ್ರಾಹಕರು ಪ್ರಸ್ತುತ ಆರ್ಥಿಕ ವರ್ಷದ ಲೋಡಿಂಗ್ ಯೋಜನೆಗಳು ಹಾಗೂ ಭವಿಷ್ಯದ ಯೋಜನೆಗಳನ್ನು ಮಂಡಿಸಿದರು.

ಸಭೆಯ ಯಶಸ್ವಿ ಆಯೋಜನೆಗಾಗಿ ಗ್ರಾಹಕರು ರೈಲ್ವೆ ವಿಭಾಗಕ್ಕೆ ಕೃತಜ್ಞತೆ ಸಲ್ಲಿಸಿ, ರೈಲು ಮೂಲಕ ಸರಕು ಸಾಗಣೆ ಹೆಚ್ಚಿಸಲು ಸಂಪೂರ್ಣ ಸಹಕಾರ ನೀಡುವುದಾಗಿ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಹೆಚ್ಚುವರಿ ವಿಭಾಗೀಯ ರೈಲ್ವೆ ವ್ಯವಸ್ಥಾಪಕರು ಸೇರಿದಂತೆ ಹಲವು ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

## 'ದಕ್ಷಿಣ ರಾಜ್ಯಗಳ ಮೇಲೆ ಕೇಂದ್ರ ಸರಕಾರದ ದಬ್ಬಾಳಿಕೆ ಪ್ರಯತ್ನ ವಿಫಲ'

ನವದೆಹಲಿ

"ಬೆಂಗಳೂರು ಎಲ್ಲಾ ಕ್ಷೇತ್ರದಲ್ಲಿ ದೇಶದ ಇತರೆ ನಗರಗಳಿಗಿಂತ ಮುಂಚೂಣಿಯಲ್ಲಿದೆ. ನಮ್ಮಲ್ಲಿ ಬಂದು ಹೂಡಿಕೆ ಮಾಡಿದ ಪ್ರತಿಯೊಬ್ಬರೂ ಲಾಭ ಪಡೆದಿದ್ದಾರೆ ಹೊರತು ನಷ್ಟ ಅನುಭವಿಸಿಲ್ಲ. ಈ ಕಾರಣಕ್ಕೆ ಬೆಂಗಳೂರಿಗೆ ಬಂದವರು ಮತ್ತೆ ವಾಪಸ್ ಹೋಗಲು ಬಯಸುವುದಿಲ್ಲ" ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ತಿಳಿಸಿದರು.

ದೆಹಲಿಯಲ್ಲಿ ನಡೆದ ಬ್ರಿಡ್ಜ್ ಟು ಬೆಂಗಳೂರು ಕಾರ್ಯಕ್ರಮದಲ್ಲಿ ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಮಾತನಾಡಿದರು.

"ನಾನು ಕಳೆದ 35 ವರ್ಷಗಳಿಂದ ಕರ್ನಾಟಕ ಸರ್ಕಾರದ ಭಾಗವಾಗಿದ್ದೇನೆ. 20 ವರ್ಷಗಳ ಹಿಂದೆ ಮಾಜಿ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿ ಅವರು ಬೆಂಗಳೂರಿಗೆ ಆಗಮಿಸಿ, ಈಗ ಜಾಗತಿಕ ನಾಯಕರು ಮೊದಲು ಬೆಂಗಳೂರಿಗೆ ಬಂದು, ನಂತರ ದೇಶದ ಇತರೆ ನಗರಗಳಿಗೆ ಹೋಗುತ್ತಿದ್ದಾರೆ ಎಂದು ಹೇಳಿದ್ದರು. ಹಾಲಿ ಪ್ರಧಾನಿ ನರೇಂದ್ರ ಮೋದಿ ಅವರು ಕೂಡ ಬೆಂಗಳೂರು ಜಾಗತಿಕ ನಗರ ಎಂದು ಬಣ್ಣಿಸಿದ್ದಾರೆ" ಎಂದರು.

"ನಾನು ಇತ್ತೀಚೆಗೆ ದಾವೋಸ್ ಆರ್ಥಿಕ ಶೃಂಗಸಭೆಯಲ್ಲಿ ಭಾಗವಹಿಸಿದ್ದೆ. ಅಲ್ಲಿ ಅನೇಕ ದೇಶಗಳ ಕಂಪನಿಗಳ ಜತೆ ವ್ಯಾಪಾರ ಹೂಡಿಕೆ ಒಪ್ಪಂದಕ್ಕೆ ಸಹಿ ಹಾಕಬೇಕಿತ್ತು. ನಾನು ಹಾಗೂ ಕೈಗಾರಿಕಾ ಸಚಿವರಾದ ಎಂ.ಬಿ ಪಾಟೀಲ್ ಅವರು ಉದ್ದೇಶಪೂರ್ವಕವಾಗಿ ಅಲ್ಲಿ ಸಹಿ ಹಾಕಲಿಲ್ಲ. ಅಲ್ಲಿ ನಾವು ಅನೇಕ ದೇಶಗಳ ಅಧಿಕಾರಿಗಳು ಹಾಗೂ ನಾಯಕರನ್ನು ಭೇಟಿ ಮಾಡಿ ಚರ್ಚೆ ಮಾಡಿದೆವು. ಎಲ್ಲರೂ ಬೆಂಗಳೂರು ಮೂಲಕ ಭಾರತವನ್ನು ನೋಡುತ್ತಿದ್ದಾರೆ" ಎಂದು ಹೇಳಿದರು.

"ಬೆಂಗಳೂರು ಹಾಗೂ ಕರ್ನಾಟಕ ರಾಜ್ಯದ ಮಾನವ ಸಂಪನ್ಮೂಲವನ್ನು ದೇಶದ ಬೇರೆ ರಾಜ್ಯ ಅಥವಾ ನಗರಗಳ ಜೊತೆ ಹೋಲಿಕೆ ಮಾಡಲು ಸಾಧ್ಯವಿಲ್ಲ. ಅದೇ ಸಭೆಯಲ್ಲಿ ಬೇರೆ ರಾಜ್ಯದ ಮುಖ್ಯಮಂತ್ರಿ ಕೂಡ ಭಾಗವಹಿಸಿ ಅವರ ರಾಜ್ಯದ ಬಗ್ಗೆ ಪ್ರಚಾರ ಮಾಡುತ್ತಿದ್ದರು. ಆದರೆ ಅಲ್ಲಿನ ವಿದೇಶಿ ಅಧಿಕಾರಿ ಹಾಗೂ ಉದ್ಯಮಿಗಳಿಗೆ ಸೂಕ್ತವಾಗುವ ಹವಾಮಾನ, ಸಂಸ್ಕೃತಿ ಹೊಂದಿರುವುದು ಬೆಂಗಳೂರು ಮಾತ್ರ" ಎಂದು ವಿವರಿಸಿದರು.

## ಎಚ್5ಎನ್1 ಭಯ ಬೇಡ

ಬೆಂಗಳೂರು

ಏಪ್ರಿಲ್ 15 ರಂದು 7444 ಕೋಳಿಗಳು, 14 ಸಾವಿರಕ್ಕೂ ಅಧಿಕ ಮೊಟ್ಟೆಗಳು, 2250 ಕೆಜಿ ಕೋಳಿ ಆಹಾರವನ್ನು ಪಶುಪಾಲನೆ ಇಲಾಖೆ ನೇತೃತ್ವದಲ್ಲಿ ವೈಜ್ಞಾನಿಕವಾಗಿ ಕಲ್ಲಿಂಗ್ ಮಾಡಿ ವಿಲೇವಾರಿ ಮಾಡಲಾಗಿದ್ದು, ಇದರಲ್ಲಿ ಭಾಗಿಯಾದ 10 ಸಿಬ್ಬಂದಿಯನ್ನು ಕ್ವಾರಂಟೈನ್ ಮಾಡಿ, ಒಸೆಲ್ಟಾಮಿವಿರ್ ಔಷಧದೊಂದಿಗೆ ವೈದ್ಯಕೀಯ ನಿಗಾದಲ್ಲಿ ಇರಿಸಲಾಗಿದೆ. ಈ ಸ್ಥಳವನ್ನು ಒಂದು ವರ್ಷದವರೆಗೆ ನಿಷೇಧಿತ ಪ್ರದೇಶ ಎಂದು ಘೋಷಣೆ ಮಾಡಲಾಗಿದೆ.

ಆರೋಗ್ಯ ಇಲಾಖೆ ಕಣ್ಗಾವಲು ಪ್ರಗತಿಯಲ್ಲಿದ್ದು 3 ಕಿ ಮೀ ವ್ಯಾಪ್ತಿ ವಲಯದಲ್ಲಿ ಒಟ್ಟು 3422 ಜನಸಂಖ್ಯೆಯ ಎರಡು ಗ್ರಾಮಗಳಿದ್ದು, 3–10 ಕಿ ಮೀ ವ್ಯಾಪ್ತಿಯಲ್ಲಿ ಒಟ್ಟು 22,395 ಜನಸಂಖ್ಯೆ ಇರುವ 17 ಗ್ರಾಮಗಳು ಇದ್ದು, ಆರೋಗ್ಯ ಕಾರ್ಯಕರ್ತರು ಹಾಗೂ ಆಶಾ ಕಾರ್ಯಕರ್ತರು ದಿನನಿತ್ಯ ಮನೆಮನೆ ಭೇಟಿ ನೀಡಿ ಮುಂದಿನ ಹತ್ತು ದಿನಗಳ ಕಾಲ ಜ್ವರ ಕಣ್ಗಾವಲು ನಡೆಸಲಾಗುವುದು. ಶಂಕಿತ ಪ್ರಕರಣಗಳನ್ನು ತಕ್ಷಣ ವರದಿ ಮಾಡಲು ಆಸ್ಪತ್ರೆಗಳಿಗೆ ಸೂಚಿಸಲಾಗಿದ್ದು, ಪಿಪಿಇ ಕಿಟ್, ಮಾಸ್ಕ್, ಒಸೆಲ್ಟಾಮಿವಿರ್, ವಿಟಿಎಂ ಮತ್ತು ಗಂಟಲು ಸ್ವಾಬ್ ಗಳನ್ನು ಅಗತ್ಯ ಪ್ರಮಾಣದಲ್ಲಿ ಹೆಸರಘಟ್ಟ ಮತ್ತು ಸೊನ್ನೇನಹಳ್ಳಿ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಲಭ್ಯ ಇರಬೇಕೆಂದು ಕಟ್ಟು ನಿಟ್ಟಿನ ಸೂಚಿಸಲಾಗಿದೆ ಎಂದು ಹೇಳಿದ್ದಾರೆ.

ಈವರಿಗೆ ಯಾವುದೇ ಮನುಷ್ಯರಲ್ಲಿ ಈ ರೋಗ ವರದಿಯಾಗಿಲ್ಲ. ಹಾಗಾಗಿ ಸಾರ್ವಜನಿಕರು ಆತಂಕ ಪಡುವ ಅಗತ್ಯ ಇಲ್ಲ. ಆದರೆ ಜಾಗರೂಕರಾಗಿರಬೇಕು. ಅನಾರೋಗ್ಯ/ಸತ್ತ ಹಕ್ಕಿಗಳ ಸಂಪರ್ಕದಿಂದ ದೂರ ಇರಬೇಕು. ಯಾವುದೇ ರೀತಿಯ ಅನುಮಾನ ಕಂಡುಬಂದರೆ ತಕ್ಷಣ ಪಶು ಸಂಗೋಪನೆ ಅಥವಾ ಆರೋಗ್ಯ ಇಲಾಖೆಗೆ ಮಾಹಿತಿ ನೀಡಬೇಕು ಎಂದರು.

## 'ಕಾಂಗ್ರೆಸ್‌ಗೆ ಮತ್ತೆ ಮೋದಿ ಪ್ರಧಾನಿಯಾಗುತ್ತಾರೆ ಎಂಬ ಭಯ'

ಬೆಂಗಳೂರು



ನಾರಿ ಶಕ್ತಿ ವಂದನಾ ಅಧಿನಿಯಮ ಹಾಗೂ ಕ್ಷೇತ್ರ ಮರುವಿಂಗಡಣೆ ವಿಚಾರದಲ್ಲಿ ಕಾಂಗ್ರೆಸ್ ನಾಯಕರು ಮೊಸರಲ್ಲಿ ಕಲ್ಲು ಹುಡುಕುತ್ತಿದ್ದಾರೆ. ಈ ಹಿಂದೆ ಮಸೂದೆಯನ್ನು ಸ್ವಾಗತ ಮಾಡುತ್ತೇವೆಂದು ಹೇಳಿ ಈಗ ಕಿತಾಪತಿ ಮಾಡುತ್ತಿದ್ದಾರೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಹೇಳಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್ ನಾಯಕರೀಗ ಧರ್ಮಾಧಾರಿತ ಮೀಸಲು ನೀಡಬೇಕೆಂದು ಆಗ್ರಹ ಮಾಡುತ್ತಿದ್ದಾರೆ. ಡಾ.ಬಿ.ಆರ್. ಅಂಬೇಡ್ಕರ್ ರಚಿಸಿದ ಸಂವಿಧಾನದಲ್ಲಿ ಧರ್ಮಾಧಾರಿತ ಮೀಸಲಿಗೆ ಅವಕಾಶವಿಲ್ಲ. ದೇಶದ ಎಲ್ಲ ಮಹಿಳೆಯರು ಈ ಮಸೂದೆಗೆ ಬೆಂಬಲ ನೀಡುತ್ತಿದ್ದಾರೆ ಎಂದರು.

ತಮಿಳುನಾಡು ಸಿಎಂ ಸ್ಟಾಲಿನ್‌ಗೆ ಬುದ್ಧಿ ಕಡಿಮೆ ಇದೆ. ಇದೇ ರೀತಿ ಕಾಂಗ್ರೆಸ್ ನಾಯಕರು ಕೂಡ ಅನ್ಯಾಯ ಆಗುತ್ತಿದೆ ಎಂದು ಹೇಳುತ್ತಿದ್ದಾರೆ. ಹಿಂದೆ ಲೋಕಸಭೆ ಕ್ಷೇತ್ರ ಎಷ್ಟಿರಬೇಕೆಂದು ಕಾಂಗ್ರೆಸ್ ನಾಯಕರೇ ತೀರ್ಮಾನ ಮಾಡಿದ್ದರು. ಜನಸಂಖ್ಯೆ ಆಧಾರಿತವಾಗಿಯೇ ಕ್ಷೇತ್ರ ಮರುವಿಂಗಡಣೆ ಮಾಡಲಾಗುತ್ತಿತ್ತು. ರಾಜ್ಯದಲ್ಲಿ 28 ಲೋಕಸಭೆ ಕ್ಷೇತ್ರಗಳು 42 ಆಗುತ್ತಿವೆ. ಇಲ್ಲಿ ಕ್ಷೇತ್ರಗಳು ಕಡಿಮೆಯಾಗುವುದಿಲ್ಲ. ಕೇರಳದಲ್ಲಿ 20 ಕ್ಷೇತ್ರಗಳಿಂದ 30 ಕ್ಕೆ, ತಮಿಳುನಾಡಿನಲ್ಲಿ 39 ರಿಂದ 59 ಕ್ಕೆ ಏರಿಕೆಯಾಗಲಿದೆ. ಆದರೂ ವಿರೋಧ ಮಾಡುತ್ತಿದ್ದಾರೆ. ಇದನ್ನು ಜಾರಿ ಮಾಡಿದರೆ ಮತ್ತೆ ನರೇಂದ್ರ ಮೋದಿ ಪ್ರಧಾನಿಯಾಗಿ ಎಲ್ಲರೂ ಟೆಂಟ್ ಕಟ್ಟಿಕೊಂಡು ಹೋಗಬೇಕಾಗುತ್ತದೆ ಎಂಬ ಭಯ ವಿರೋಧ ಪಕ್ಷಗಳ ನಾಯಕರಲ್ಲಿದೆ. ದಕ್ಷಿಣ ಭಾರತದ ರಾಜ್ಯಗಳಿಗೆ ಯಾವುದೇ ಅನ್ಯಾಯ ಆಗುತ್ತಿಲ್ಲ. ಯಾವುದೇ ರಾಜ್ಯಗಳಲ್ಲಿ ಸ್ಥಾನಗಳು ಕಡಿಮೆಯಾಗುತ್ತಿಲ್ಲ. ವಿರೋಧ ಪಕ್ಷಗಳ ನಾಯಕರಿಗೆ ಅಭಿವೃದ್ಧಿ ಬೇಕಿಲ್ಲ. ಕಾಂಗ್ರೆಸ್‌ನ ವಂಶಾಡಳಿತಕ್ಕೆ ಪೂರಕವಾಗಿ ಎಲ್ಲರೂ ಮಾತಾಡುತ್ತಿದ್ದಾರೆ ಎಂದರು.

ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರ ಮಹಿಳಾ ಮೀಸಲಾತಿ ತರುವ ಮೂಲಕ ಮಹಿಳಾ ಸಮಾನತೆ ತರುತ್ತಿದೆ. ಕಾಂಗ್ರೆಸ್ ನಾಯಕರು ಈ ಹಿಂದೆ ಇಂತಹ ಪ್ರಯತ್ನ ಮಾಡಿದರೂ ಸಫಲವಾಗಿರಲಿಲ್ಲ. ನಾರಿ ಶಕ್ತಿ ವಂದನಾ ಅಧಿನಿಯಮ ಹೊಸ ಇತಿಹಾಸವನ್ನು ಸೃಷ್ಟಿಸಿದ್ದು, ಲೋಕಸಭೆ ಹಾಗೂ ರಾಜ್ಯ ವಿಧಾನಸಭೆಗಳಲ್ಲಿ ಮಹಿಳೆಯರಿಗೆ ಮೀಸಲಾತಿ ಸಿಗಲಿದೆ. ಇದರ ಜೊತೆಗೆ ಜನಸಂಖ್ಯೆಗೆ ಪೂರಕವಾಗಿ ಕ್ಷೇತ್ರ ಮರುವಿಂಗಡಣೆ ಆಗಲಿದೆ. ಇದರಿಂದ ಎಲ್ಲರಿಗೂ ಪ್ರಾತಿನಿಧ್ಯ ಸಿಗಲಿದೆ. ಇದಕ್ಕಾಗಿ ಪ್ರಧಾನಿ ನರೇಂದ್ರ ಮೋದಿ ಹಾಗೂ ಗೃಹ ಸಚಿವ ಅಮಿತ್ ಶಾ ಅವರಿಗೆ

19/04/2026
3S ಭಾರತ ಸಾರಥಿ
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಬ್ರಾಹ್ಮಣ ಜನಾಂಗ ಅತ್ಯಂತ ಹಿಂದುಳಿದ ಜನಾಂಗ: ನಿ.ನ್ಯಾ.ಎನ್.ಕುಮಾರ್

ಬೆಂಗಳೂರು

ಎಲ್ಲ ಜಾತಿ ಸಮುದಾಯದವರು ಬ್ರಾಹ್ಮಣರನ್ನು ಗೌರವದಿಂದ ಕಾಣುತ್ತಾರೆ, ಬ್ರಾಹ್ಮಣ ಜನಾಂಗ ಅತ್ಯಂತ ಹಿಂದುಳಿದ ಜನಾಂಗವಾಗಿದೆ ಎಂದು ನಿವೃತ್ತ ನ್ಯಾಯಮೂರ್ತಿ ಎನ್.ಕುಮಾರ್ ಅವರು ಅಭಿಪ್ರಾಯಪಟ್ಟಿದ್ದಾರೆ.



ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾದಿಂದ ಕಚೇರಿಯ ಗಾಯತ್ರಿ ಭವನದಲ್ಲಿ ಅಧ್ಯಕ್ಷರು, ಚುನಾಯಿತ ಪ್ರತಿನಿಧಿಗಳು ಒಂದು ವರ್ಷ ಪೂರೈಸಿದ ಶುಭ ಸಂದರ್ಭದಲ್ಲಿ ಗಣೇಶ ಹೋಮ ಕಾರ್ಯಕ್ರಮ ಮತ್ತು ವಿಪ್ರ ಅಭಿವೃದ್ಧಿಗೆ ಆಯೋಜಿಸಿದ್ದ ಸಂವಾದ ಕಾರ್ಯಕ್ರಮದಲ್ಲಿ ಒಂದು ವರ್ಷ ಸಾಧನೆ ಮತ್ತು ಯೋಜನೆಗಳು ಕುರಿತು ಮಾತನಾಡಿದ ನಿವೃತ್ತ ನ್ಯಾಯಮೂರ್ತಿಗಳು ಸದಸ್ಯರ ಅಪೇಕ್ಷೆಯಂತೆ ಕಾರ್ಯಾನುಷ್ಠಾನ ನಡೆಯಬೇಕು. ಹೋಮ-ಹವನ, ಸಂಗೀತ, ಸಾಹಿತ್ಯ ಸೇವೆ ಮಹಾಸಭಾದಿಂದ ನಡೆಯುತ್ತಿರುವುದು ವಿಶೇಷ. ಬ್ರಾಹ್ಮಣ ಸಮುದಾಯ ಎದುರಿಸುತ್ತಿರುವ ಸವಾಲುಗಳಿಗೆ ಮಹಾಸಭಾ ಸಹಾಯ ಮಾಡಬೇಕು. ಆರ್ಥಿಕವಾಗಿ ಶ್ರೀಮಂತರಾಗಿರುವವರು ಬಡ ಬ್ರಾಹ್ಮಣರಿಗೆ ನೆರವಾಗಬೇಕು. ಬ್ರಾಹ್ಮಣರಿಗೆ ಮೀಸಲಾತಿ ಕೊಡಬೇಕು. ಯುವ ಜನತೆ, ಮಹಿಳೆಯರು ಮತ್ತು ಮುಂದಿನ ಪೀಳಿಗೆಯ ಏಳಿಗೆಗಾಗಿ ಮಹಾಸಭಾ ಶ್ರಮಿಸಬೇಕು. ಮಠಗಳ ಸಂಖ್ಯೆ ಹೆಚ್ಚಿದ್ದರೂ ಮಠಗಳ ಭಕ್ತರ ನಡುವೆ ಕಿತ್ತಾಟವಿದೆ. ಇದರಿಂದ ಮುಕ್ತವಾಗಬೇಕೆಂದರು.

ಶಿಕ್ಷಣ ಇಂದು ದುಬಾರಿಯಾಗಿರುವ ಕುರಿತು ವಿಷಾದ ವ್ಯಕ್ತಪಡಿಸಿರುವ ಅವರು, ಜೀವನದಲ್ಲಿ ಮುಂದೆ ಬರಬೇಕು ಎಂದರೆ ವಿದ್ಯೆ ಮುಖ್ಯ. ಬ್ರಾಹ್ಮಣರು ವಿದ್ಯೆಯಲ್ಲಿ ಹಿಂದುಳಿಯುತ್ತಿದ್ದಾರೆ. ಅದ್ದರಿಂದ ಬ್ರಾಹ್ಮಣ ಸಮುದಾಯದ ಮಕ್ಕಳ ಶಿಕ್ಷಣಕ್ಕೆ ಮಹಾಸಭಾ ಸಹಕಾರಿಸಬೇಕು. ಕೇಂದ್ರ ಮತ್ತು ಸರ್ಕಾರಿ ಹುದ್ದೆಗಳ ಪರೀಕ್ಷೆ ಬರೆಯಲು ಬ್ರಾಹ್ಮಣರು ಹಿಂದೇಟು ಹಾಕುತ್ತಾರೆ, ಕಾರಣ ನಮಗೆ ಸಿಗುವುದಿಲ್ಲ ಎಂಬ ನಿರಾಸೆಯಿಂದಾಗಿ. ಬ್ರಾಹ್ಮಣ ವಿದ್ಯಾರ್ಥಿಗಳು ಆತ್ಮಸ್ಥೈರ್ಯದಿಂದ ಪರೀಕ್ಷೆ ಬರೆಯಲು ಮುಂದಾಗಬೇಕು. ಸಮುದಾಯದ ಅರ್ಚಕರು, ಅಡುಗೆ ಕೆಲಸ ಮಾಡುವವರಿಗೆ ಬೇಡಿಕೆ ಇದ್ದರೂ, ಬ್ರಾಹ್ಮಣ ವರನಿಗೆ ವಧು ಸಿಗದಿರುವುದು ಶೋಚನಿಯ ಎಂದರು.

ಬ್ರಾಹ್ಮಣ ಜನಾಂಗ ಅತ್ಯಂತ ಹಿಂದುಳಿದ ಜನಾಂಗವಾಗಿದೆ. ಬ್ರಾಹ್ಮಣರು ಪ್ರಯತ್ನಿಸಿದರೆ ಮಾತ್ರ ಆಗ ಜೀವನದಲ್ಲಿ ಯಶ್ವಸಿಯಾಗಲು ಸಾಧ್ಯ. ಯೋಚನೆ ಮಾಡುವ ದಿಕ್ಕು ಬದಲಾಯಿಸಿಕೊಳ್ಳಬೇಕು. ಬ್ರಾಹ್ಮಣರ ಶಕ್ತಿಯ ಮೇಲೆ ಗೌರವವಿರಲಿ. ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾದಲ್ಲಿ ಯುವಕರು, ಮಹಿಳೆಯರಿಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದ ಅವರು, ಗ್ರಾಮೀಣ ಪ್ರದೇಶದಲ್ಲಿ ಬ್ರಾಹ್ಮಣರ ಜೀವನ ಸಂಕಷ್ಟದಲ್ಲಿದೆ. ಅಂತಹರವರನ್ನು ಗುರುತಿಸಿ ಸಹಾಯ ಹಸ್ತ ನೀಡಬೇಕು. ಅನ್ಯ ಜಾತಿಯವರು ಬ್ರಾಹ್ಮಣರನ್ನ ಗೌರವದಿಂದ ಕಾಣುತ್ತಿದ್ದು, ಬ್ರಾಹ್ಮಣರು ವಿಭಿನ್ನವಾಗಿ ಯೋಚಿಸಿ ಸಮಾಜವನ್ನು ಎತ್ತಿ ಹಿಡಿಯುವ ಕೆಲಸ ಮಾಡಬೇಕು ಎಂದು ಹೇಳಿದರು.

ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾ ಅಧ್ಯಕ್ಷರಾದ ಎಸ್.ರಘುನಾಥ್ ರವರು, ಹಿರಿಯ ಉಪಾಧ್ಯಕ್ಷರಾದ ಲಕ್ಷ್ಮೀಕಾಂತ್, ಪ್ರಧಾನ ಕಾರ್ಯದರ್ಶಿ ಸತ್ಯಪ್ರಕಾಶ್ ಸಮುದಾಯದ ಮುಖಂಡರುಗಳಾದ ಯು.ವಿ. ಶ್ರೀನಿವಾಸಮೂರ್ತಿ, ಕೆ.ಪಿ.ಪುತ್ತೂರಾಯ ರವರು ಕಾರ್ಯಕ್ರಮಕ್ಕೆ ಚಾಲನೆ ನೀಡಿದರ

ಜಿಲ್ಲಾ ಪ್ರತಿನಿಧಿಗಳಾದ ಎಸ್. ಎಸ್. ಪ್ರಸಾದ್, ರಾಜಶೇಖರ್, ಅಂಬಿಕಾ ರಾಮಚಂದ್ರ, ಸಮಾಜದ ಮುಖಂಡರುಗಳಾದ ಸುದರ್ಶನಂ, ಎ.ಹೆಚ್. ಅನಿಲ್ ಕುಮಾರ್, ರಾಮಚಂದ್ರರವರು ಭಾಗವಹಿಸಿದ್ದರು.

# ಮಹಿಳಾ ಮೀಸಲು ಮಸೂದೆ ಸ್ವಾಗತಾರ್ಹ

ಬಳ್ಳಾರಿ



ಕೇಂದ್ರ ಸರ್ಕಾರದ ಮಹಿಳಾ ಮೀಸಲು ಮಸೂದೆ ಸ್ವಾಗತಾರ್ಹ. ಆದರೆ ಲೋಕಸಭಾ ಕ್ಷೇತ್ರಗಳ ಪುನರ್ವಿಂಗಡಣೆ ಮಾಡುವುದರಿಂದ ದಕ್ಷಿಣ ಭಾರತದ ರಾಜ್ಯಗಳಿಗೆ ಘೋರ ಅನ್ಯಾಯ ಆಗಲಿದೆ ಎಂದು ವೀರಶೈವ ಲಿಂಗಾಯತ ಯುವ ನಾಯಕಿ ನಾರಾ ವೈಜಯಂತಿ ರೆಡ್ಡಿ ಅಭಿಪ್ರಾಯ ಪಟ್ಟಿದ್ದಾರೆ.

ಶುಕ್ರವಾರ ಈ ಕುರಿತು ಅವರು ಪತ್ರಿಕಾ ಹೇಳಿಕೆ ಬಿಡುಗಡೆ ಮಾಡಿದ್ದು, ರಾಜಕೀಯ ಪ್ರಾತಿನಿಧ್ಯಕ್ಕೆ ಸಂಬಂಧಿಸಿ ಮಹಿಳಾ ಮೀಸಲಾತಿ ವಿಷಯ ಹೊಸದೇನಲ್ಲ, ಒಂದೂವರೆ ದಶಕದ ಹಿಂದೆಯೇ ಸೋನಿಯಾ ಗಾಂಧಿಯವರ ಅವಿರತ ಶ್ರಮದ ಫಲವಾಗಿ ಮಹಿಳಾ ಮೀಸಲು ಮಸೂದೆ ಚರ್ಚೆಗೆ ಬಂದಿತ್ತು. 2010ರಲ್ಲಿಯೇ ಆಗಿನ ಯುಪಿಎ ಅಧ್ಯಕ್ಷರಾಗಿದ್ದ ಸೋನಿಯಾ ಗಾಂಧಿಯವರು ಮಹಿಳೆಯರಿಗೆ ಶೇ.33ರಷ್ಟು ಮಸೂದೆಯನ್ನು ರಾಜ್ಯಸಭೆಯಲ್ಲಿ ಮಂಡಿಸಿದ್ದರು, ಆದರೆ ಲೋಕಸಭೆಯಲ್ಲಿ ಒಮ್ಮತದ ಕೊರತೆ ಹಾಗೂ ವಿಪಕ್ಷಗಳ ವಿರೋಧದಿಂದಾಗಿ ಅಂತಿಮವಾಗಿ ರದ್ದಾಯಿತು ಎಂದಿದ್ದಾರೆ.

ಸೋನಿಯಾಗಾಂಧಿಯವರು ಒಂದೂವರೆ ದಶಕದ ಹಿಂದೆಯೇ ದೇಶದ ಎಲ್ಲ ಲೋಕಸಭೆ ಹಾಗೂ ವಿಧಾನಸಭೆಗಳಲ್ಲಿ ಶೇ.33ರಷ್ಟು ಮಹಿಳೆಯರಿಗೆ ಮೀಸಲು ತರುವ ಪ್ರಯತ್ನ ಮಾಡಿದ್ದರು, ಆದರೆ ಅವರಿಗೆ ದೇಶದ ಯಾವುದೇ ಭಾಗದ ಅಥವಾ ರಾಜ್ಯಗಳ ಪ್ರಾತಿನಿಧ್ಯ ಕಸಿಯುವ ಉದ್ದೇಶ ಇರಲಿಲ್ಲ, ಆದರೆ ಈಗ ಕ್ಷೇತ್ರ ಪುನರ್ವಿಂಗಡಣೆ ಮಾಡಲು ಹೊರಟಿರುವ ಕೇಂದ್ರ ಸರ್ಕಾರಕ್ಕೆ ದಕ್ಷಿಣದ ರಾಜ್ಯಗಳಿಗೆ ಅನ್ಯಾಯ ಮಾಡುವ ಉದ್ದೇಶ ಇದೆ ಎಂದಿದ್ದಾರೆ.

ಹಾಲಿ ಕ್ಷೇತ್ರ ಪುನರ್ವಿಂಗಡಣೆಯಿಂದ ಉತ್ತರ ಭಾರತದಲ್ಲಿ ಲೋಕಸಭಾ ಕ್ಷೇತ್ರಗಳ ಸಂಖ್ಯೆ ವಿಪರೀತ ಮತ್ತು ಅಸಹಜ ರೀತಿಯಲ್ಲಿ ಹೆಚ್ಚಲಿವೆ. ಕ್ಷೇತ್ರ ಪುನರ್ವಿಂಗಡಣೆಯು ಜನಸಂಖ್ಯೆ ನಿಯಂತ್ರಣದಲ್ಲಿ ವಿಫಲ ಆಗಿರುವ ರಾಜ್ಯಗಳಿಗೆ ವರದಾನವಾದರೆ, ನಮ್ಮಂತಹ ಜನಸಂಖ್ಯೆ ನಿಯಂತ್ರಿಸಿರುವ ರಾಜ್ಯಗಳಿಗೆ ಮಾರಕ ಆಗಲಿದೆ ಎಂದಿದ್ದಾರೆ.

ಉತ್ತರ ಭಾರತದಲ್ಲಿಯೇ ಅತಿ ಹೆಚ್ಚು ಲೋಕಸಭಾ ಕ್ಷೇತ್ರಗಳಾದರೆ ಇದು ನಿರ್ದಿಷ್ಟ ಪಕ್ಷಕ್ಕೆ ಲಾಭ ತರುವ ಹುನ್ನಾರ ಆಗುವುದು ಸ್ಪಷ್ಟ, ಹೀಗಾಗಿ ಈ ಅವೈಜ್ಞಾನಿಕ ಕ್ಷೇತ್ರ ಪುನರ್ವಿಂಗಡಣೆಯನ್ನು ಕೈ ಬಿಡಬೇಕು, ವಿಪಕ್ಷಗಳ ಸಲಹೆ ಪಡೆದು, ತಜ್ಞರ ಅಭಿಪ್ರಾಯ ಪಡೆದು ಕ್ಷೇತ್ರ ಪುನರ್ವಿಂಗಡಣೆ ದೇಶದ ಎಲ್ಲ ರಾಜ್ಯಗಳಿಗೆ ಸಮನಾದ ಮತ್ತು ನ್ಯಾಯಯುತ ಪ್ರಾತಿನಿಧ್ಯ ನೀಡುವಂತಾಗಬೇಕೆಂದು ಅವರು ಹೇಳಿದ್ದಾರೆ.

ಮಹಿಳಾ ಮೀಸಲಾತಿ ದೇಶದ ಎಲ್ಲ ಮಹಿಳೆಯರಿಗೆ ಸಿಗಬೇಕು ನಿಜ, ಲೋಕಸಭಾ ಕ್ಷೇತ್ರಗಳ ಪುನರ್ವಿಂಗಡಣೆಯೂ ಆಗಬೇಕು, ಆದರೆ ದೇಶದ ಅಭಿವೃದ್ಧಿಯಲ್ಲಿ ಗುರುತರ ಕೊಡುಗೆ ನೀಡಿರುವ ದಕ್ಷಿಣದ ರಾಜ್ಯಗಳಿಗೆ ಅನ್ಯಾಯ ಮಾಡಿ, ಅಧಿಕಾರ ಹಿಡಿಯುವ ಏಕೈಕ ಉದ್ದೇಶಕ್ಕೆ ಸ್ವಾರ್ಥಪರ ಅಸ್ತ್ರವಾಗಿ ಬಳಕೆಯಾಗಬಾರದು ಎಂದು ವೀರಶೈವ ಲಿಂಗಾಯತ ಯುವ ನಾಯಕಿ ನಾರಾ ವೈಜಯಂತಿ ರೆಡ್ಡಿ ಅಭಿಪ್ರಾಯಪಟ್ಟಿದ್ದಾರೆ.

# 21ರಿಂದ ಅಂಗನವಾಡಿ ಕಾಯಕರ್ತೆಯರ ಪ್ರತಿಭಟನೆ



ಬಳ್ಳಾರಿ

ಕಳೆದ ಹಲವು ವರ್ಷಗಳಿಂದ ಅಂಗನವಾಡಿ ಕಾರ್ಯಕರ್ತೆಯರು ಮತ್ತು ಸಹಾಯಕಿಯರು ವಿವಿಧ ಬೇಡಿಕೆ ಈಡೇರಿಕೆಗಾಗಿ ನಡೆಸುತ್ತಿರುವ ಹೋರಾಟ ಮಹತ್ವದ ಘಟ್ಟ ತಲುಪಿದ್ದು ಇದೀಗ ಇದೇ ಏಪ್ರಿಲ್ 21 ರಿಂದ ನವದೆಹಲಿಯಲ್ಲಿ 3 ದಿನಗಳ ಕಾಲ ಪ್ರತಿಭಟನೆ ಮುಂದುವರಿಸುತ್ತಿರುವುದಾಗಿ ಎಐಟಿಯುಸಿ ಅಂಗಸಂಸ್ಥೆಯಾದ ಕರ್ನಾಟಕ ರಾಜ್ಯ ಅಂಗನವಾಡಿ ಕಾರ್ಯಕರ್ತೆಯರು ಮತ್ತು ಸಹಾಯಕಿಯರ ಫೆಡರೇಷನ್‌ನ ಜಿಲ್ಲಾಧ್ಯಕ್ಷೆ ಎಸ್.ಅರ್ಕಾಣಿ ತಿಳಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಅನಿವಾರ್ಯವಾಗಿ ಏಪ್ರಿಲ್ 21ರಿಂದ ಮೂರು ದಿನ ಜಂತರ್ ಮಂತರ್‌ನಲ್ಲಿ ಪ್ರತಿಭಟನೆ ನಡೆಸುವುದಾಗಿ ಎಐಟಿಯುಸಿ ಅಂಗಸಂಸ್ಥೆಯಾದ ಕರ್ನಾಟಕ ರಾಜ್ಯ ಅಂಗನವಾಡಿ ಕಾರ್ಯಕರ್ತೆಯರು ಮತ್ತು ಸಹಾಯಕಿಯರ ಫೆಡರೇಷನ್ ವತಿಯಿಂದ ತಿಳಿಸಬಯಸುತ್ತೇವೆ ಎಂದಿದ್ದಾರೆ. ಗೌರವ ಸಂಭಾವನೆಯ ಬದಲಿಗೆ ಕನಿಷ್ಠ ವೇತನ ಜಾರಿಗೊಳಿಸಬೇಕು. ಆ ಮೂಲಕ ಸೇವೆಯನ್ನು ಕಾಯಂಗೊಳಿಸಿ ನಿವೃತ್ತಿ ವೇತನ, ಗ್ರಾಚುಟಿ ಸೇರಿ ಇತರ ಸರ್ಕಾರಿ ನೌಕರರಿಗೆ ದೊರೆಯುವ ಎಲ್ಲ ಸೌಲಭ್ಯಗಳನ್ನು ನೀಡಬೇಕೆಂದು ಹತ್ತಾರು ವರ್ಷಗಳಿಂದ ಹೋರಾಟ ಮಾಡುತ್ತಿದ್ದೇವೆ. ಇದುವರೆಗೂ ಸರ್ಕಾರ ಕಿವಿಗೊಡುತ್ತಿಲ್ಲ. ಅಂಗನವಾಡಿಗಳು ರಾಜ್ಯ ಮತ್ತು ಕೇಂದ್ರ ಸರ್ಕಾರ ಎರಡರ ಅನುದಾನದ ಕಾರ್ಯಕ್ರಮಗಳಿಗೆ ಒಳಪಡುವುದರಿಂದ ರಾಜ್ಯ ಸರ್ಕಾರದ ವಿರುದ್ಧ ಸಾಕಷ್ಟು ಹೋರಾಟಗಳನ್ನು ಮಾಡಿದ್ದೇವೆ. ಇದರಲ್ಲಿ ಕೇಂದ್ರದ ಜವಾಬ್ದಾರಿಯೂ ಇರುವುದರಿಂದ ದೆಹಲಿಯಲ್ಲಿ ಪ್ರತಿಭಟನೆ ಹಮ್ಮಿಕೊಂಡಿದ್ದೇವೆ ಎಂದು ತಿಳಿಸಿದ್ದಾರೆ.

ಉತ್ತರ ಭಾರತದಲ್ಲಿ ಅಂಗನವಾಡಿ ಕೇಂದ್ರಗಳನ್ನು ದತ್ತು ಪಡೆಯುವಂತೆ ವಿವಿಗಳ ಧನಸಹಾಯ ಆಯೋಗ (ಯುಜಿಸಿ) ಆದೇಶ ಮಾಡಿರುವುದು ಅಂಗನವಾಡಿಗಳ ಮೂಲ ಆಶಯಕ್ಕೆ ಧಕ್ಕೆಯಾಗಿದೆ. ಅಂಗನವಾಡಿಗಳು ಶಿಕ್ಷಣ ಕೇಂದ್ರಗಳಲ್ಲ. ಆಹಾರ, ಆರೋಗ್ಯ ಮತ್ತು ಆರೈಕೆ ಕೇಂದ್ರಗಳು. ಆದ್ದರಿಂದ ಯುಜಿಸಿ ಆದೇಶ ಹಿಂಪಡೆಯಬೇಕು ಎಂದಿರುವ ಅವರು, ಅಂಗನವಾಡಿ ನೌಕರರನ್ನು ಸಿ, ಡಿ ದರ್ಜೆಯ ನೌಕರರನ್ನಾಗಿ ಖಾಯಂಗೊಳಿಸುವಂತೆ ಆಗ್ರಹಿಸಿದ್ದಾರೆ.

ಕೇಂದ್ರ ಸರಕಾರ ಅಂಗನ ವಾಡಿ ನೌಕರರ ಸೇವೆಯನ್ನು ಕೇವಲ ಗೌರವ ಸೇವೆಯಾಗಿ ಪರಿಗಣಿಸದೇ ಅವರನ್ನು ಖಾಯಂ ಉದ್ಯೋಗಿಯಾಗಿ ಮಾನ್ಯತೆ ನೀಡಬೇಕು. ಸುಪ್ರೀಂಕೋರ್ಟಿನ ಆದೇಶದಂತೆ ಅಂಗನವಾಡಿ ಉದ್ಯೋಗಿಗಳು ಪೂರ್ಣಕಾಲಿಕೆ ಸ್ಥಿರ ಉದ್ಯೋಗಿಗಳಾಗಿದ್ದು, ಅವರು ಗ್ರಾಚ್ಯುಟಿ ಪಡೆಯುವ ಹಕ್ಕನ್ನು ಹೊಂದಿದ್ದಾರೆ. ಆದುದರಿಂದ ಕೇಂದ್ರ ಸರಕಾರ ಖಾಯಂ ಉದ್ಯೋಗಿಯಾಗಿ ಮಾನ್ಯತೆ ನೀಡುವ ಮೂಲಕ ಅವರನ್ನು ಸಿ ಮತ್ತು ಡಿ ದರ್ಜೆಯ ನೌಕರರನ್ನಾಗಿ ಖಾಯಂ ಗೊಳಿಸಬೇಕು. ಅಂಗನವಾಡಿ ನೌಕರರಿಗೆ ವೇತನ ನೀಡದೆ

ಕೇಂದ್ರ ಮತ್ತು ರಾಜ್ಯ ಸರಕಾರ ಸಹಭಾಗಿ ತ್ವದ ಅನುಪಾತದಲ್ಲಿ ಕೇವಲ ಗೌರವಧನ ನೀಡಿ ದುಡಿಸಿಕೊಳ್ಳಲಾಗುತ್ತಿದೆ. ಇವರಿಗೆ ನೀಡುತ್ತಿರುವ ಗೌರವ ಸಂಭಾವನೆಯನ್ನು ಕನಿಷ್ಠವೇತನ ಕಾಯ್ದೆಯ ವ್ಯಾಪ್ತಿಗೊಳಪಡಿಸಿ ಕನಿಷ್ಠ ವೇತನ ನೀಡಲು ಕ್ರಮವಹಿಸಬೇಕು ಎಂದು ಅವರು ತಿಳಿಸಿದ್ದಾರೆ. ಕೇಂದ್ರ ಸರಕಾರ ಅಂಗನ ವಾಡಿ ನೌಕರರ ಸೇವೆಯನ್ನು ಕೇವಲ ಗೌರವ ಸೇವೆಯಾಗಿ ಪರಿಗಣಿಸದೇ ಅವರನ್ನು ಖಾಯಂ ಉದ್ಯೋಗಿಯಾಗಿ ಮಾನ್ಯತೆ ನೀಡಬೇಕು. ಸುಪ್ರೀಂಕೋರ್ಟಿನ ಆದೇಶದಂತೆ ಅಂಗನವಾಡಿ ಉದ್ಯೋಗಿಗಳು ಪೂರ್ಣಕಾಲಿಕೆ ಸ್ಥಿರ ಉದ್ಯೋಗಿಗಳಾಗಿದ್ದು, ಅವರು ಗ್ರಾಚ್ಯುಟಿ ಪಡೆಯುವ ಹಕ್ಕನ್ನು ಹೊಂದಿದ್ದಾರೆ. ಆದುದರಿಂದ ಕೇಂದ್ರ ಸರಕಾರ ಖಾಯಂ ಉದ್ಯೋಗಿಯಾಗಿ ಮಾನ್ಯತೆ ನೀಡುವ ಮೂಲಕ ಅವರನ್ನು ಸಿ ಮತ್ತು ಡಿ ದರ್ಜೆಯ ನೌಕರರನ್ನಾಗಿ ಖಾಯಂ ಗೊಳಿಸಬೇಕು. ಅಂಗನವಾಡಿ ನೌಕರರಿಗೆ ವೇತನ ನೀಡದೆ ಕೇಂದ್ರ ಸರಕಾರ ಅಂಗನ ವಾಡಿ ನೌಕರರ ಸೇವೆಯನ್ನು ಕೇವಲ ಗೌರವ ಸೇವೆಯಾಗಿ ಪರಿಗಣಿಸದೇ ಅವರನ್ನು ಖಾಯಂ ಉದ್ಯೋಗಿಯಾಗಿ ಮಾನ್ಯತೆ ನೀಡಬೇಕು. ಸುಪ್ರೀಂಕೋರ್ಟಿನ ಆದೇಶದಂತೆ ಅಂಗನವಾಡಿ ಉದ್ಯೋಗಿಗಳು ಪೂರ್ಣಕಾಲಿಕೆ ಸ್ಥಿರ ಉದ್ಯೋಗಿಗಳಾಗಿದ್ದು, ಅವರು ಗ್ರಾಚ್ಯುಟಿ ಪಡೆಯುವ ಹಕ್ಕನ್ನು ಹೊಂದಿದ್ದಾರೆ. ಆದುದರಿಂದ ಕೇಂದ್ರ ಸರಕಾರ ಖಾಯಂ ಉದ್ಯೋಗಿಯಾಗಿ ಮಾನ್ಯತೆ ನೀಡುವ ಮೂಲಕ ಅವರನ್ನು ಸಿ ಮತ್ತು ಡಿ ದರ್ಜೆಯ ನೌಕರರನ್ನಾಗಿ ಖಾಯಂ ಗೊಳಿಸಬೇಕು. ಅಂಗನವಾಡಿ ನೌಕರರಿಗೆ ವೇತನ ನೀಡದೆ

ಕೇಂದ್ರ ಮತ್ತು ರಾಜ್ಯ ಸರಕಾರ ಸಹಭಾಗಿ ತ್ವದ ಅನುಪಾತದಲ್ಲಿ ಕೇವಲ ಗೌರವಧನ ನೀಡಿ ದುಡಿಸಿಕೊಳ್ಳಲಾಗುತ್ತಿದೆ. ಇವರಿಗೆ ನೀಡುತ್ತಿರುವ ಗೌರವ ಸಂಭಾವನೆಯನ್ನು ಕನಿಷ್ಠವೇತನ ಕಾಯ್ದೆಯ ವ್ಯಾಪ್ತಿಗೊಳಪಡಿಸಿ ಕನಿಷ್ಠ ವೇತನ ನೀಡಲು ಕ್ರಮವಹಿಸಬೇಕು ಎಂದು ಅವರು ತಿಳಿಸಿದ್ದಾರೆ.

ಕೇಂದ್ರ ಮತ್ತು ರಾಜ್ಯ ಸರಕಾರ ಸಹಭಾಗಿ ತ್ವದ ಅನುಪಾತದಲ್ಲಿ ಕೇವಲ ಗೌರವಧನ ನೀಡಿ ದುಡಿಸಿಕೊಳ್ಳಲಾಗುತ್ತಿದೆ. ಇವರಿಗೆ ನೀಡುತ್ತಿರುವ ಗೌರವ ಸಂಭಾವನೆಯನ್ನು ಕನಿಷ್ಠವೇತನ ಕಾಯ್ದೆಯ ವ್ಯಾಪ್ತಿಗೊಳಪಡಿಸಿ ಕನಿಷ್ಠ ವೇತನ ನೀಡಲು ಕ್ರಮವಹಿಸಬೇಕು ಎಂದು ಅವರು ತಿಳಿಸಿದ್ದಾರೆ.

ಸುಪ್ರೀಂಕೋರ್ಟಿನ ಆದೇಶದಂತೆ ಅಂಗನವಾಡಿ ಸೇವೆಗೆ ಸೇರಿ ನಿವೃತ್ತರಾಗಿ ರುವವರೆಲ್ಲರಿಗೂ ಗ್ರಾಚ್ಯುಟಿ ಸೌಲಭ್ಯ ಒದಗಿ ಸಲು ಕ್ರಮ ಕೈಗೊಳ್ಳಬೇಕು. ನಿವೃತ್ತಿಯ ನಂತರ ಮಾಸಿಕ ನಿವೃತ್ತಿ ವೇತನ ನೀಡಲು ಪಿಂಚಣಿ ಯೋಜನೆಯನ್ನು ಜಾರಿಗೊಳಿಸಬೇಕು. ಇದರ ಪ್ರಯೋಜನ ಪಡೆಯಲು ಅಗತ್ಯವಾದ ಕ್ರಮಗಳನ್ನು ಜಾರಿಗೊಳಿಸಬೇಕು. ಪರಿಣಾಮಕಾರಿಯಾಗಿ ಜಾರಿಗೊಳಿಸಲು ಕ್ರಮವಹಿಸಬೇಕು ಎಂದು ಎಸ್.ಅರ್ಕಾಣಿ ಅವರು ತಿಳಿಸಿದ್ದಾರೆ.

# ಅಕ್ಷಯ ವಿಪ್ರ ಮಹಾಸಭಾದ 5ನೇ ಕಾರ್ಯಕಾರಿ ಸಭೆ



ಬೆಂಗಳೂರು

ಇಲ್ಲಿನ ರಾಗಿಗುಡ್ಡದಲ್ಲಿನ ಮಾರುತಿ ಕುಟೀರದಲ್ಲಿ ಅಕ್ಷಯ ವಿಪ್ರ ಮಹಾಸಭಾದ 5ನೇ ಕಾರ್ಯಕಾರಿ ಸಭೆ ನಡೆಯಿತು.

ತನ್ನಿಮಿತ್ತ ಶ್ರೀರಾಮನವಮಿಯನ್ನು ಯಶಸ್ವಿಯಾಗಿ ನಡೆಸಿದ ಮಹಾಸಭಾದ ಪದಾಧಿಕಾರಿಗಳು ಬ್ರಾಹ್ಮಣ ವಧು-ವರ ಸಮಾವೇಶದ ಯಶಸ್ಸಿಗೆ ಕಾರಣಕರ್ತರಾದ ಸದಸ್ಯ ಬಂಧುಗಳಿಗೆ ಕಿರುಕಾಣಿಕೆಯನ್ನು ನೀಡಿ ಸನ್ಮಾನಿಸಿದರು.

ಶ್ರೀರಾಮನವಮಿ ಆಚರಣೆ ನಿಮಿತ್ತ ಎಲ್ಲರಿಗೂ ಪಾನಕ ಮತ್ತು ಕೋಸಂಬರಿಯನ್ನು ವಿತರಿಸಲಾಯಿತು. ಜೊತೆಗೆ ವಿಶೇಷವಾಗಿ ಉತ್ತರ ಭಾರತೀಯ ಶೈಲಿಯ ಭೋಜನ ಕೂಟವನ್ನು ಏರ್ಪಡಿಸಲಾಗಿತ್ತು.

# ಪುರಸಭೆ ವಿರುದ್ಧ ಪ್ರತಿಭಟನೆ: ಖಾತೆ ಬದಲಾವಣೆ ವಿಳಂಬಕ್ಕೆ ಆಕ್ರೋಶ

ವಿಜಯಪುರ

ವಿಜಯಪುರ ಪುರಸಭೆಯಲ್ಲಿ, ಖಾತೆ ಬದಲಾವಣೆಗಾಗಿ ಸಾರ್ವಜನಿಕರು ಕೊಡುವಂತಹ ಅರ್ಜಿಗಳನ್ನು, ವಿನಾಕಾರಣ, ಬಾಕಿ ಉಳಿಸಿಕೊಂಡು, ಸುತ್ತಾಡಿಸುವುದರ ಜೊತೆಗೆ ಒಂದೇ ವರ್ಷಕ್ಕೆ ಎರಡು ಬಾರಿ ತೆರಿಗೆ ಕಟ್ಟಿಸಿಕೊಳ್ಳುತ್ತಿದ್ದಾರೆ ಎಂದು ಆರೋಪಿಸಿ, ಪುರಸಭೆ ಸದಸ್ಯ ಎಂ.ಸತೀಶ್ ಕುಮಾರ್ ಅವರು, ಪುರಸಭೆಯ ಮುಂಭಾಗದಲ್ಲಿ, ಅರ್ಜಿದಾರರೊಟ್ಟಿಗೆ ಪ್ರತಿಭಟನೆ ನಡೆಸಿದರು.



ಈ ವೇಳೆ ಮಾತನಾಡಿದ ಅವರು, ಲಲಿತಮ್ಮ ಎಂಬ ವೃದ್ಧೆ, ಖಾತೆ ಬದಲಾವಣೆಗಾಗಿ ಕಳೆದ ವರ್ಷ 8 ನೇ ತಿಂಗಳಿನಲ್ಲಿ, ಅರ್ಜಿ ಸಲ್ಲಿಸಿದ್ದಾರೆ. ಇದುವರೆಗೂ ಖಾತೆ ಮಾಡದೇ ವಿನಾಕಾರಣ ಅಲೆದಾಡಿಸುತ್ತಿದ್ದಾರೆ. ವರ್ಷಕ್ಕೊಮ್ಮೆ ಕ್ರಮವಾಗಿ ತೆರಿಗೆ ಕಟ್ಟುವಂತಹ ನಾಗರಿಕರನ್ನು, ಅವರ ಕೆಲಸ ನಿಮಿತ್ತವಾಗಿ ಬಂದಾಗ, ಕನಿಷ್ಟ ಅವರಿಗೆ ಕುಳಿತುಕೊಳ್ಳುವುದಕ್ಕೆ ಕುರ್ಚಿಗಳನ್ನೂ, ನೀಡದೇ, ಅಗೌರವ ತೋರಿಸಿದ್ದಾರೆ. ನಾಗರಿಕರಿಗೂ ಕನಿಷ್ಟ ಗೌರವ ಸಿಗುತ್ತಿಲ್ಲ.

ನಾಗರಿಕರು ಖಾತೆಗಳಿಗಾಗಿ ಅರ್ಜಿಗಳನ್ನು ಸಲ್ಲಿಸಿದಾಗ, ಯಾವುದಾದರೂ ದಾಖಲೆಗಳ ಕೊರತೆಯಿದ್ದರೆ, ಅವರಿಗೆ ತಿಳಿಸಿ, ಖಾತೆ ಮಾಡಲು ತೊಡಕುಗಳಿದ್ದರೆ ಅವರಿಗೆ ಹಿಂಬರಹ ಕೊಡಿ ಎಂದು ಸಾಮಾನ್ಯ ಸಭೆಯಲ್ಲಿ ಅಧಿಕಾರಿಗಳ ಗಮನಕ್ಕೆ ತಂದಿದ್ದರೂ ಸಹಾ, ಇನ್ನೆರಡು ದಿನಗಳಲ್ಲಿ ಖಾತೆ ಮಾಡಿಕೊಡುವುದಾಗಿ ಆಶ್ವಾಸನೆ ನೀಡಲಾಗಿತ್ತು. ತಿಂಗಳುಗಳೇ ಕಳೆದರೂ ಇದುವರೆಗೂ ಖಾತೆ ಮಾಡಿಕೊಟ್ಟಿಲ್ಲ. ಬಹಳಷ್ಟು ಅರ್ಜಿದಾರರ ಆರೋಪವೂ ಇದೆ ಆಗಿದೆ.

ಅಧಿಕಾರಿಗಳು ನಿಗದಿತ ಸಮಯದಲ್ಲಿ ಖಾತೆಗಳು ಮಾಡಿಕೊಡದೇ ಹೋದರೆ, ಅವರು ಇಲ್ಲಿ ಕರ್ತವ್ಯ ನಿರ್ವಹಣೆ ಮಾಡುವುದು ಬೇಡ. ಸಾರ್ವಜನಿಕರೇನು ಇವರಿಗೆ ಗುಲಾಮರಾ? ಇವರು ಕರೆದಾಗಲೆಲ್ಲಾ ಬರೋದಕ್ಕೆ? ಸಾರ್ವಜನಿಕರೊಂದಿಗೆ ಸೌಜನ್ಯದಿಂದ ವರ್ತನೆ ಮಾಡಬೇಕು ಎಂದು ಸಲಹೆ ನೀಡಿದರು.

> ಪ್ಲಾಸ್ಟಿಕ್ ತಯಾರಿಕೆಯನ್ನು ನಿಲ್ಲಿಸುವುದರ ಬದಲಿಗೆ, ಸಣ್ಣ, ಪುಟ್ಟ ವ್ಯಾಪಾರಿಗಳು, ಪಟ್ಟಣದಲ್ಲಿ ವ್ಯಾಪಾರ ಮಾಡಿಕೊಳ್ಳುತ್ತಿದ್ದರೆ, ಅಂತಹವರ ಬಳಿಗೆ ಹೋಗಿ, ಪ್ಲಾಸ್ಟಿಕ್ ರೈಡ್ ಮಾಡಿ, ಅವರಿಗೆ ದಂಡ ವಿಧಿಸುವುದು ಸರಿಯಲ್ಲ. ಮೊದಲು ಉತ್ಪಾದನೆ ನಿಲ್ಲಿಸಿ, ಬಡಪಾಯಿಗಳ ಹೊಟ್ಟೆಯ ಮೇಲೆ ಹೊಡೆಯುವಂತಹ ಕೆಲಸ ಮಾಡಬೇಡಿ.ಪ್ಲಾಸ್ಟಿಕ್ ಬಳಕೆ ಮಾಡದಂತೆ ಜನರಿಗೆ ಅರಿವು ಮೂಡಿಸಿ, ಅದನ್ನು ಬಿಟ್ಟು, ಸಣ್ಣ, ಪುಟ್ಟ ವ್ಯಾಪಾರಿಗಳಿಗೆ ದಂಡ ವಿಧಿಸಿದರೆ ಸಹಿಸುವುದಿಲ್ಲ ಎಂದು ಪುರಸಭೆ ಸದಸ್ಯ ಎಂ.ಸತೀಶ್ ಕುಮಾರ್ ಎಚ್ಚರಿಕೆ ನೀಡಿದರು.

ಪುರಸಭೆ ಸದಸ್ಯ ಸಿ.ಎಂ.ರಾಮು ಮಾತನಾಡಿ, ಅಧಿಕಾರಿಗಳಿಗೆ ಸಾರ್ವಜನಿಕರ ಬಗ್ಗೆ ಕಿಂಚಿತ್ತೂ ಕಾಳಜಿಯೂ ಇಲ್ಲ. ಬದ್ಧತೆಯು ಇಲ್ಲ. ಬಹಳಷ್ಟು ಮಂದಿ ನಾಗರಿಕರ ಬಳಿಯಲ್ಲಿ, ಅರ್ಜಿಗಳನ್ನೂ ಪಡೆಯುವುದಿಲ್ಲ. ಕೆಲವರು ತೆರಿಗೆ ಕಟ್ಟಿದ್ದರೂ, ಅದನ್ನು ಅಪ್ ಗ್ರೇಡ್ ಮಾಡುವುದಿಲ್ಲ. ಪುನಃ ನಾಗರಿಕರು ಬಂದು ತೆರಿಗೆ ಕಟ್ಟಿರುವುದು ಅಪ್ ಗ್ರೇಡ್ ಮಾಡಿಕೊಡಿ ಎಂದರೆ, ಹಿಂದೆ ಕಟ್ಟಿರುವ ರಸೀದಿ ಕೊಡಿ ಎನ್ನುತ್ತಾರೆ. ರಸೀದಿ ಇಲ್ಲದಿದ್ದರೆ, ಪುನಃ ತೆರಿಗೆ ಕಟ್ಟಬೇಕು. ಇದು ಸಂಪೂರ್ಣವಾಗಿ ಅಧಿಕಾರಿಗಳ ನಿರ್ಲಕ್ಷ್ಯತನವಾಗಿದೆ ಎಂದು ಬೇಸರ ವ್ಯಕ್ತಪಡಿಸಿದರು.

ಕರ್ನಾಟಕ ರಾಜ್ಯ ಡಾ.ಬಿ.ಆರ್.ಅಂಬೇಡ್ಕರ್ ರಕ್ಷಣಾ ಸಮಿತಿಯ ರಾಜ್ಯಾಧ್ಯಕ್ಷ ಸಿ.ಶ್ರೀನಿವಾಸ್ ಮಾತನಾಡಿ, ಪುರಸಭೆಯಲ್ಲಿ, ಅರ್ಹ ಅರ್ಜಿದಾರರು, ನೇರವಾಗಿ ಬಂದು ಖಾತೆಗಾಗಿ ಅರ್ಜಿ ಕೊಟ್ಟರೆ, ಇಲ್ಲಿ ಖಾತೆಗಳಾಗುವುದಿಲ್ಲ. ಮಧ್ಯವರ್ತಿಗಳು, ಪ್ರಭಾವಿಗಳ ಮೂಲಕ ಬಂದರೆ ಅಧಿಕಾರಿಗಳು ಮೂರೇ ದಿನಕ್ಕೆ ಖಾತೆ ಮಾಡಿಕೊಡುತ್ತಾರೆ. ಬಡವರ ಖಾತೆಗಳಿಗೆ ಸರ್ವರ್ ಸಮಸ್ಯೆ ಕಾಡುತ್ತದೆ. ಪ್ರಭಾವಿಗಳು ತಂದು ಕೊಡುವ ಖಾತೆಗಳು ಬೇಗನೆ ಆಗುತ್ತವೆ ಇಂತಹ ವ್ಯವಸ್ಥೆ ಇಲ್ಲಿದೆ ಎಂದು ಆರೋಪ ಮಾಡಿದರು. ಸಾರ್ವಜನಿಕರಿಗೆ ಅಧಿಕಾರಿಗಳ ಕಡೆಯಿಂದ ಆಗಿರುವಂತಹ ಸಮಸ್ಯೆಯನ್ನು ಶೀಘ್ರವಾಗಿ ಬಗೆಹರಿಸುವುದರ ಜೊತೆಗೆ, ಮುಂದೆ ಇಂತಹ ಸಮಸ್ಯೆ ಉದ್ಭವವಾಗದಂತೆ ಮುಂಜಾಗ್ರತೆ ವಹಿಸುತ್ತೇವೆ. ಎಂದು ಪುರಸಭೆ ಅಧ್ಯಕ್ಷೆ ಎಸ್.ಭವ್ಯಾಮಹೇಶ್ ಅವರು, ಮನವಿ ಮಾಡಿಕೊಂಡ ನಂತರ, ಪ್ರತಿಭಟನೆ ಕೈ ಬಿಟ್ಟರು.

# ಶಿಕ್ಷಣ ಇಲಾಖೆಯ 'ಸಂಸತ್ ಭವನ' ಸ್ತಬ್ಧಚಿತ್ರಕ್ಕೆ ತೃತೀಯ ಬಹುಮಾನ

ಚಿಕ್ಕಬಳ್ಳಾಪುರ

ನಗರದ ಸರ್. ಎಂ. ವಿಶ್ವೇಶ್ವರಯ್ಯ ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲಾಡಳಿತ ಹಾಗೂ ಜಿಲ್ಲಾ ಪಂಚಾಯಿತಿ ವತಿಯಿಂದ ಹಮ್ಮಿಕೊಂಡಿದ್ದ ಡಾ. ಬಿ.ಆರ್. ಅಂಬೇಡ್ಕರ್ ಜಯಂತೋತ್ಸವದಲ್ಲಿ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ನಿರ್ಮಿಸಿದ್ದ ಸ್ತಬ್ಧಚಿತ್ರವು ಮೂರನೇ ಬಹುಮಾನವನ್ನು ಮುಡಿಗೇರಿಸಿಕೊಂಡಿದೆ.

ಜಿಲ್ಲೆಯ ಚಿತ್ರಕಲಾ ಶಿಕ್ಷಕರು ಅತ್ಯಂತ ಶ್ರದ್ಧೆಯಿಂದ ಸಿದ್ಧಪಡಿಸಿದ್ದ ಭವ್ಯ 'ಸಂಸತ್ ಭವನ'ದ ಮಾದರಿಯ ಸ್ತಬ್ಧಚಿತ್ರವು ಮೆರವಣಿಗೆಯುದ್ದಕ್ಕೂ ಸಾರ್ವಜನಿಕರ ಆಕರ್ಷಣೆಯ ಕೇಂದ್ರಬಿಂದುವಾಗಿತ್ತು.

ಆಕರ್ಷಕ ಕಲಾಕೃತಿ: ಕಾರ್ಯಕ್ರಮದ ಅಂಗವಾಗಿ ವಿವಿಧ ಇಲಾಖೆಗಳು ತಮ್ಮ ಇಲಾಖೆಯ ಸಾಧನೆ ಹಾಗೂ ಅಂಬೇಡ್ಕರ್ ಅವರ ಆಶಯಗಳನ್ನು ಸಾರುವ ಸ್ತಬ್ಧಚಿತ್ರಗಳನ್ನು ಪ್ರದರ್ಶಿಸಿದ್ದವು. ಈ ಪೈಕಿ ಶಿಕ್ಷಣ ಇಲಾಖೆಯ ವತಿಯಿಂದ ಸಿದ್ಧಗೊಂಡಿದ್ದ ಸಂಸತ್ ಭವನದ ಕಲಾಕೃತಿಯು ಅತ್ಯಂತ ನೈಜ ಹಾಗೂ ಆಕರ್ಷಕವಾಗಿ ಮೂಡಿಬಂದಿತ್ತು. ಈ ಕಲಾತ್ಮಕತೆಯನ್ನು ಗುರುತಿಸಿ ಜಿಲ್ಲಾಡಳಿತ ಮತ್ತು ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿಯು ತೃತೀಯ ಬಹುಮಾನ ಘೋಷಿಸಿದೆ.

ಶಿಕ್ಷಕರಿಗೆ ಅಭಿನಂದನೆ: ಈ ಸ್ತಬ್ಧಚಿತ್ರದ ಯಶಸ್ಸಿನ ಹಿಂದೆ ಜಿಲ್ಲೆಯ ಚಿತ್ರಕಲಾ ಶಿಕ್ಷಕರ ತಂಡದ ಪರಿಶ್ರಮವಿದೆ. ಸ್ತಬ್ಧಚಿತ್ರ ನಿರ್ಮಾಣದಲ್ಲಿ ತೊಡಗಿದ್ದ ಶಿಕ್ಷಕರಾದ ಸಿ.ಎಲ್. ಸತೀಶ್, ಎಂ. ನಾಗರಾಜು, ಸಸಿಂದ್ರ, ಎನ್. ಆರ್. ಸಂತೋಷ್ ಕುಮಾರ್, ನಂದೀಶ್ ಮತ್ತು ರಾಕೇಶ್ ಅವರ ತಂಡದ ಕಾರ್ಯವೈಖರಿಯನ್ನು ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ (ಡಿಡಿಪಿಐ) ವಿ. ರಮೇಶ್ ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿ (ಬಿಇಓ) ಸುಕನ್ಯಾ ಅವರು ಶ್ಲಾಘಿಸಿ, ಅಭಿನಂದನೆ ಸಲ್ಲಿಸಿದ್ದಾರೆ.



# ಜಲಕ್ಷಾಮ: ಬತ್ತಿದ ಕೊಳವೆಬಾವಿ, ಇಓ ಭೇಟಿ

ಮಾಲೂರು

ತಾಲೂಕಿನಲ್ಲಿ ಬಿಸಿಲಿನ ಜಳ ಹೆಚ್ಚಾದಂತೆ ಅಂತರ್ಜಲ ಮಟ್ಟ ಕುಸಿದಿದ್ದು, ವಿವಿಧ ಗ್ರಾಮ ಪಂಚಾಯಿತಿ ವ್ಯಾಪ್ತಿಯ 8 ಗ್ರಾಮಗಳಲ್ಲಿ ನೀರಿನ ಸಮಸ್ಯೆ ಉಂಟಾಗಿದೆ. ಈ ಪೈಕಿ 6 ಗ್ರಾಮಗಳಿಗೆ ಹೊಸದಾಗಿ ಕೊಳವೆಬಾವಿ ಕೊರೆಸುವ ಮೂಲಕ ಶಾಶ್ವತ ಪರಿಹಾರ ಕಲ್ಪಿಸಲು ಕ್ರಿಯಾಯೋಜನೆ ಸಿದ್ಧಪಡಿಸಲಾಗಿದೆ ಎಂದು ತಾಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ (ಇಒ) ವಿ. ಕೃಷ್ಣಪ್ಪ ತಿಳಿಸಿದರು.

ಜಿಲ್ಲಾಧಿಕಾರಿಗಳ ಆದೇಶದ ಮೇರೆಗೆ ತಾಲೂಕಿನ ಕುಡಿಯನೂರು ಗ್ರಾಪಂನ ಸೊಣಪನಹಟ್ಟಿ, ಸಂತೆಹಳ್ಳಿ ಗ್ರಾಪಂನ ಚನ್ನಕಲ್, ಹಾಗೂ ಬಾಳಿಗನಹಳ್ಳಿ ಗ್ರಾಪಂ ವ್ಯಾಪ್ತಿಯ ಬೈರಾಗಿ ಮಠ, ಎಂ. ಉಪ್ಪಾರಹಳ್ಳಿ ಗ್ರಾಮಗಳಿಗೆ ಖುದ್ದಾಗಿ ಭೇಟಿ ನೀಡಿ ಪರಿಶೀಲಿಸಿದ ನಂತರ ಅವರು ಮಾತನಾಡಿದರು.

ಗ್ರಾಮಗಳಲ್ಲಿನ ಸರ್ಕಾರಿ ಕೊಳವೆಬಾವಿಗಳು ಬತ್ತಿ ಹೋಗಿರುವುದನ್ನು ಗಮನಿಸಿದ ಇಒ ಅವರು, ಪ್ರಸ್ತುತ ನೀರು ಪೂರೈಸುತ್ತಿರುವ ಖಾಸಗಿ ಕೊಳವೆಬಾವಿಗಳ ಸ್ಥಿತಿಗತಿಗಳನ್ನು ಪರಿಶೀಲಿಸಿದರು. "ಸದ್ಯ ಎರಡು ಗ್ರಾಮಗಳಿಗೆ ಖಾಸಗಿ ಕೊಳವೆಬಾವಿಗಳ ಮೂಲಕ ನೀರು ಪೂರೈಸಲಾಗುತ್ತಿದೆ. ಉಳಿದ ಗ್ರಾಮಗಳಲ್ಲಿನ ಸಮಸ್ಯೆ ನಿವಾರಣೆಗೆ ಟಾಸ್ಕ್ ಫೋರ್ಸ್ ಸಭೆಯಲ್ಲಿ ಅನುಮೋದನೆ ಪಡೆದು ಶೀಘ್ರವೇ ಹೊಸ ಕೊಳವೆಬಾವಿಗಳನ್ನು ಕೊರೆಸಲಾಗುವುದು," ಎಂದರು.

ನೀರಿನ ಸಮಸ್ಯೆ ಕುರಿತು ದೂರು ನೀಡಲು ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲಿ ದಿನದ 24 ಗಂಟೆಯೂ ಕಾರ್ಯನಿರ್ವಹಿಸುವ ಸಹಾಯವಾಣಿ ಆರಂಭಿಸಲಾಗಿದೆ. ಸಾರ್ವಜನಿಕರು ನೀಡುವ ದೂರುಗಳ ದಾಖಲಾತಿ ವಹಿಯನ್ನು ಪರಿಶೀಲಿಸಿದ ಕೃಷ್ಣಪ್ಪ ಅವರು, ಯಾವುದೇ ಗ್ರಾಮದಲ್ಲಿ ನೀರಿನ ಹಾಹಾಕಾರ ಉಂಟಾಗದಂತೆ ಎಚ್ಚರಿಕೆ ವಹಿಸಲು ಅಧಿಕಾರಿಗಳಿಗೆ ಸೂಚಿಸಿದರು.

ಅಬ್ಬೇನಹಳ್ಳಿ ಸಹಾಯವಾಣಿ ಸಂಖ್ಯೆ 9972700300, ಅರಳೇರಿ 9731847925, ಬಾಳಿಗಾನಹಳ್ಳಿ 9986654047, ಬನಹಳ್ಳಿ 8660449090, ಚಿಕ್ಕ ಕುಂತೂರು 9164719299, ಚಿಕ್ಕ ತಿರುಪತಿ 9343675290, ಡಿ ಎನ್ ದೊಡ್ಡಿ 914127033, ದಿನಹಳ್ಳಿ 8310975740, ದೊಡ್ಡ ಶಿವಾರ 9448243631, ಹಸಂಡಹಳ್ಳಿ 8310975740, ಹುಳದೇನಹಳ್ಳಿ 7090565477, ಹೆಚ್. ಹೊಸಕೋಟೆ 9448243631, ಹುಂಗೇನಹಳ್ಳಿ 9480049370, ಜಯಮಂಗಲ 8495017789, ಕೆ.ಜಿ.ಹಳ್ಳಿ 9902834954, ಕೋಂಡಶೆಟ್ಟಿಹಳ್ಳಿ 8971459329, ಕುಡಿಯನೂರು 9738639414, ಲಕ್ಕೂರು 938007965, ಮಡಿವಾಳ 9449678450, ಮಾಸ್ತಿ 9742908428, ನೊಸಗೆರೆ 9980916179, ನೂಟವೇ 831004141, ರಾಜೇನಹಳ್ಳಿ 810582372, ಸಂತೆಹಳ್ಳಿ 7892268745, ಶಿವಾರಪಟ್ಟಣ 990080998, ಟೇಕಲ್ 9964184538, ತೊರ್ನಹಳ್ಳಿ 9972913110, ತೃಣಸಿ 9482940760, ಈ ದೂರವಾಣಿ ಸಂಖ್ಯೆಗಳಿಗೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಾಮಗಳಲ್ಲಿ ನೀರಿನ ಸಮಸ್ಯೆ ಇದ್ದಲ್ಲಿ ಮಾಹಿತಿ ನೀಡಿದ್ದಲ್ಲಿ ತ್ವರಿತ ಗತಿಯಲ್ಲಿ ನೀರಿನ ಸಮಸ್ಯೆ ಬಗೆಹರಿಸಲಾಗುವುದು. ತಾಲೂಕಿನ 28 ಗ್ರಾಮ ಪಂಚಾಯಿತಿಗಳ ಕುಡಿಯುವ ನೀರಿನ ತುರ್ತು ಪರಿಹಾರಕ್ಕಾಗಿ ಟಾಸ್ ಫೋರ್ಸ್ ಸಭೆಗೆ ಕ್ರಿಯಾಯೋಜನೆ ಸಿದ್ದಪಡಿಸಿರುವುದಾಗಿ ಹೇಳಿದರು.

ಶಾಸಕರ ಅಧ್ಯಕ್ಷತೆಯಲ್ಲಿ ನಡೆಯಲಿರುವ ಟಾಸ್ಕ್ ಫೋರ್ಸ್ ಸಭೆಯಲ್ಲಿ ನೀರಿನ ಸಮಸ್ಯೆಯಿರುವ ಗ್ರಾಮಗಳ ಕ್ರಿಯಾಯೋಜನೆಗೆ ಅನುಮೋದನೆ ಪಡೆದು, ಯುದ್ಧೋಪಾದಿಯಲ್ಲಿ ಕಾಮಗಾರಿ ಕೈಗೆತ್ತಿಕೊಳ್ಳಲಾಗುವುದು ಎಂದು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಾದ ಅಂಬರೀಶ್, ರವೀಂದ್ರ, ಶಂಕರ್ ಸೇರಿದಂತೆ ಇತರ ಸಿಬ್ಬಂದಿ



Printed by gandasi sadananda swamy, published by gandasi sadanandaswamy, owned by gandasi sadananda swamy. Printed at LAVANYA MUDRANA No. 79, TR mill, compound, 5th main 9th corss, Chamarajpet Bangalore-560018, published at No.531, prakruthi nilaya, kalikanagar, Andrahalli, Vishwaneedam Post, Bangalore-560091. Editor: Gandasi sadanandaswamy